ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 60
18–8–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 60

## ನಿಗಮದ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಿ

### ಶರಣ ನುಲಿಯ ಚಂದಯ್ಯ ಜಯಂತಿಯಲ್ಲಿ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ಹೇಳಿಕೆ

**ದಾವಣಗೆರೆ :** ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರು ಗ್ರಾಮದಲ್ಲಿ ಈಚೆಗೆ ಆಯೋಜಿಸಲಾಗಿದ್ದ ಶರಣ ನುಲಿಯ ಚಂದಯ್ಯನವರ 918ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು.

ಅಲೆಮಾರಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗೆ ಫಲಾಪೇಕ್ಷೆಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅಭಿವೃದ್ಧಿ ನಿಗಮದಡಿ ಬರುವ 74 ಅಲೆಮಾರಿ ಜನಾಂಗದವರು ಈ ಅವಕಾಶವನ್ನು ಸದುಪಯೋಗ ಪಡೆಸಿಕೊಳ್ಳಬೇಕೆಂದು ಕರೆ ನೀಡಿದರು. ಡಾ.ಬಿ.ಆರ್.ಅಂಬೇಡ್ಕರ್ ವಸತಿ ಯೋಜನೆ ಸಮರ್ಪಕವಾಗಿ ಅನುಷ್ಠಾನ ಮಾಡದ ಕಾರಣ ರೂ.100 ಕೋಟಿ ಹಣವನ್ನು ದೇವನಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ವರ್ಗಾಯಿಸಲು ಆದೇಶಿಸಲಾಗಿದೆ. ಈ ಆದೇಶವನ್ನು ರದ್ದು ಪಡಿಸಿ ಅನುದಾನ ಮತ್ತು



ಗುರಿಗಳನ್ನು ಹಿಂತಿರುಗಿಸಿ ಆದೇಶ ಮಾಡಬೇಕೆಂದು ಮುಖ್ಯಮಂತ್ರಿಳನ್ನು ಒತ್ತಾಯ ಮಾಡಿರುವುದಾಗಿ ತಿಳಿಸಿದರು. ಆರ್ಥಿಕವಾಗಿ ಅಶಕ್ತರಾದ ಅಲೆಮಾರಿ ಸಮುದಾಯದ ಮಕ್ಕಳನ್ನು ಕ್ರೈಸ್ ಸಂಸ್ಥೆ, ವಸತಿ ಶಾಲೆಗಳಿಗೆ ಪ್ರವೇಶ ಕಲ್ಪಿಸಲು ಹೆಚ್ಚಿನ ಆದ್ಯತೆ ನೀಡಬೇಕು. ಶಿಕ್ಷಣದ ಮಹತ್ವದ ತಿಳುವಳಿಕೆ ನೀಡಿ ಅಲೆಮಾರಿ ಮಕ್ಕಳನ್ನು ಸುಶಿಕ್ಷಿತರನ್ನಾಗಿಸಲು ಶಾಲೆಯತ್ತ ಸೆಳೆಯುವೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಕೊರಮ ಸಮಾಜದ ಮುಖಂಡ ಕೆಂಚಪ್ಪ ಜಿಲ್ಲೆಯ ಅಲೆಮಾರಿಗಳಿಗೆ ಹೆಚ್ಚಿನ ಗುರಿಗಳನ್ನು ನಿಗದಿಪಡಿಸಲು ಕೋರಿದರು.

ಅಖಿಲ ಕರ್ನಾಟಕ ಕುಳುವ ಮಹಾಸಂಘದ ಪ್ರಧಾನ ಕಾರ್ಯದರ್ಶಿ ಆನಂದ್ ಕುಮಾರ್ ಏಕಲವ್ಯ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಪರಿಶಿಷ್ಟ ವರ್ಗಗಳ ಸಮಾಜ ಕಲ್ಯಾಣ ಅಧಿಕಾರಿ ನವೀನ್, ಗ್ರಾ..ಪಂ ಅದ್ಯಕ್ಷೆ ರೇಣುಕ, ಸಮಾಜ ಮುಖಂಡರಾದ ರಮೇಶ್, ದೇವೇಂದ್ರಪ್ಪ , ಚಂದ್ರು, ಮದುಸುಧನ್, ಹರೀಶ್ ಮತ್ತು ಗ್ರಾಮಸ್ತರು ಉಪಸ್ಥಿತರಿದ್ದರು.

## ತಾಯ್ನಾಡಿಗೆ ಮರಳಿದ ಗಗನಯಾನಿ ಕ್ಯಾಪ್ಟನ್ ಶುಭಾಂಶು ಶುಕ್ಲಾ: ಹೆಮ್ಮೆಯಿಂದ ಸ್ವಾಗತ



**ಹೊಸದಿಲ್ಲಿ:** ಅಂತಾರಾಷ್ಟ್ರೀಯ ಬಾಹ್ಯಾಯಿಕಾಶ ನಿಲ್ದಾಣಕ್ಕೆ (ಐಎಸ್‌ಎಸ್) ತೆರಳಿ ಸುರಕ್ಷಿತವಾಗಿ ಭೂಮಿಗೆ ಮರಳಿದ ಮೊದಲ ಭಾರತೀಯ ಎಂಬ ಶ್ರೇಯಕ್ಕೆ ಪಾತ್ರವಾದ ಗಗನಯಾನಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಭಾನುವಾರ ಬೆಳಗ್ಗಿನ ಜಾವ ತಾಯ್ನಾಡಿಗೆ ಆಗಮಿಸಿದ್ದಾರೆ.

ಶುಕ್ಲಾ ಅವರನ್ನು ದೆಹಲಿಯ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪತ್ನಿ ಕಾಮ್ನಾ, ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಸ್ವಾಗತಿಸಿದರು . ಶುಭಾಂಶು ಅವರು ಲಖನೌಗೆ ತೆರಳುವ ಮುನ್ನ ರಾಷ್ಟ್ರ ರಾಜಧಾನಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಅನುಭವ ಹಂಚಿಕೊಳ್ಳುವ ಸಾಧ್ಯತೆ ಇದೆ. ಆಗಸ್ಟ್ 23ರಂದು ದಿಲ್ಲಿಯಲ್ಲಿ ನಡೆಯಲಿರುವ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಕಾರ್ಯಕ್ರಮದಲ್ಲಿಅವರು ಭಾಗಿಯಾಗಲಿದ್ದಾರೆ ಎಂದು ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

ಶುಕ್ಲಾ ಅವರು ನಾಸಾ ನೇತೃತ್ವದ ಆಕ್ಸಿಯಂ–4 ಮಿಷನ್‌ನಲ್ಲಿ ಭಾಗವಹಿಸಿದ್ದರು. ಶುಕ್ಲಾ ಅವರು ಬಾಹ್ಯಾಕಾಶಕ್ಕೆ ಹೋದ ಎರಡನೇ ಭಾರತೀಯ ವ್ಯಕ್ತಿ. ಅವರು 18 ದಿನಗಳ ಕಾಲ ಅಂತರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದಲ್ಲಿ ಇದ್ದರು. ಜುಲೈ 15 ರಂದು ಕ್ಯಾಲಿಫೋರ್ನಿಯಾ ಕರಾವಳಿಯಲ್ಲಿ ಭೂಮಿಗೆ ಇಳಿದಿದ್ದರು. ಭಾರತದ ಬಾಹ್ಯಾಕಾಶ ಯೋಜನೆಗಳಿಗೆ ಶುಕ್ಲಾ ಅವರ ಅನುಭವ ನೆರವಾಗಲಿದೆ.

## ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಬಲೆಗೆ ಬಿದ್ದ ಇಬ್ಬರು ಪೊಲೀಸ್ ಅಧಿಕಾರಿಗಳು

**ಬೆಂಗಳೂರು:** ರಾಮಮೂರ್ತಿ ನಗರ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಅಧಿಕಾರಿಗಳು ಮತ್ತು ಒಬ್ಬ ಖಾಸಗಿ ವ್ಯಕ್ತಿ 1 ಲಕ್ಷ ರೂ. ಲಂಚ ಪಡೆಯುತ್ತಿದ್ದಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ ಎಂದು ಲೋಕಾಯುಕ್ತ ಅಧಿಕಾರಿಗಳು ಭಾನುವಾರ ತಿಳಿಸಿದ್ದಾರೆ.

ಆರೋಪಿಗಳನ್ನು ಪೊಲೀಸ್ ಇನ್ಸ್‌ಪೆಕ್ಟರ್ ರಾಜಶೇಖರ್ (48), ಸಬ್ ಇನ್ಸ್‌ಪೆಕ್ಟರ್ ರುಮಾನ್ ಪಾಷಾ (32) ಮತ್ತು ದೇವರ ಜೀವನಹಳ್ಳಿಯ ಇಮ್ರಾನ್ ಬಾಬು (32) ಎಂದು ಗುರುತಿಸಲಾಗಿದೆ.

ಕೇಳಿದ್ದ ಹಣದಲ್ಲಿ 1 ಲಕ್ಷ ರೂ. ಪಡೆಯುತ್ತಿದ್ದಾಗ ಶನಿವಾರ ಸಿಕ್ಕಿಬಿದ್ದಿದ್ದು, ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಕೆಆರ್ ಪುರಂ ನಿವಾಸಿ ಮಂಜುನಾಥ್ (47) ಎಂಬುವವರು ಲೋಕಾಯುಕ್ತ ಅಧಿಕಾರಿಗಳನ್ನು ಸಂಪರ್ಕಿಸಿ, ಆಭರಣ ಮತ್ತು ನಗದು ಕಾಣೆಯಾದ ಬಗ್ಗೆ ಮನೆ ವಿವಾದಕ್ಕೆ ಸಂಬಂಧಿಸಿದ ದೂರಿನ ತನಿಖೆಗಾಗಿ ಆರೋಪಿಗಳು 2 ಲಕ್ಷ ರೂ. ಬೇಡಿಕೆ ಇಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

## ಧರ್ಮಸ್ಥಳ ಪ್ರಕರಣ : ಮೊದಲು ಮುಸುಕುದಾರಿಯ ಮಂಪರು ಪರೀಕ್ಷೆ ಮಾಡಿ' ಕೈ ಶಾಸಕರ ಒತ್ತಾಯ

**ಬೆಳಗಾವಿ:** ದೇಶಾದ್ಯಂತ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವ ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಸುಕುದಾರಿ ಸಾಕ್ಷಿದಾರನ ವಿರುದ್ಧ ಕಿಡಿಕಾರಿರುವ ಕಾಂಗ್ರೆಸ್ ಶಾಸಕರೊಬ್ಬರು 'ಮೊದಲು ಆತನ ಮಂಪರು ಪರೀಕ್ಷೆ ಮಾಡಿ' ಎಂದು ಒತ್ತಾಯಿಸಿದ್ದಾರೆ.

ಧರ್ಮಸ್ಥಳ ಸಾಮೂಹಿಕ ಸಮಾಧಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಿವಿಧ ಪ್ರದೇಶಗಳಲ್ಲಿ ನಡೆದಿರುವ ಶೋಧ ಕಾರ್ಯಾಚರಣೆಯಲ್ಲಿ ಮುಸುಕುದಾರಿ ದೂರುದಾರ ಹೇಳಿಕೊಂಡಂತೆ ದೊಡ್ಡ ಪ್ರಮಾಣದಲ್ಲಿ ಅಸ್ತಿಪಂಜರಗಳು ದೊರೆತಿಲ್ಲ. ಇದು ಆತನ ಆರೋಪಗಳ ಮೇಲೆಯೇ ಶಂಕೆ ಮೂಡುವಂತೆ ಮಾಡಿದ್ದು, ಇದೇ ವಿಚಾರವಾಗಿ ಕಾಂಗ್ರೆಸ್ ಶಾಸಕ ಲಕ್ಷ್ಮಣ್ ಸವದಿ ಕಿಡಿಕಾರಿದ್ದಾರೆ.

## 'ಅಕ್ರಮ ನಿರ್ಮಾಣಕ್ಕೆ ಕಡಿವಾಣ

## ವಾಸಯೋಗ್ಯ ಪ್ರಮಾಣ ಪತ್ರವಿಲ್ಲದ 4 ಲಕ್ಷ ಕಟ್ಟಡಗಳಿಗೆ ನೀರು, ವಿದ್ಯುತ್ ಸಂಪರ್ಕಕ್ಕೆ ತಡೆ'

**ಬೆಂಗಳೂರು:** ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವ ಹಾಗೂ ದುರ್ಬಲಗೊಂಡಿರುವ ಕಟ್ಟಡಗಳನ್ನು ಮೊದಲು ಭದ್ರಗೊಳಿಸುವ ಕೆಲಸವಾಗಬೇಕು. ಇಂತಹ ಕಟ್ಟಡಗಳನ್ನು ಗುರುತಿಸಿ ನೋಟಿಸ್ ನೀಡುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಧರ್ಮರಾಯಸ್ವಾಮಿ ದೇವಾಲಯದ ಬಳಿಯ ನಗರ್ತಪೇಟೆಯಲ್ಲಿ ಬೆಂಕಿ ಅವಘಡದಿಂದ ಹಾನಿಗೊಳಗಾದ ಸ್ಥಳಕ್ಕೆ ಡಿಸಿಎಂ ಶಿವಕುಮಾರ್ ಅವರು ಭಾನುವಾರ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ನಂತರ ಮಾತನಾಡಿದ ಅವರು, ಎರಡು, ಮೂರು ಮಹಡಿಗಳನ್ನು ಕಟ್ಟುವ ಕಡೆಗಳಲ್ಲಿ ಎಂಟತ್ತು ಮಹಡಿಗಳನ್ನು ನಿರ್ಮಾಣ ಮಾಡಲಾಗಿದೆ. ಹಲವಾರು ಕಟ್ಟಡಗಳು ವಾಸಕ್ಕೆ ಯೋಗ್ಯವಿಲ್ಲದಂತಾಗಿವೆ.

ಇಂತಹ ಕಟ್ಟಡಗಳನ್ನು ಹೊಡೆದು ಹಾಕುವುದು ನಂತರದ ವಿಚಾರ. ಇದರ ಬಗ್ಗೆ ಮೊದಲು ಸಮೀಕ್ಷೆ ನಡೆಸಲಾಗುವುದು. ಇದು ಒಂದೇ ದಿನಕ್ಕೆ ಮುಗಿಯುವ ಕೆಲಸವಲ್ಲ. ವರ್ಷಗಟ್ಟಲೆ ಹಿಡಿಯುತ್ತದೆ. ದೆಹಲಿ, ಮುಂಬೈನಲ್ಲೂ ಇದೇ ಪರಿಸ್ಥಿತಿ ಎದುರಾಗಿದೆ. ಒಳಗೆ ಬಂದು ನೋಡಿದಾಗ ನನಗೆ ಗಾಬರಿಯಾಯಿತು. ಇಂತಹ ಇಕ್ಕಟ್ಟಿನ ಜಾಗದಲ್ಲಿ ಬೆಂಕಿ ಅವಘಡ ನಡೆದರೆ ಜನ ಓಡಿ ಹೋಗುತ್ತಾರೆ, ಆಗ ಕಾಲ್ತುಳಿತ ಉಂಟಾಗಿಯೇ ಜನ ಸಾಯುತ್ತಾರೆ" ಎಂದರು.

ನಿರ್ಲಕ್ಷ್ಯ ವಹಿಸಿರುವ ಕಟ್ಟಡ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ. ಅವಘಡ ನಡೆದ



ಕಟ್ಟಡದ ಮಾಲೀಕರನ್ನೂ ಸಹ ಬಂಧಿಸಲಾಗಿದೆ. ಸೂಕ್ತ ಕಾನೂನು ಕ್ರಮ ಜರುಗಿಸಲು ಪೊಲೀಸರಿಗೆ ಮುಕ್ತ ಅವಕಾಶ ನೀಡಲಾಗಿದೆ. ಅವಘಡದಲ್ಲಿ ಮೃತಪಟ್ಟ ಪ್ರತಿ ವ್ಯಕ್ತಿಗಳ ಕುಟುಂಬಸ್ಥರಿಗೆ ರೂ. 5 ಲಕ್ಷ ಪರಿಹಾರ ನೀಡಲು ಸರ್ಕಾರ ತೀರ್ಮಾನಿಸಿದೆ ಎಂದು ತಿಳಿಸಿದರು.

ಕೂಡಲೇ ದುರ್ಬಲ ಕಟ್ಟಡಗಳನ್ನು ಕೆಡವಲು ಹೋಗುವುದಿಲ್ಲ. ಮಾಲೀಕರು ಕೂಡಲೇ ದುರಸ್ಥಿಗೆ ಒಳಪಡಿಸಬೇಕು. ಇಲ್ಲದಿದ್ದರೆ ಕ್ರಮ ತೆಗೆದುಕೊಳ್ಳುತ್ತೇವೆ. ಏಕೆಂದರೆ ದುರ್ಬಲಗೊಂಡಿರುವ ಕಟ್ಟಡಗಳು ಕುಸಿತವಾಗಿ ದೊಡ್ಡ ಸಮಸ್ಯೆ ಎದುರಾಗುವುದು ಬೇಡ. ಭವಿಷ್ಯದಲ್ಲಿ ಈ ರೀತಿಯಾಗಿ ಕಟ್ಟಡಗಳ ನಿರ್ಮಾಣಕ್ಕೆ ಯಾವುದೇ ಕಾರಣಕ್ಕೂ ಅನುಮತಿ ನೀಡುವುದಿಲ್ಲ" ಎಂದು ಹೇಳಿದರು.

ಅಕ್ರಮ ಕಟ್ಟಡ ನಿರ್ಮಾಣದ ಬಗ್ಗೆ ಕೇಳಿದಾಗ ನಗರದಲ್ಲಿ ಶೇ.70 ರಷ್ಟು ಕಟ್ಟಡ ನಿರ್ಮಾಣ ಅಕ್ರಮವಾಗಿದೆ. ನೂತನ ಬಿಡಿಎ ಲೇಔಟ್ ಗಳಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚು ಮಹಡಿ ನಿರ್ಮಾಣ ಮಾಡುತ್ತಿದ್ದಾರೆ. ಅದಕ್ಕೆ ಈಗ ಸುಪ್ರೀಂ ಕೋರ್ಟ್ ತೀರ್ಪು ವಾಸಯೋಗ್ಯ ಪ್ರಮಾಪತ್ರವಿಲ್ಲದೇ ನೀರು, ವಿದ್ಯುತ್ ಸಂಪರ್ಕ ನೀಡಬಾರದು ಎಂದು ಮಾರ್ಗದರ್ಶನ ನೀಡಿದೆ.

ಈ ಕಾರಣಕ್ಕೆ 4 ಲಕ್ಷ ಸಂಪರ್ಕಗಳನ್ನು ನಿಲ್ಲಿಸಲಾಗಿದೆ. 30/40 ಅಳತೆಯ ಎರಡು ಮಹಡಿಯ ಕಟ್ಟಡಗಳಿಗೆ ವಿನಾಯಿತಿ ನೀಡಬೇಕು ಎನ್ನುವ ವಿಚಾರವನ್ನು ಕ್ಯಾಬಿನೆಟ್ ಮುಂದೆ ತರಲಾಗುವುದು. ಸಂಪುಟ ಸಹೋದ್ಯೋಗಿಗಳು ಏನು ಹೇಳುತ್ತಾರೊ ನೋಡೋಣ" ಎಂದರು.

ಚಿಕ್ಕಪೇಟೆ, ನಗರ್ತಪೇಟೆ ಇವುಗಳು ಹೆಸರಿಗೆ ವಾಸಸ್ಥಳಗಳು, ಆದರೆ ವ್ಯಾಪಾರಿ ಕೇಂದ್ರಗಳಾಗಿ ಬದಲಾಗಿವೆ ಎಂದು ಕೇಳಿದಾಗ, "ಜನರ ಬಡತನದ ಬದುಕು. ಅಗ್ನಿಶಾಮಕ ನಿಯಮದ ಪ್ರಕಾರ ಹೋದರೆ ಎಲ್ಲಾ ಕಟ್ಟಡಗಳನ್ನು ಒಡೆದು ಹಾಕಬೇಕಾಗುತ್ತದೆ" ಎಂದರು.

"ಅನೇಕ ಕಟ್ಟಡಗಳ ಮೇಲ್ಭಾಗಕ್ಕೆ ಹತ್ತಲು ಸಹ ಆಗುತ್ತಿಲ್ಲ. ಶಾರ್ಟ್ ಸರ್ಕಿಟ್ ಆದ ಕಾರಣಕ್ಕೆ ಬೆಂಕಿ ಹೊತ್ತುಕೊಂಡು ಸಾವನ್ನಪ್ಪಿದ್ದಾರೆ. ಮೃತರೆಲ್ಲಾ ರಾಜಸ್ಥಾನ ಮೂಲದವರು. ಎಲ್ಲಿಯವರು ಆದರೇನು ಬದುಕು ಕಟ್ಟಿಕೊಳ್ಳಲು ಇಲ್ಲಿಗೆ ಬಂದಿದ್ದರು" ಎಂದರು.

## ವಿಧಾನಸೌಧ ಅಗೆಯಲು ಸಾಧ್ಯವೇ?: ವಿಶ್ವನಾಥ್

### ಹಾಸನದಲ್ಲಿ ಧರ್ಮಸ್ಥಳ ಚಲೋಗೆ ಸ್ವಾಗತ

**ಹಾಸನ:** ಶ್ರೀಕ್ಷೇತ್ರ ಧರ್ಮಸ್ಥಳ ವಿರುದ್ಧ ಷಡ್ಯಂತ್ರ ನಡೆಯುತ್ತಿದ್ದು, ವಿಧಾನಸೌಧ



ಕಟ್ಟುವ ಸಂದರ್ಭದಲ್ಲಿ ಯಾರನ್ನೋ ಕೊಲೆ ಮಾಡಿ ಸ್ಪೀಕರ್ ಕೂರುವ ಜಾಗದ ಕೆಳಗೆ ಹೂತಿದ್ದೇನೆ ಎಂದು ಹೇಳಿದರೆ ಅಲ್ಲೂ ಉತ್ಖನನ ಮಾಡಲು ಸಾಧ್ಯವೇ ಎಂದು ಯಲಹಂಕ ಶಾಸಕ ಎಸ್.ಆರ್.ವಿಶ್ವನಾಥ್ ಪ್ರಶ್ನಿಸಿದರು.

ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ಅಪಪ್ರಚಾರ ವಿರೋಧಿಸಿ ಬಿಜೆಪಿ ಕಾರ್ಯಕರ್ತರು ಹಮ್ಮಿಕೊಂಡಿರುವ ಧರ್ಮಸ್ಥಳ ಚಲೋ ಅಭಿಯಾನ ಬೃಹತ್ ರ‍್ಯಾಲಿಗೆ ಹಾಸನಕ್ಕೆ ಆಗಮಿಸಿದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದರು.

ಅನಾಮಿಕ ಹೇಳಿದ ಮಾತನೆಲ್ಲ ಕೇಳಿದರೆ ಇಡೀ ಧರ್ಮಸ್ಥಳವನ್ನೇ ಅಗೆಯಬೇಕು. ಅದಕ್ಕೂ ಮೊದಲು ಅನಾಮಿಕನನ್ನು ಮಂಪರು ಪರೀಕ್ಷೆ ಮಾಡಲಿ. ಅವನು ಸುಳ್ಳು ಹೇಳಿದ್ದರೆ ಕ್ರಮ ಆಗಬೇಕು," ಎಂದು ಆಗ್ರಹಿಸಿದರು.

ಸೌಜನ್ಯ ಕೇಸ್ ತನಿಖೆಗೆ ನಮ್ಮ ಅಡ್ಡಿಯಿಲ್ಲ, ನಾವು ಸ್ವಾಗತಿಸುತ್ತೇವೆ. ಆದರೆ ಧರ್ಮಸ್ಥಳದ ಬುಡಕ್ಕೆ ಕೈ ಹಾಕುವ ಕೆಲಸವನ್ನು ವಿಚಾರವಾದಿಗಳು ಮತ್ತು ಧರ್ಮ ವಿರೋಧಿಗಳು ಮಾಡುತ್ತಿದ್ದಾರೆ. ಇದು ರಾಜ್ಯ ಮತ್ತು ದೇಶದ ಕೋಟ್ಯಾನುಕೋಟಿ ಭಕ್ತರ ಭಾವನೆಗೆ ಧಕ್ಕೆ ತರುವ ಕೃತ್ಯವಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಂಜುನಾಥಸ್ವಾಮಿ ಶಕ್ತಿವಂತ ದೇವರು. ಯಾರು ಇಂತಹ ಅಪಪ್ರಚಾರ ಮಾಡಿದ್ದಾರೆ ಅವರಿಗೆ ಶಿಕ್ಷೆಯನ್ನು ಕೊಡಲಿ,"ಎಂದು ಪ್ರಾರ್ಥಿಸುವುದಾಗಿ ಹೇಳಿದ ಅವರು, "ಸರಕಾರ ಕೊಡುವ ಶಿಕ್ಷೆ ಬೇರೆ, ದೇವರು ಕೊಡುವ ಶಿಕ್ಷೆ ಬೇರೆ. ನಿರಂತರ ಅಪಪ್ರಚಾರಕ್ಕೆ ಎಸ್‌ಐಟಿ ತನಿಖೆ ಅಗತ್ಯವಿತ್ತು. ಅನಾಮಿಕನ ಮಾತನ್ನು ಕೇಳಿ ತಪ್ಪು ಮಾಡಿದ್ದೇವೆ ಎಂದು ಸರಕಾರಕ್ಕೆ ಅನ್ನಿಸಿದೆ. ಅಧಿವೇಶನದಲ್ಲಿ ಸೋಮವಾರ ಎಸ್‌ಐಟಿ ತನಿಖೆ ವರದಿಯನ್ನು ಮಂಡಿಸಬೇಕು' ಎಂದು ಸರಕಾರವನ್ನು ಒತ್ತಾಯಿಸಿದರು. ದೇವರು ಶಿಕ್ಷೆ ಕೊಡಬೇಕಾದರೆ ನಿಧಾನವಾಗುತ್ತೆ. ಕಾಂಗ್ರೆಸ್‌ನವರು ಈಗ ಷಡ್ಯಂತ್ರ ಅಂಥ ಹೇಳುತ್ತಿದ್ದಾರೆ. ಅದಕ್ಕೆ ಉತ್ತರ ನೀಡಲು ನಾಳೆಯಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಬರಬೇಕು. ಧರ್ಮಸ್ಥಳ ಕ್ಷೇತ್ರ ಭಕ್ತರಿಂದ ತುಂಬಿ ತುಳುಕಬೇಕು. ಜನರು ದೇವರ ಮೇಲೆ ವಿಶ್ವಾಸ ಕಳೆದುಕೊಳ್ಳಬಾರದು" ಎಂದು ಮನವಿ ಮಾಡಿದರು.'ಪ್ರಕರಣವನ್ನು ಎಸ್‌ಐಟಿ ತನಿಖೆಗೆ ಕೊಟ್ಟಾಗ ಶವಗಳು ದೊರೆಯಬಹುದು ಎಂದು ಸರಕಾರ ಅಂದುಕೊಂಡಿತ್ತು. 13ನೇ ಪಾಯಿಂಟ್‌ನಲ್ಲೂ ಏನು ಸಿಗಲಿಲ್ಲ. ಈಗ ಧರ್ಮಸ್ಥಳದ ಜತೆ ಇದ್ದೇವೆ ಎಂದು ಮಾತನಾಡಲು ಆರಂಭಿಸಿದ್ದಾರೆ" ಎಂದು ಸರಕಾರದ ವಿರುದ್ಧ ಟೀಕಿಸಿದರು.

## ಧರ್ಮಸ್ಥಳ : ದಿಗಂಬರ ಜೈನ ಸಮಾಜದ ಪ್ರತಿಭಟನೆ

**ಹರಪನಹಳ್ಳಿ:** ಜೈನ ಧರ್ಮದ ಬಗ್ಗೆ ಹಾಗೂ ಡಾ. ವೀರೇಂದ್ರ ಹೆಗ್ಡೆ ಬಗ್ಗೆ ಅವಹೇಳನಕಾರಿ ಮತ್ತು ಅಪಪ್ರಚಾರ ಮಾಡುತ್ತಿರುವುದನ್ನು ಖಂಡಿಸಿ ಇಲ್ಲಿನ ದಿಗಂಬರ ಜೈನ ಸಮಾಜದ ವತಿಯಿಂದ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ದಿಗಂಬರ ಜೈನ ಸಮಾಜದ ಅಧ್ಯಕ್ಷ ಪದ್ಮರಾಜ್ ಜೈನ್ ಮಾತನಾಡಿ, ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಡೆ ಬಗ್ಗೆ ಹಾಗೂ ಜೈನ ಧರ್ಮದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಕೆಲವರು ಇಲ್ಲಸಲ್ಲದ ಆರೋಪಗಳನ್ನು ಮಾಡಿ ವೀಡಿಯೊಗಳನ್ನು ಅಪ್‌ಲೋಡ್ ಮಾಡಿ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ. ಇದನ್ನು ಸಮಾಜವು ಕಟುವಾಗಿ ಖಂಡಿಸುತ್ತದೆ. ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಎಸ್.ಐ.ಟಿ. ತಂಡವನ್ನು ರಚಿಸಿದೆ. ಸತ್ಯಾಸತ್ಯತೆ ಕುರಿತು ತನಿಖೆ ನಡೆಯುತ್ತಿದೆ. ಯಾವುದೇ ರೀತಿಯ ವೀಡಿಯೊಗಳನ್ನು ಅಥವಾ ಸುಳ್ಳು ಸುದ್ದಿಗಳನ್ನು ಹಬ್ಬಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ದಿಗಂಬರ ಜೈನ ಸಮಾಜದ ಮಹಿಳಾ ಅಧ್ಯಕ್ಷರಾದ ಪದ್ಮಾವತಿ ಜೈನ್ ಮಾತನಾಡಿ, ಸಾಮಾಜಿಕ ಜಾಲತಾಣದಲ್ಲಿ ಜೈನ ಧರ್ಮದ ಬಗ್ಗೆ ಹಾಗೂ ಶ್ರೀ ಡಾ. ಹೆಗ್ಡೆ ಅವರ ಬಗ್ಗೆ ಏಕವಚನದಲ್ಲಿ ಮಾತನಾಡುತ್ತಿರುವ ಗಿರೀಶ್ ಮಟ್ಟಣ್ಣ, ಮಹೇಶ್ ಶೆಟ್ಟಿ ತಿಮರೋಡಿ ಹಾಗೂ ಇತರರ ವಿರುದ್ಧ ಕ್ರಮ ಕೈಗೊಳ್ಳಲು ಹರಪನಹಳ್ಳಿ ದಿಗಂಬರ ಜೈನ ಸಮಾಜದ ವತಿಯಿಂದ ದೂರು ನೀಡುವ ಮೂಲಕ ವಿನಂತಿಸಿಕೊಳ್ಳುತ್ತೇವೆ ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಯುವ ಘಟಕದ ಅಧ್ಯಕ್ಷ ಮಹಾವೀರ ಜೈನ್, ಪದ್ಮರಾಜ್ ಜೈನ್, ಪ್ರಸನ್ನಕುಮಾರ ಜೈನ್, ಇಜಾರಿ ಮಹಾವೀರ, ಪಂಡಿತ್ ಚಂದ್ರಪ್ರಭಾ, ಪಾರ್ಶ್ವನಾಥ, ಸಗರಿ ಅನಂತರಾಜ್, ಇಜಾರಿ, ಅಭಿನಂದನ್, ಅನಂತರಾಜ್, ಮಹಿಳಾ ಮುಖಂಡರಾದ ಲತಾ ಆರ್, ಜ್ವಾಲಾ, ಪೂರ್ಣಿಮಾ, ಪದ್ಮಾ ಐ ಸೇರಿದಂತೆ ಇತರರು ಉಪಸ್ಥಿತರಿದ್ದರು.




## ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವುದೇ ಸ್ವಚ್ಛತಾ ರ‍್ಯಾಲಿ ಉದ್ದೇಶ : ತಮ್ಮಯ್ಯ

**ಚಿಕ್ಕಮಗಳೂರು :** ನಗರದ ನಾಗರೀಕರಲ್ಲಿ ಸ್ವಚ್ಛತೆಯ ಬಗ್ಗೆ ಹೆಚ್ಚು ಅರಿವು ಮೂಡಿಸುವ ಉದ್ದೇಶದಿಂದ ಸ್ವಚ್ಛತಾ ರ‍್ಯಾಲಿ, ಮ್ಯಾರಥಾನ್ ಫ್ಲಾಗಿಂಗ್ ಅಭಿಯಾನ ನಡೆಸಲಾಗುತ್ತಿದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ತಿಳಿಸಿದರು.

ಅವರು ಇಂದು ತಾಲ್ಲೂಕು ಕಛೇರಿ ಆವರಣದಲ್ಲಿ ನಗರಸಭೆ, ಸ್ವಚ್ಛ ಭಾರತ್ ಮಿಷನ್, 2.0 ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಸ್ವಚ್ಛತಾ ರ‍್ಯಾಲಿ, ಮ್ಯಾರಥಾನ್ ಫ್ಲಾಗಿಂಗ್ ಅಭಿಯಾನ, ಸಹಿ ಅಭಿಯಾನ ಜಾಥಕ್ಕೆ ಡೋಲು ಬಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

2001–02 ರಲ್ಲಿ ನಗರದಲ್ಲಿ ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಸ್ವಚ್ಛಾ ಟ್ರಸ್ಟ್ ಪ್ರಾರಂಭಿಸಲಾಯಿತು, ಮನೆ–ಮನೆ ಕಸ ಸಂಗ್ರಹದ ಮೂಲಕ ಸ್ವಚ್ಛತೆ ಕಾಪಾಡಬೇಕೆಂದು ನಾಗರೀಕರಲ್ಲಿ ಅರಿವು ಮೂಡಿಸಲಾಗಿತ್ತು, ಸ್ವಚ್ಛತೆ ಕಾಪಾಡುವಲ್ಲಿ ನಗರಸಭೆ ರಾಜ್ಯದಲ್ಲೇ 2ನೇ ಸ್ಥಾನದಲ್ಲಿ ಇದೇ ಎಂದು ಹೇಳಿದರು.

ಪ್ರಪಂಚದಲ್ಲಿ ಸ್ವಿಡ್ಜರ್ ಲ್ಯಾಂಡ್ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿದ್ದು, ಅದೇ ರೀತಿ ಮಿನಿ ಸ್ವಿಡ್ಜರ್ ಲ್ಯಾಂಡಾಗಿ ಚಿಕ್ಕಮಗಳೂರು ಜಿಲ್ಲೆ ಪ್ರವಾಸೋದ್ಯಮಕ್ಕೆ ಹೆಚ್ಚಿನ ಆದ್ಯತೆ ನೀಡಿ, ಪ್ಲಾಸ್ಟಿಕ್ ಬಾಟಲಿ, ಕಸ ಸಂಪೂರ್ಣವಾಗಿ ನಿಷೇಧಿಸಲಾಗದಿದ್ದರೂ ಕಡಿಮೆ ಮಾಡಿ ನಿಯಂತ್ರಿಸಬೇಕೆಂದು ಕರೆ ನೀಡಿದರು.

ಪ್ರಕೃತಿ ಉಳಿಸಿ ಬೆಳೆಸುವಲ್ಲಿ ಪ್ರತಿಯೊಬ್ಬರು ಕೈ ಜೊಡಿಸಬೇಕು ಜೊತೆಗೆ ಜಲಮೂಲಗಳಿಗೆ ಪ್ಲಾಸ್ಟಿಕ್ ತ್ಯಾಜ್ಯ ಹಾಕಿ ಕಲಿಷಿತಗೊಳಿಸುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಪರಿಸರ ಹಾಗೂ ನಗರಸಭೆ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.



ಬಾವಿ ಪ್ರಜೆಗಳಾದ ಶಾಲಾ ಕಾಲೇಜು ವಿದ್ಯಾರ್ಥಿಗಳಲ್ಲಿ ಸ್ವಚ್ಛತೆ ಬಗ್ಗೆ ಶಾಲೆಗಳಿಗೆ ತೆರಳಿ ಪರಿಸರ, ಪ್ರಕೃತಿ, ಕಸ ವಿಲೇವಾರಿ ಬಗ್ಗೆ ಪ್ರಾಥಮಿಕ ಹಂತದಲ್ಲಿ ಅರಿವು ಮೂಡಿಸಬೇಕಾದ ಅಗತ್ಯ ಇದೆ ಎಂದು ಹೇಳಿದರು.

ಬಸವತತ್ವ ಪೀಠ ತತ್ವದ ಪೀಠಾಧ್ಯಕ್ಷ ಡಾ. ಬಸವ ಮರುಳಸಿದ್ಧ ಸ್ವಾಮೀಜಿ ಮಾತನಾಡಿ ದೇವರನ್ನು ಹೊರತುಪಡಿಸಿ ಸ್ವಚ್ಛತೆ ಅಗತ್ಯವಾಗಿದ್ದು, ನಗರ ಅತ್ಯಂತ ಸ್ವಚ್ಛ ನಗರ ಎಂದು ಹೆಸರುಗಳಿಸಿದ್ದು, ಪ್ರವಾಸೋದ್ಯಮದ ಮೂಲಕ ಅತಿ ಹೆಚ್ಚು ಹೆಸರು ಮಾಡುವ ಅವಕಾಶ ಜಿಲ್ಲಾ ಕೇಂದ್ರಕ್ಕೆ ಇದೇ ಎಂದು ತಿಳಿಸಿದರು.

ಸ್ವಚ್ಛತೆ ಕುರಿತು ಗಂಭೀರ ಆಲೋಚನೆ ಮಾಡಬೇಕು ಈ ನಿಟ್ಟಿನಲ್ಲಿ ನಗರಸಭೆ ಮನೆ–ಮನೆ ಕಸ ಸಂಗ್ರಹಿಸಲು ಕೈಗೊಂಡ ದೊಡ್ಡ ಉಪಕ್ರಮದಿಂದ ಯಶಸ್ವಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಈ ವಿಚಾರದಲ್ಲಿ ಎಲ್ಲರ ಸಹಭಾಗಿತ್ವ ಅಗತ್ಯವಾಗಿದ್ದು ಸಣ್ಣ–ಸಣ್ಣ ಕೊಡುಗೆ ಬಹಳ ದೊಡ್ಡ ಪರಿಣಾಮ ಬೀರುತ್ತದೆ ಎಂದು ಕಿವಿಮಾತು ಹೇಳಿದರು.

ನಗರಸಭಾ ಅಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ ಬೀದಿ ನಾಟಕ ಮತ್ತು ಗೋಡೆ ಬರಹಗಳ ಮೂಲಕ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ, ಇದರ ಜೊತೆಗೆ, ನಗರದ ನಾಗರೀಕರ ಮನೆ–ಮನೆ ಕಸ ಸಂಗ್ರಹಣೆಗೆ ಗಂಟೆ ಗಾಡಿಗಳ ಮೂಲಕ ಆದ್ಯತೆ ನೀಡಬೇಕೆಂದು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಕುಮಾರೆ ಗೌಡ, ಪರಮೇಶ್, ಲಕ್ಷ್ಮಣ್, ಸ್ವಚ್ಛ ಟ್ರಸ್ಟ್‌ನ ಡಾ. ಶುಭ ವಿಜಯ್, ಬ್ರಹ್ಮ ಕುಮಾರೀಸ್‌ನ ರಾಜಯೋಗಿನಿ ಬಿ.ಕೆ ಭಾಗ್ಯಕ್ಕ, ರೋಟರಿ ಮತ್ತು ಲಯನ್ಸ ಕ್ಲಬ್ ಸದಸ್ಯರು, ನಗರಸಭೆ ಸಿಬ್ಬಂದಿ ಮತ್ತಿತರರು ಉಪಸ್ಥಿತರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ವಿಷಾದಿಸಬೇಕಾಗುತ್ತದೆ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ.

### ವೃಷಭ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಮಕ್ಕಳ ಚಿಂತೆಗಳನ್ನು ಬೆಂಬಲಿಸುವುದು ಅಗತ್ಯ. ಪ್ರೇಮ ವೈಫಲ್ಯದ ನೋವಿಗೆ ಇವತ್ತು ನಿದ್ರಿಸಲು ಸಾಧ್ಯವಾಗುವುದಿಲ್ಲ.

### ಮಿಥುನ ರಾಶಿ

ನಿಮ್ಮ ಹಠಾತ್ ಮತ್ತು ಹಠಮಾರಿ ಪ್ರವೃತ್ತಿಯನ್ನು ವಿಶೇಷವಾಗಿ ಪಾರ್ಟಿಗಳಲ್ಲಿ ನಿಯಂತ್ರಿಸಲು ಪ್ರಯತ್ನಿಸಿ ಏಕೆಂದರೆ ಇದು ಪಕ್ಷದ ಮೂಡ್ ಹಾಳು ಮಾಡಬಹುದು. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

### ಕರ್ಕ ರಾಶಿ

ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಸಣ್ಣ ಮಕ್ಕಳು ನಿಮ್ಮನ್ನು ವ್ಯಸ್ತವಾಗಿರಿಸುತ್ತಾರೆ ಮತ್ತು ನಿಮಗೆ ಸಂತೋಷ ತರುತ್ತಾರೆ. ನೀವು ಯಾವಾಗಲೂ ಪರಸ್ಪರರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವವಿರುವುದಿಲ್ಲ.

### ಸಿಂಹ ರಾಶಿ

ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ ಹಾಗೂ ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

### ಕನ್ಯಾ ರಾಶಿ

ನಿಮ್ಮ ಹಠಾತ್ ಮತ್ತು ಹಠಮಾರಿ ಪ್ರವೃತ್ತಿಯನ್ನು ವಿಶೇಷವಾಗಿ ಪಾರ್ಟಿಗಳಲ್ಲಿ ನಿಯಂತ್ರಿಸಲು ಪ್ರಯತ್ನಿಸಿ ಏಕೆಂದರೆ ಇದು ಪಕ್ಷದ ಮೂಡ್ ಹಾಳು ಮಾಡಬಹುದು. ನೀವು ಉಳಿಸಿರುವ ಹಣ ಇಂದು ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೀಓಷದ ಸುದ್ದಿ ತರುತ್ತದೆ. ಇಂದು ನಿಮ್ಮ ಪ್ರೇಮಿಯನ್ನು ನಿರಾಸೆಗೊಳಿಸಬೇಡಿ ಇದು ನಂತರ ನಿಮ್ಮನ್ನು ಪಶ್ಚಾತ್ತಾಪಗೊಳ್ಳುವಂತೆ ಮಾಡುತ್ತದೆ.

### ತುಲಾ ರಾಶಿ

ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ಪ್ರೀತಿಪಾತ್ರರೊಡನೆ ಸಹಿತಿಂಡಿ ಮತ್ತು ಮಿಠಾಯಿ ಹಂಚಿಕೊಳ್ಳುವ ಸಾಧ್ಯತೆಯಿದೆ. ಸಹೋದ್ಯೋಗಿಗಳು ಮತ್ತು ಹಿರಿಯರ ಸಂಪೂರ್ಣ ಸಹಕಾರದಿಂದ ಕಛೇರಿಯಲ್ಲಿ ಕೆಲಸ ಬೇಗ ಮುಗಿಯುತ್ತದೆ.

### ವೃಶ್ಚಿಕ ರಾಶಿ

ತುಂಬಾ ಚಿಂತೆ ಮಾನಸಿಕ ಶಾಂತಿಗೆ ಭಂಗ ತರಬಹುದು. ಆತಂಕ, ಉದ್ವೇಗದ ಪ್ರತೀ ತುಣುಕೂ ದೇಹದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದರಿಂದ ಇದನ್ನು ತಡೆಯಿರಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಅನಿರೀಕ್ಷಿತ ಜವಾಬ್ದಾರಿಗಳು ನಿಮ್ಮ ದಿನದ ಯೋಜನೆಗಳಿಗೆ ಅಡ್ಡಿಪಡಿಸುತ್ತವೆ ನೀವು ಇತರರಿಗೆ ಹೆಚ್ಚು ಮತ್ತು ನಿಮಗಾಗಿ ಕಡಿಮೆ ಮಾಡಿಕೊಳ್ಳುತ್ತೀರಿ.

### ಧನು ರಾಶಿ

ಇತ್ತೀಚಿಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನೀವು ನಿಮ್ಮದೇ ರೀತಿಯ ಸಂವೇದನೆ ಹೊಂದಿರುವ ಜನರ ಸಂಪರ್ಕಕ್ಕೆ ಬರಲು ನಿಮಗೆ ಸಹಾಯ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು.

### ಮಕರ ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೊರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ. ರಾತ್ರಿಯನ್ನು ವಿಶೇಷವಾಗಿಸಲು ಮೊಂಬತ್ತಿಯ ಬೆಳಕಿನಲ್ಲಿ ನಿಮ್ಮ ಕುಟುಂಬದೊಂದಿಗೆ ಭೋಜನ ಮಾಡಿ ಹಾಗೂ ರಾತ್ರಿಯನ್ನು ಆನಂದಿಸಿ.

### ಕುಂಭ ರಾಶಿ

ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ನಿಮ್ಮ ಮಕ್ಕಳಿಗಾಗಿ ಯೋಜನೆಗಳು ಮಾಡಲು ಅತ್ಯುತ್ತಮ ದಿನ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಹಾಗೂ ಸಂವೇದನಾಶೀಲವಾಗಿವೆ.

### ಮೀನ ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ ಮತ್ತು ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆಯನ್ನು ಹೆಚ್ಚಿಸುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

## ಅಂಬಳೆ ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶಕ್ಕೆ ವಿದ್ಯುತ್ ಮತ್ತು ನೀರು ಸರಬರಾಜು



**ಚಿಕ್ಕಮಗಳೂರು:** ಚಿಕ್ಕಮಗಳೂರಿನ ಅಂಬಳೆ ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶಕ್ಕೆ ವಿದ್ಯುತ್ ಮತ್ತು ನೀರು ಸರಬರಾಜಿನಲ್ಲಿ ವ್ಯತ್ಯಯವಾಗದಂತೆ ನೋಡಿಕೊಳ್ಳಲು ಚಿಕ್ಕಮಗಳೂರು ಶಾಸಕ ಹೆಚ್.ಡಿ.ತಮ್ಮಯ್ಯರವರು ಅಧಿಕಾರಿಗಳಿಗೆ ಸೂಚನೆ ನೀಡಿ ನಿರಂತರ ವಿದ್ಯುತ್ ಪೂರೈಸಲು ತಿಳಿಸಿದ್ದಾರೆ.

ಇಲ್ಲಿನ ಅಂಬಳೆ ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ನಿರಂತರ ವಿದ್ಯುತ್ ಮತ್ತು ನೀರನ್ನು ಸರಬರಾಜು ವ್ಯತ್ಯಯ ವಾಗುತ್ತಿದ್ದುಇದರಿಂದಇಲ್ಲಿರುವ ಕಾರ್ಖಾನೆಗಳ ಕಾರ್ಯ ನಿರ್ವಹಣೆಅಸಾಧ್ಯವಾಗುತ್ತಿದ್ದು ಶಾಸಕರು ಮಧ್ಯಪ್ರವೇಶಿಸಿ ಕೈಗಾರಿಕಾ ಪ್ರದೇಶಕ್ಕೆ ದಿನದ 24 ಗಂಟೆಗಳಲ್ಲೂ ವಿದ್ಯುತ್ ಮತ್ತು ನೀರು ಸರಬರಾಜಿಗೆಕ್ರಮ ತೆಗೆದುಕೊಳ್ಳಬೇಕೆಂದು ಇಂಡಸ್ಟ್ರಿಯಲ್ ಏರಿಯಾ ಮಾಲೀಕರು ಮತ್ತು ಬಾಡಿಗೆದಾರರ ಸಂಘದ ಪದಾಧಿಕಾರಿಗಳು ಇಂದು ಚಿಕ್ಕಮಗಳೂರು ಶಾಸಕ ಹೆಚ್.ಡಿ.ತಮ್ಮಯ್ಯರವರನ್ನುಅವರಕಛೇರಿಯಲ್ಲಿ ಭೇಟಿ ಮಾಡಿ ಒತ್ತಾಯಿಸಿದ ಸಂದರ್ಭದಲ್ಲಿ ಅಧಿಕಾರಿಗಳಿಗೆ ಸ್ಥಳದಲ್ಲೇ ಈ ಸೂಚನೆ ನೀಡಿದರು.

ಕಾರ್ಖಾನೆಗಳಿಂದ ಅನೇಕರಿಗೆ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತಿದೆ. ಹಾಗೂ ವಿದ್ಯುತ್ ಮತ್ತು ನೀರಿ ಸರಬರಾಜಿನಲ್ಲಿಂ ಯಾವುದೇಕಾರಣಕ್ಕೂ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕೆಂದು ತಮ್ಮಯ್ಯರವರು ಅಧಿಕಾರಿಗಳಿಗೆ ಸೂಚನೆ ನೀಡಿ, ಕಾರ್ಖಾನೆಗಳು ಸುಗಮವಾಗಿ ನಡೆಯಲು ವಿದ್ಯುತ್ ಸರಬರಾಜುಅತ್ಯಂತಅವಶ್ಯಕವಾಗಿದೆ. ಆದುದ್ದರಿಂದಇನ್ನೂ ಮುಂದೆ ವಿದ್ಯುತ್ ಸರಬರಾಜಿನಲ್ಲಿಯಾಉವದೇಅಡಚಣೆಯಾಗದಂತೆ ನೋಡಿಕೊಳ್ಳುವುದು ಮೆಸ್ಕಾ ಅಧಿಕಾರಿಗಳ ಕರ್ತವ್ಯವಾಗಿದೆಎಂದರು.

ಇದಕ್ಕೂ ಮೊದಲು ಇಂಡಸ್ಟ್ರಿಯಲ್ ಏರಿಯಾ ಮಾಲೀಕರು ಮತ್ತು ಬಾಡಿಗೆದಾರರ ಸಂಘದ ಪದಾಧಿಕಾರಿಗಳುಶಾಸಕರನ್ನು ಭೇಟಿ ನೀಡಿಅಂದಾಜು 20 ವರ್ಷಗಳಿಂದ 80ಕ್ಕೂ ಹೆಚ್ಚು ವಿವಿಧತರಹದ ಕೈಗಾರಿಕೆಗಳು ಅಂಬಳೆ ಕೈಗಾರಿಕಾ ಪ್ರದೇಶದಲ್ಲಿ ನಡೆಯುತ್ತಿದ್ದು, ಚಿಕ್ಕಮಗಳೂರು ಜಿಲ್ಲೆಯಆರ್ಥಿಕ ಪ್ರಗತಿಗೂಕೂಡಾತುಂಬಾ ಸಹಕಾರಿಯಾಗಿರುತ್ತದೆಎಂದು ತಿಳಿಸಿ, ನಮಗೆ ವಿದ್ಯುತ್ ಮತ್ತು ನೀರು ಸರಬರಾಜಿನಲ್ಲಿಅಡಚಣೆಯಾಗುತ್ತಿರುವುದರಿಂದ ಕಾರ್ಖಾನೆಗಳಲ್ಲಿ ಉತ್ಪತ್ತಿಯುತುಂಬಾಕುಂಠಿತವಾಗುತ್ತಿದೆ. ಶ್ರಮ ಜೀವಿಗಳಿಗೆ ಪೂರ್ಣ ಪ್ರಮಾಣದ ಕೆಲಸವನ್ನುಕೊಡಲು ಸಾಧ್ಯವಾಗುತ್ತಿಲ್ಲ. ಇದರಿಂದಆರ್ಥಿಕ ಹೊರೆಯೂ ಹೆಚ್ಚುತ್ತಿದೆಎಂದು ಸಂಘದಅಧ್ಯಕ್ಷರಾದ ಜಿ.ಸುರೇಂದ್ರ ಶೆಟ್ಟಿ,ಕಾರ್ಯದರ್ಶಿ ಕೆ.ಎನ್. ಮಂಜುರಾಜ್ಅರಸ್,ಜಂಟಿ ಕಾರ್ಯದರ್ಶಿ ಎಸ್.ಸೋಮಶೇಖರ್ಮತ್ತು ವಿ.ಪಿ ಕೃಷ್ಣೇಗೌಡ ನೇತೃತ್ವದ ನಿಯೋಗ ಶಾಸಕರಿಗೆ ಮಾಹಿತಿ ನೀಡಿ ನೈಜಚಿತ್ರಣವನ್ನು ಬಿಡಿಸಿಟ್ಟರು.

ಹಳ್ಳಿಗಳಿಗೆ ಸರಬರಾಜು ಮಾಡುವ ವಿದ್ಯುತ್ ಲೈನ್‌ನಿಂದ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಇದರಿಂದ ಕಾರ್ಖಾನೆಗಳನ್ನು ನಡೆಸಲುತುಂಬಾತೊಂದರೆಯಾಗುತ್ತಿದೆ. ಗಾಳಿ ಮಳೆ ಬಂದಾಗ, ಹಳ್ಳಿಗಳಲ್ಲಿ ಏನೇ ಕೆಲಸ ಮಾಡಬೇಕಾದರೆ, ಅಥವಾ ಸಂಪರ್ಕದಲ್ಲಿತೊಂದರೆಆದಾಗ ಆಗಾಗ ವಿದ್ಯುತ್ ಸಂಪರ್ಕವನ್ನು ದಿನಕ್ಕೆ ಹಲವಾರು ಬಾರಿಕಡಿತ ಮಾಡುತ್ತಾರೆ. ಇದರಿಂದ ನಮ್ಮ ಕಾರ್ಖಾನೆಗಳನ್ನು ನಡೆಸಲುಜನರೇಟರ್‌ಉಪಯೋಗ ಮಾಡುತ್ತಿದ್ದು,ಇದರಿಂದಆರ್ಥಿಕತಂದರೆಯಾಗುತ್ತಿದೆಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಸಂಘದ ವತಿಯಿಂದ ಶಾಸಕರನ್ನು ಸನ್ಮಾನಿಸಿ ಗೌರವಿಸಲಾಯಿತು.ಸಂಘದ ಖಜಾಂಚಿ ಸಿ.ಎಸ್.ಸುಬ್ಬರಾವ್,ಬಿ.ಎಂ.ಶರತ್ ಕುಮಾರ್,ಸಿ.ಉಮೇಶ್ ಮತ್ತಿತರರುಇದೇ ಸಂದರ್ಭದಲ್ಲಿದ್ದರು.

## ಲಂಚ ಪಡೆದ ಆರೋಪಿತರಿಗೆ 4 ವರ್ಷ ಕಠಿಣ ಶಿಕ್ಷೆ ಹಾಗೂ 10 ಸಾವಿರ ದಂಡ

**ಗದಗ:** ಕಿರಿಯ ಮಹಿಳಾ ಆರೋಗ್ಯ ಸಹಾಯಕಿಗೆ ವೈದ್ಯಕೀಯ ರಜೆ ಮೇಲಿದ್ದ ಅವಧಿಯಲ್ಲಿನ ವೇತನ ಪಾವತಿಸಲು ಲಂಚಕ್ಕೆ ಬೇಡಿಕೆ ಇಟ್ಟ ಆರೋಪದಡಿ ಲೋಕಾಯುಕ್ತ ಬಲೆಗೆ ಬಿದ್ದಿದ್ದ ಇಬ್ಬರು ಆರೋಗ್ಯ ಇಲಾಖೆ ಸಿಬ್ಬಂದಿಗೆ ಜಿಲ್ಲಾ ಪ್ರಧಾನ ಸತ್ರ ನ್ಯಾಯಾಲಯವು 4 ವರ್ಷ ಕಠಿಣ ಶಿಕ್ಷೆ ಹಾಗೂ 10 ಸಾವಿರ ದಂಡ ವಿಧಿಸಿ ಆದೇಶಿಸಿದೆ.

ಆರೋಪಿಗಳಾದ ಶಿರಹಟ್ಟಿ ತಾಲೂಕಿನ ಯಳವತ್ತಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಥಮ ದರ್ಜೆ ಸಹಾಯಕ ಮಲ್ಲಿಕಾರ್ಜುನ ಫಕ್ಕೀರಪ್ಪ ಕಲ್ಲಬಂಡಿ ಹಾಗೂ ಕಿರಿಯ ಪುರುಷ ಆರೋಗ್ಯ ಸಹಾಯಕ ವೀರಪ್ಪ ಮಲ್ಲಪ್ಪ ಕುರಿ ಅವರಿಗೆ ಶಿಕ್ಷೆ ವಿಧಿಸಲಾಗಿದೆ.

ಪ್ರಕರಣದ ವಿವರ: ಶಿರಹಟ್ಟಿ ತಾಲೂಕಿನ ಯಳವತ್ತಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಚಾಂದಬೀಬಿ ಎಂಬುವವರು 2010ರ ಮಾ. 1ರಿಂದ ಜು. 24ರ ವರೆಗೆ ವೈದ್ಯಕೀಯ ರಜೆ ಪಡೆದಿದ್ದರು. ವೈದ್ಯಕೀಯ ರಜೆ ಅವಧಿಯಲ್ಲಿನ ವೇತನವನ್ನು ಪಾವತಿಸಲು ಹಾಗೂ ಸೇವಾ ಪುಸ್ತಕ ಮತ್ತು ಎಲ್‌ಪಿಸಿಯನ್ನು ವರ್ಗಾವಣೆಯಾದ ಸ್ಥಳಕ್ಕೆ ಕಳುಹಿಸಲು ಆರೋಪಿಗಳಾದ ಶಿರಹಟ್ಟಿ ತಾಲೂಕಿನ ಯಳವತ್ತಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಥಮ ದರ್ಜೆ ಸಹಾಯಕ ಮಲ್ಲಿಕಾರ್ಜುನ ಫಕ್ಕೀರಪ್ಪ ಕಲ್ಲಬಂಡಿ ಹಾಗೂ ಕಿರಿಯ ಪುರುಷ ಆರೋಗ್ಯ ಸಹಾಯಕ ವೀರಪ್ಪ ಮಲ್ಲಪ್ಪ ಕುರಿ ಅವರು ಸತಾಯಿಸಿದ್ದಾರೆ.

ಎ, ಅದರಲ್ಲಿ ತಮ್ಮ ಖರ್ಚು ಎಂದು 13,500 ರೂ. ಹಣ ತೆಗೆದುಕೊಂಡು ಉಳಿದ ಹಣವನ್ನು ಪೇ ಬಿಲ್‌ನ್ನು ಕಿರಿಯ ಪುರುಷ ಆರೋಗ್ಯ ಸಹಾಯಕ ವೀರಪ್ಪ ಮಲ್ಲಪ್ಪ ಕುರಿಗೆ ನೀಡಿದ್ದಾನೆ. ಅ ಹಣದಲ್ಲಿ ವೀರಪ್ಪ ತನ್ನ ಖರ್ಚು ಎಂದು 21,000 ರೂ. ಕಡಿತ ಮಾಡಿಕೊಂಡು ಉಳಿದ ಹಣವನ್ನು ಕೊಡುತ್ತೇನೆ. ಪೇ ಬಿಲ್‌ಗೆ ಸಹಿ ಮಾಡಿ ಎಂದು ತಿಳಿಸಿದ್ದಾನೆ. ಈ ವೇಳೆ ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಚಾಂದಬೀಬಿ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದಾರೆ. ದೂರಿನ ಆಧಾರದ ಮೇಲೆ ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗಿತ್ತು.

## ಶ್ರೀ ಕೃಷ್ಣ ಜಯಂತಿ ಆಚರಣೆಯಲ್ಲಿ ಶಾಸಕ ಕೆ.ಎಸ್.ಬಸವಂತಪ್ಪ ಕೊಟ್ಟ ಮಾತಿಗೆ ಬದ್ಧತೆಯಿಂದ ನಡೆದುಕೊಳ್ಳುವ ಯಾದವ ಸಮುದಾಯ

**ದಾವಣಗೆರೆ :** ಕೊಟ್ಟ ಮಾತಿಗೆ ಸತ್ಯ, ಪ್ರಾಮಾಣಿಕತೆಯಿಂದ ನಡೆದುಕೊಳ್ಳುವ ಹಾಗೂ ಶ್ರದೆ, ಬದ್ಧತೆ, ಸತ್ಯ ಪ್ರಾಮಾಣಿಕತೆಗೆ ಮತ್ತೊಂದು ಹೆಸರೇ ಯಾದವ ಸಮುದಾಯ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಕನ್ನಡ ಭವನದ ಡಾ.ಜಿ.ಎಸ್.ಶಿವರುದ್ರಪ್ಪ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಯಾದವ ಸಮಾಜದ ಸಹಯೋಗದಲ್ಲಿ ಆಯೋಜಿಸಲಾದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದ್ವಾಪರ ಯುಗದ ಶ್ರೀಕೃಷ್ಣ, ಪ್ರಾಚೀನ ಕಾಲದಲ್ಲಿ ತನ್ನದೇ ಆದ ಛಾಪು ಮೂಡಿಸಿದ್ದು, ಇಂದಿಗೂ ಪ್ರಸ್ತುತ. ಅವರ ಸಂದೇಶ ಸಮಾಜದಲ್ಲಿ ಅಡಕವಾಗಿವೆ. ಅವುಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು. ಕಾಯಕವನ್ನೇ ಕಸುಬನ್ನಾಗಿಸಿಕೊಂಡರೂ ಯಾದವ



ಸಮುದಾಯ ಇಂದಿಗೂ ಅತ್ಯಂತ ಹಿಂದುಳಿದ ಸಮುದಾಯವಾಗಿದೆ ಎಂದು ವಿಷಾದಿಸಿದರು. ಈ ಸಮುದಾಯದಲ್ಲಿ ಇಂದಿಗೂ ಕೆಲವು ಮೌಢ್ಯಗಳು ಆಚರಣೆಯಲ್ಲಿವೆ. ಹಟ್ಟಿಗಳಿಂದ ಹೊರಗಿಡುವ ಇನ್ನಿತರೆ ಅನಿಷ್ಟ ಪದ್ಧತಿ ಕೊನೆಗಾಣಿಸಲು ವಿನಂತಿಸಿ, ಬದಲಾದ ಕಾಲಮಾನದಲ್ಲಿ ಇಂತಹ ಮೌಢ್ಯಾಚರಣೆಗಳಿಂದ ಹೊರಬಂದಲ್ಲಿ ಸಮಾಜ ಇನ್ನಷ್ಟು ಮುನ್ನಲೆಗೆ ಬರಲಿದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು.

ಸಮಾಜಕ್ಕೆ 2 ಎಕರೆ ಭೂಮಿ ಮಂಜೂರು: ಮಾಯಕೊಂಡ ಕ್ಷೇತ್ರ ವ್ಯಾಪ್ತಿಯ ರುದ್ರಕಟ್ಟೆ ಬಳಿ ಸಮುದಾಯ ಭವನ ನಿರ್ಮಾಣ, ವಿದ್ಯಾರ್ಥಿನಿಲಯ, ಹಾಗೂ ಇನ್ನಿತರೆ ಅಭಿವೃದ್ಧಿ ಕಾರ್ಯಗಳಿಗೆ ಸಮಾಜಕ್ಕೆ ಉಪಯೋಗುವಾಗುವಂತೆ 2 ಎಕರೆ ಭೂಮಿ ಮಂಜೂರು ಮಾಡಲಾಗಿದೆ. ಸಮುದಾಯದವರು ಸದುಪಯೋಗ ಮಾಡಿಕೊಂಡು ಉನ್ನತ ಮಟ್ಟಕ್ಕೆ ಬೆಳೆಯಬೇಕು. ಇಡೀ ಗೊಲ್ಲ ಸಮುದಾಯಕ್ಕೆ ಸದಾ ಬೆಂಬಲವಾಗಿ ನಿಂತು ಎಲ್ಲಾ ಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿಸಲು ಪ್ರಾಮಾಣಿಕ ಪ್ರಯತ್ನಿಸುವುದರ ಜೊತೆಗೆ ಸದಾ ಸಮಾಜದ ಅಭಿವೃದ್ಧಿಗೆ ಶ್ರಮಿಸುವೆ ಎಂದರು.

ಆರ್ಥಿಕವಾಗಿ, ಶೈಕ್ಷಣಿಕವಾಗಿ ಮುಂದೆ ಬರಬೇಕು. ಆಗ ಮಾತ್ರ ಸಮಾಜ ಅಭಿವೃದ್ಧಿ ಹೊಂದಲು ಸಾಧ್ಯ. ಮಕ್ಕಳಿಗೆ ಸ್ವಾಭಿಮಾನ, ಸಂಸ್ಕೃತಿ, ಶಿಕ್ಷಣದ ಬಗ್ಗೆ ಹೆಚ್ಚಿನ ಅರಿವು ಮಾಡಿಸುವ ಅಗತ್ಯವಿದ್ದು ಮಹಿಳೆಯರು ಕೆಲವು ಮೌಢ್ಯ ಆಚರಣೆಗಳಿಂದ ಹೊರಬರಬೇಕಾಗಿದೆ. ಆಗ ಮಾತ್ರ ಶ್ರೀಕೃಷ್ಣ ಜಯಂತಿಗೆ ಅರ್ಥ ಬರುತ್ತದೆ ಎಂದರು.

ಶ್ರೀ ಕೃಷ್ಣ ಜಯಂತಿ ಅಂಗವಾಗಿ ದಾದಾಪೀರ್ ನವಿಲೇ ಹಾಳ್ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ಅಪರ ಜಿಲ್ಲಾಧಿಕಾರಿ

ಶೀಲವಂತ ಶಿವಕುಮಾರ್, ಜಿ.ಪಂ. ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಾಮದೇವಪ್ಪ, ಜಿಲ್ಲಾ ಗೊಲ್ಲ (ಯಾದವ )ಸಮುದಾಯ ಅಧ್ಯಕ್ಷ ತಿಪ್ಪೇಸ್ವಾಮಿ, ಕಾರ್ಯದರ್ಶಿ ಗಂಗಾಧರಪ್ಪ, ಸಮಾಜದ ಮುಖಂಡರು ಇದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

## ಪರಿಸರ ರಕ್ಷಣೆ ದೇಶ ಸೇವೆ ಗೋಪ್ಯಾ ನಾಯಕ್

**ದಾವಣಗೆರೆ:** ಪರಿಸರ ಕಾಳಜಿ ಪರಿಸರವನ್ನು ರಕ್ಷಿಸುವುದು ಗಿಡಮರಗಳನ್ನು ನೆಡುವುದು ದೇಶ ಸೇವೆ ಎಂದು ಪರಿಗಣಿಸಬಹುದಾಗಿದೆ ಪರಿಗಣಿಸಬಹುದಾಗಿದೆ ಎಂದು ಚಿತ್ರದುರ್ಗ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಗೋಪ್ಯಾ ನಾಯಕ್ ಹೇಳಿದರು ಅವರು ಇಂದು ನಗರದ ಬೂದಿಹಾಳ ರಸ್ತೆ ಮತ್ತು ಮಾಗನಹಳ್ಳಿ ಲೇಔಟ್ ನಲ್ಲಿ ಗ್ರೀನ್ ನೇಶನ್ ಪರಿಸರ ಸಂರಕ್ಷಣಾ ಸಂಸ್ಥೆಯ ವತಿಯಿಂದ 100ಕ್ಕು ಹೆಚ್ಚು ಗಿಡ ನೆಡುವ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದ ನಂತರ ಮಾತನಾಡಿದರು ಪರಿಸರ ರಕ್ಷಣೆ ಎಲ್ಲ ಕ್ಕಿಂತ ಮಿಗಿಲು ಆಕ್ಸಿಜನ್ ನಾ ಬೆಲೆ ನಮಗೆ ಕರೋನಾ ಸಮಯದಲ್ಲಿ ಗೊತ್ತಾಗಿದೆ ಇಂದು ಗ್ರೀನ್ ನೇಶನ್ ಸಂಸ್ಥೆಯ ಈ ಕಾರ್ಯವು ಪರಿಸರಕ್ಕಾಗಿ ಒಂದು ದೊಡ್ಡ ಗೊಡುಗೆಯಾಗಿದೆ ಹಿಂದೆಯೂ ಕೂಡಾ ಈ ಸಂಸ್ಥೆ ರಾಜ್ಯಾಧ್ಯಕ್ಷರಾದ ತಾರಿಕ್ ನಕಾಶ್ ಮತ್ತು ಜಿಲ್ಲಾಧ್ಯಕ್ಷ ಇಮ್ರಾನ್ ರಜಾ ಅವರ ನೇತೃತ್ವದಲ್ಲಿ ನಗರದ ಬಹುತೇಕ ಕಡೆ ಸಸಿ ಗಿಡಗಳನ್ನು ನೆಡುವ ಮೂಲಕ ಅರಣ್ಯ ಇಲಾಖೆಯ ಜೊತೆಗೂಡಿ ಪರಿಸರ ಸಂರಕ್ಷಣೆಯ ಕೆಲಸ ಕೂಡ ಮಾಡಿದೆ ಎಂದರು, ತಾರಿಕ್ ನಕಾಶ್



ಮಾತನಾಡಿ ಮುಂದಿನ ಕೆಲವು ವರ್ಷಗಳಲ್ಲಿ ನಮ್ಮ ಸಂಸ್ಥೆಯು ದಾವಣಗೆರೆ ನಗರವಲ್ಲಿ ಗ್ರೀನ್ ಸಿಟಿ ಕ್ಲೀನ್ ಸಿಟಿ ಮಾಡುವ ಉದ್ದೇಶ ಹೊಂದಿದೆ ಇದಕ್ಕೆ ಜಿಲ್ಲಾಡಳಿತ, ಅರಣ್ಯ ಇಲಾಖೆ, ಮಹಾನಗರ ಪಾಲಿಕೆಯ ಸಹಕಾರ ಮತ್ತು ಜನರ ಪಾಲ್ಗೊಳ್ಳುವಿಕೆ ಬಹಳ ಅವಶ್ಯಕವಾಗಿರುತ್ತದೆ ಎಂದು ಹೇಳಿದರು, ಕಾರ್ಯಕ್ರಮದಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವರದ ರಂಗನಾಥ್, ವಲಯ ಅರಣ್ಯಾಧಿಕಾರಿ ದರ್ಶನ್ ನಾಯಕ್, ತನ್ಜೀಮ್ ಅಧ್ಯಕ್ಷರು ದಾದಾಪೀರ್ ಸೇಠ್,

ಇಮ್ರಾನ್ ರಜಾ, ಶುಭ ಮಂಗಳ, ಹೆಚ್. ಮಂಜುನಾಥ್ ಜಬಿವುಲ್ಲಾ ಖಾನ್, ಅನೀಸ್ ಪಾಷಾ, ಶಾಯನ್, ಸಲೀಂ ಭಾಯಿ, ಟಿ. ಅತಾಉಲ್ಲ, ರೋಷನ್ ಜಮೀರ್, ಕಾಂಗ್ರೇಸಿನ ಇಬ್ರಾಹಿಂ ಖಲೀಲ್, ಹಯಾತ್, ಆಮ್ ಆದ್ಮಿ ಪಕ್ಷದ ಆದಿಲ್ ಖಾನ್, ಅಣಬೇರು ಮೊಹಮ್ಮದ್, ಇತರರು ಉಪಸ್ಥಿತರಿದ್ದರು

ಹೆಚ್. ಮಂಜುನಾಥ್ ಸ್ವಾಗತ ಮತ್ತು ವಂದನಾರ್ಪಣೆ ಮಾಡಿದರು.

## ‘ಭದ್ರ ಬಾಲ್ಯ’ ಕಾವಲು ಸಮಿತಿ ತರಬೇತುದಾರರ ತರಬೇತಿ ಉದ್ಘಾಟನೆ

**ಚಿಕ್ಕಮಗಳೂರು:** ಭದ್ರ ಬಾಲ್ಯ’ ಯೋಜನೆಯ ಪ್ರಧಾನ ಆಶಯಗಳಲ್ಲಿ ಒಂದಾದ ಗ್ರಾಮ ಮಟ್ಟದ ಕಾವಲು ಸಮಿತಿಗಳ ತರಬೇತುದಾರರ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಆಗಸ್ಟ್ 18 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಸಭಾಂಗಣದಲ್ಲಿ ನಡೆಯಲಿದೆ.

ಭದ್ರ ಬಾಲ್ಯ ಕಾರ್ಯಕ್ರಮವು ಬಾಲ್ಯ ವಿವಾಹ, ಬಾಲ್ಯ ಗರ್ಭಿಣಿ, ಪೋಕ್ಸೋ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳು ಮತ್ತು ಇನ್ನಿತರೆ ಶಿಶು ಕೇಂದ್ರಿತ ವಿಷಯಗಳ ಕುರಿತು ನಿಗದಿತ ಉದ್ದೇಶ ಮತ್ತು ಗುರಿಗಳನ್ನು ಹೊಂದಿರುವ ಯೋಜನೆಯಾಗಿದೆ.

ಈ ಯೋಜನೆಯು ಪ್ರತಿ ಮಗುವಿಗೂ ಮಾಹಿತಿಯುಕ್ತ ಶಿಕ್ಷಣ, ಸುರಕ್ಷಿತ, ಉಲ್ಲಾಸ ಮತ್ತು ಉತ್ಸಾಹಯುತ ಬಾಲ್ಯವನ್ನು ಅನುಭವಿಸುವಂತಹ ಸುಶಿಕ್ಷಿತ,

ಪ್ರಬುದ್ಧ ಮತ್ತು ಸುಮಧುರ ಸಮಾಜವನ್ನು ರೂಪಿಸುವುದರ ಜೊತೆಗೆ ಮಕ್ಕಳಲ್ಲಿ ಜೀವನ ಕೌಶಲ್ಯಗಳು ಮತ್ತು ನಾಯಕತ್ವದ ಗುಣ ಮತ್ತು ವೃತ್ತಿ ಆಶಯಗಳೊಂದಿಗೆ ಶಕ್ತೀಕರಿಸುವುದು ಸಹ ಈ ಕಾರ್ಯಕ್ರಮ ಮೂಲ ಉದ್ದೇಶ ಎಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್.ಎಸ್.ಕೀರ್ತನಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಿಲ್ಲತ್ ಸ್ಕೂಲ್ ನಲ್ಲಿ ಸಂಭ್ರಮದ 79ನೇ ಸ್ವಾತಂತ್ರ್ಯ ದಿನ ಆಚರಣೆ

**ದಾವಣಗೆರೆ:** ನಗರದ ಮಿಲ್ಲತ್ ಎಜುಕೇಶನ್ ಅಂಡ್ ವೆಲ್ಫೇರ್ ಸೊಸೈಟಿ ಆಶ್ರಯದಲ್ಲಿ ಮಿಲ್ಲತ್ ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮದಿಂದ ಆಚರಿಸಲಾಯಿತು.

ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಮಿಲ್ಲತ್ ಎಜುಕೇಶನ್ ಅಂಡ್ ವೆಲ್ಫೇರ್ ಟ್ರಸ್ಟ್ ನ ಕಾರ್ಯದರ್ಶಿ ಸೈಯದ್ ಖಾಲಿದ್ ಅಹ್ಮದ್ ಅವರು, ಭಾರತ ದೇಶಕ್ಕೆ ಸ್ವಾತಂತ್ರ್ಯ ಬರಲು ಹೋರಾಡಿದ ಮಹನೀಯರ ನೆನಪು ಮಾಡಿಕೊಳ್ಳಬೇಕಾದ ದಿನ. ಮಹಾತ್ಮಾ ಗಾಂಧೀಜಿ, ಜವಾಹರ ಲಾಲ್ ನೆಹರು, ಸುಭಾಷ್ ಚಂದ್ರ ಭೋಸ್, ಭಗತ್ ಸಿಂಗ್, ಸರೋಜಿನಿ ನಾಯ್ಡು, ಲಾಲಾ ಲಜಪತ್ ರಾಯ್, ಟಿಪ್ಪು ಸುಲ್ತಾನ್, ಕಿತ್ತೂರು ರಾಣಿ ಚೆನ್ನಮ್ಮ ಸೇರಿದಂತೆ ಅನೇಕ ಹೋರಾಟಗಾರರ ತ್ಯಾಗ ಸ್ಮರಿಸಿಕೊಳ್ಳೋಣ ಎಂದು ಹೇಳಿದರು.

ಭಾರತ ದೇಶಕ್ಕೆ ಹೋರಾಟದ ಫಲವಾಗಿ ಸ್ವಾತಂತ್ರ್ಯ ಸಿಕ್ಕಿದೆ. ಈ ಸ್ವಾತಂತ್ರ್ಯ ಬಂದಿದ್ದರಿಂದ



ಭಾರತ ದೇಶವು ಮುಂದುವರಿಯಲು ಸಾಧ್ಯವಾಗಿದೆ. ಜಗತ್ತಿನಲ್ಲಿ ವೇಗವಾಗಿ ಮುಂದುವರಿಯುತ್ತಿರುವ ಭಾರತ ದೇಶಕ್ಕೆ ಸ್ವಾತಂತ್ರ್ಯ ಬಂದು 79 ವರ್ಷಗಳಾಗಿದ್ದು, ನಾವೆಲ್ಲರೂ ಸ್ವಾತಂತ್ರ್ಯ ಸಂಗ್ರಾಮ ಸೇರಿದಂತೆ ದೇಶಕ್ಕೆ ಸ್ವಾತಂತ್ರ್ಯ ಬರಲು ಕಾರಣೀಕರ್ತರಿಗೆ ಗೌರವ ಸಲ್ಲಿಸೋಣ. ವಿದ್ಯಾರ್ಥಿಗಳು ಇತಿಹಾಸ ಓದಬೇಕು. ದೇಶಕ್ಕಾಗಿ ಹೋರಾಡಿದ ಮಹನೀಯರ ಜೀವನಚರಿತ್ರೆ ತಿಳಿದುಕೊಳ್ಳಿ ಎಂದು ಸಲಹೆ ನೀಡಿದರು.

ಬ್ರಿಟೀಷರ ಕಪಿಮುಷ್ಠಿಯಿಂದ ಹೊರ ಬರಲು ದೇಶದಲ್ಲಿ ಭಾರೀ ಹೋರಾಟಗಳು ನಡೆದವು. ಅನೇಕ ಮಂದಿ ಹುತಾತ್ಮರಾದರು. ಹೋರಾಟಗಾರರ ತ್ಯಾಗ, ಶೌರ್ಯ ಮತ್ತು ದೃಢಸಂಕಲ್ಪದಿಂದಾಗಿ ನಾವು ಇಂದು ಸ್ವತಂತ್ರವಾಗಿ ಬದುಕುತ್ತಿದ್ದೇವೆ. ಸ್ವೇಚ್ಛೇಚಾರವಾಗಿ ಸ್ವಾತಂತ್ರ್ಯ ಬಳಸಿಕೊಳ್ಳಬಾರದು. ವೈವಿಧ್ಯಮಯ ದೇಶ ಭಾರತದಲ್ಲಿ ನಾವೆಲ್ಲರೂ ಹುಟ್ಟಿರುವುದು ಪುಣ್ಯ. ನಾವೆಲ್ಲರೂ ಒಗ್ಗಟ್ಟಾಗಿ, ಜಾತ್ಯಾತೀತ ಮೌಲ್ಯಗಳಿಗೆ ಅನುಗುಣವಾಗಿ ಬದುಕೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸೈಯದ್ ಜುಫಿಶನ್, ಸಿದ್ದಪ್ಪ, ಝಾಕೀರ್ ಹುಸೇನ್, ಆರಿಫ್ ಅಲಿ, ಖುಷ್ತಾರು ಬೇಗಂ, ಸದ್ದಪ್ಪ, ಸೈಯದ್ ಜೀಶನ್ ಅಲಿ, ಜುಲ್ಕರ್ ನೈನ್ ಮತ್ತು ಶಾಲೆಯ ಸಿಬ್ಬಂದಿ ಪಾಲ್ಗೊಂಡಿದ್ದರು.

## ಪರೀಕ್ಷಾ ಕೇಂದ್ರದ ಸುತ್ತ ನಿಶೇಧಾಜ್ಞೆಜಾರಿ

**ಹಾಸನ :** ಕರ್ನಾಟಕ ಮುಕ್ತ ಶಾಲೆಯಲ್ಲಿ( ಕೆ.ಓ.ಎಸ್) ಆ.21ರವರೆಗೆ ಪೂರಕ ಪರೀಕ್ಷೆಯು ನಡೆಯುತ್ತಿದ್ದು ಸದರಿ ಪರೀಕ್ಷೆಗಳು ಸುವ್ಯವಸ್ಥಿತವಾಗಿ ನಡೆಸಲುಎಲ್ಲಾರೀತಿಯಅಗತ್ಯ ಕ್ರಮಕೈಗೊಳ್ಳಲು ಉಲ್ಲೇಖಿತ ಪತ್ರದಲ್ಲಿ ನಿರ್ದೇಶಿಸಿರುವಂತೆ ಪರೀಕ್ಷಾಕೇಂದ್ರದ ಸುತ್ತ ಸೆಕ್ಷನ್ಃಓಖಖ 163 ಜಾರಿಗೊಳಿಸುವಂತೆ ಉಲ್ಲೇಖದ ಪತ್ರದಲ್ಲಿಕೋರಿರುತ್ತಾರೆ.

ಸದರಿ ಪರೀಕ್ಷೆ ನಡೆಯುವ ದಿನದಂದು ಪರೀಕ್ಷೆಗಳು ಸುಗಮವಾಗಿ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸುವುದು ಹಾಗೂ 200 ಮೀಟರ್ ವ್ಯಾಪ್ತಿಯಲ್ಲಿಇರುವಜೆರಾಕ್ಸ್/ಸೈಬರ್/ಕಂಪ್ಯೂಟರ್ ಅಂಗಡಿಗಳನ್ನು ಮುಚ್ಚುವಂತೆ ಆದೇಶಿಸಿಜಿಲ್ಲಾಧಿಕಾರಿಮತ್ತುಜಿಲ್ಲಾದಂಡಾಧಿಕಾರಿಅವರು ಆದೇಶಿಸಿದ್ದಾರೆ.

## ದಾಖಲೆಗಳಿದ್ದರೆ ಕೋರ್ಟಿಗೆ ಹೋಗಲಿ:ರಾಗಾಗೆ ಶೆಟ್ಟರ್ ತಿರುಗೇಟು



**ನವದೆಹಲಿ,ಅ.8**–ಲೋಕಸಭಾ ಚುನಾವಣೆಯ ಸಮಯದಲ್ಲಿ ಮತಗಟ್ಟೆಗಳಲ್ಲಿ ಅಕ್ರಮ ನಡೆದಿದೆ ಎಂಬ ರಾಹುಲ್ ಗಾಂಧಿಯವರ ಆರೋಪಗಳಿಗೆ ಬಿಜೆಪಿ ಸಂಸದ ಜಗದೀಶ್ ಶೆಟ್ಟರ್ ತಿರುಗೇಟು ನೀಡಿದ್ದಾರೆ, ಅವುಗಳಿಗೆ ಯಾವುದೇ ಆಧಾರವಿಲ್ಲ ಎಂದು ಹೇಳಿದ್ದಾರೆ.

ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿಯವರ ಮತಗಟ್ಟೆಗಳಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ್ದಾರೆ.ರಾಹುಲ್ ಗಾಂಧಿಯವರ ಆರೋಪಗಳಿಗೆ ಯಾವುದೇ ಆಧಾರವಿಲ್ಲ. ಅವರು ಈಗ ಆರೋಪ ಮಾಡುತ್ತಿದ್ದಾರೆ, ಒಂದು ವರ್ಷದ ಹಿಂದೆ ಅವರು ಅದನ್ನು ಏಕೆ ಮಾಡಲಿಲ್ಲ? ಬೆಂಗಳೂರು ಕೇಂದ್ರದ ನಿಮ್ಮ ಕಾಂಗ್ರೆಸ್ ಅಭ್ಯರ್ಥಿ ಅದರ ಬಗ್ಗೆ ಏಕೆ ಕೇಳಲಿಲ್ಲ? ಇಲ್ಲಿಯವರೆಗೆ ಅವರು ಏಕೆ ದೂರು ನೀಡಲಿಲ್ಲ? ಎಂದು ಪ್ರಶ್ನೆಗಳ ಸುರಿಮಳೆಗೈದರು.

ರಾಹುಲ್ ಗಾಂಧಿ, ನಿಮ್ಮ ಬಳಿ ದಾಖಲೆಗಳಿದ್ದರೆ, ನ್ಯಾಯಾಲಯಕ್ಕೆ ಹೋಗಿ, ಚುನಾವಣಾ ಆಯೋಗಕ್ಕೆ ದಾಖಲೆಗಳನ್ನು ಸಲ್ಲಿಸಿ ಮತ್ತು ದೂರು ನೀಡಿ. ಅಲ್ಲದೆ, ಚುನಾವಣಾ ಆಯೋಗವನ್ನು ಆರೋಪಿಸುವುದು ಸರಿಯಲ್ಲ ಎಂದಿದ್ದಾರೆ.ಅವರು ಎನ್.ಡಿ.ಎಮೈತ್ರಿಕೂಟದ ಅಡಿಯಲ್ಲಿ ಪ್ರಧಾನಿಯಾದರು. ಸರ್ಕಾರ ಬಂದಿದೆ, ಅವರು ಈಗ ಹೇಗೆ ಆರೋಪಗಳನ್ನು ಮಾಡಬಾರದು ಪ್ರಧಾನಿ ಮೋದಿಯನ್ನು ಟೀಕಿಸುವುದು ಮತ್ತು ಯಾವಾಗಲೂ ಅಮೆರಿಕ, ಟ್ರಂಪ್ ಮತ್ತು ಚೀನಾ ಪರವಾಗಿ ಮಾತನಾಡುವುದು ರಾಹುಲ್ ಗಾಂಧಿಯವರ ಕೆಲಸವಾಗಿ ಮಾರ್ಪಟ್ಟಿದೆ.

ಚುನಾವಣೆ ಅಕ್ರಮವಾಗಿದ್ದರೆ, ಮೊದಲು ನ್ಯಾಯಾಲಯಕ್ಕೆ ಹೋಗಿ ಅಥವಾ ಚುನಾವಣಾ ಆಯೋಗಕ್ಕೆ ದೂರು ನೀಡಿ. ದೇಶದ ಸ್ವಾಯತ್ತ ಸಂಸ್ಥೆಯ ಮೇಲೆ ಆರೋಪ ಮಾಡುವುದು ತಪ್ಪು ಎಂದು ಅವರು ಹೇಳಿದ್ದಾರೆ. ಧರ್ಮಸ್ಥಳ ವಿಷಯದ ಕುರಿತು ಮಾತನಾಡಿದ ಅವರು, ಸರ್ಕಾರದ ಎಸ್ಐಟಿ ಧರ್ಮಸ್ಥಳ ವಿಷಯದ ಬಗ್ಗೆ ತನಿಖೆ ನಡೆಸುತ್ತಿದೆ ಎಂದು ಹೇಳಿದರು. ಹಾಗೆ ಮಾಡುವುದರಲ್ಲಿ ಯಾವುದೇ ಆಕ್ಷೇಪವಿಲ್ಲ.

ಅವರು ಅನಾಮಧೇಯ ದೂರು ದಾಖಲಿಸಿದ್ದಾರೆ, ಯಾವುದೇ ಸಾಕ್ಷಿ ಇದೆಯೋ ಇಲ್ಲವೋ ನನಗೆ ತಿಳಿದಿಲ್ಲ. ಆದಾಗ್ಯೂ, ಸರ್ಕಾರ ಎಸ್ಐಟಿ ತನಿಖೆಗೆ ಆದೇಶಿಸಿದೆ. ಅವರು ತನಿಖೆ ನಡೆಸಲಿ, ಆದರೆ ಹಿಂದೂಗಳ ಪವಿತ್ರ ದೇವಾಲಯವಾದ ಮಂಜುನಾಥ ಸ್ವಾಮಿಗೆ ಯಾವುದೇ ರೀತಿಯಲ್ಲಿ ಹಾನಿಯಾಗಬಾರದು. ಕ್ಷೇತ್ರಕ್ಕೆ ಅಪಚಾರ

### ಶಾಂತಿನಿಕೇತನದಲ್ಲಿ ಹಿರಿಯ ನಾಗರೀಕರಿಗೆ ಗಾಂಧಿ ತತ್ವಗಳು

# ಹಿರಿಯ ನಾಗರಿಕರಿಗೂ ಸಹ ಚರಕದ ಮಹತ್ವ ತಿಳಿಸಿಕೊಡಬೇಕು : ಡಾ. ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ :** ಹಿರಿಯ ನಾಗರಿಕರು ಸಹ ಹಳೆ ನೆನಪುಗಳನ್ನ ಮರುಕಳಿಸುವಂತೆ, ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಡಿದ ಅನುಭವಗಳನ್ನ ಆಧಾರವಾಗಿಟ್ಟುಕೊಂಡು, ಅವರಿಗೆ ಚರಕವನ್ನು ತೋರಿಸಿ, ಅದರ ಮುಖಾಂತರ ಅವರ ಕುಟುಂಬದಲ್ಲಿರುವ ಸದಸ್ಯರಿಗೆ ಮನವೊಲಿಸಿ, ಕೈಯಿಂದ ಮಾಡಿದಂತಹ ಉಡುಪುಗಳನ್ನ ಧರಿಸುವಂತೆ ಜಾಗೃತಿ ಮೂಡಿಸಿದರೆ, ಭಾರತದಲ್ಲಿರುವ ನಿರುದ್ಯೋಗ ಸಮಸ್ಯೆ, ಬಡತನ, ಅಸಮಾನತೆ, ಶೋಷಣೆ, ಪರಿಸರ ಮಾಲಿನ್ಯವನ್ನು ತಡೆಯಲು ಅನುಕೂಲಕರವಾಗುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗ ನಗರದ ವಾಸವಿ ವಿದ್ಯಾ ಸಂಸ್ಥೆಯಲ್ಲಿ ಪ್ರತಿ ಭಾನುವಾರ ಶಾಂತಿನಿಕೇತನ ಹಿರಿಯ ನಾಗರಿಕರ ಸಂಘಟನೆ ಆಯೋಜಿಸಿದ್ದ ಸ್ನೇಹಿತರ ದಿನಾಚರಣೆಯಲ್ಲಿ ಗಾಂಧಿ ತತ್ವಗಳು ಮತ್ತು ಸಿದ್ಧಾಂತಗಳ ಬಗ್ಗೆ ಪ್ರಾತ್ಯಕ್ಷಿಕೆ ಮುಖಾಂತರ ಮಾತನಾಡುತ್ತಿದ್ದರು..

ಹಿರಿಯ ನಾಗರಿಕರಿಗೆ ವಾರಕ್ಕೊಮ್ಮೆ ಸಭೆ ಸೇರಿಸಿ, ಅವರಲ್ಲಿ ಮನೋ ಉಲ್ಲಾಸವನ್ನು ಉಂಟುಮಾಡುವಂತಹ ಶಾಂತಿನಿಕೇತನ ಸಂಘಟನೆ ವಯಸ್ಸಿನ ಅನುಭವವನ್ನು, ಯುವಜನಾಂಗಕ್ಕೆ ತಿಳಿಸಿ, ಅವರನ್ನ ಉತ್ತಮ



ನಾಗರಿಕರನ್ನಾಗಿ ಮಾಡಿ, ಸಮಾಜ ಸೇವೆಗೆ ಸಿದ್ಧಗೊಳಿಸಲು ತಯಾರು ಮಾಡುತ್ತಿರುವ ಇಂತಹ ಸಂಸ್ಥೆಗಳು ಇನ್ನೂ ಹೆಚ್ಚಾಗಿ ಬೆಳವಣಿಗೆಯಾಗಲಿ ಎಂದು ಆಶಿಸಿದರು.

ಗುಡಿ ಕೈಗಾರಿಕೆ ನಾಶವಾಗಿರುವುದರಿಂದ ಬಹಳಷ್ಟು ಹಿರಿಯರಿಗೆ ಹಳೆ ಉದ್ಯೋಗಗಳನ್ನ ಮತ್ತೆ ಮರುಸ್ಥಾಪಿಸುವುದರ ಬಗ್ಗೆ ಯೋಚನೆಗಳು ಹೊಳೆದಿರುವುದರಿಂದ, ಅವರು ಸಹ ಚರಕದ ಮಹತ್ವವನ್ನ ಅರಿತುಕೊಂಡು, ಮನೆಯಲ್ಲಿ ಒಂದು ಚರಕ ಇಟ್ಟುಕೊಂಡು, ಬಿಡುವಿನ ಸಮಯದಲ್ಲಿ ದಾರಾ ತೆಗೆದು, ಬತ್ತಿ ಮಾಡಿ, ಹಾರ ಮಾಡಿ, ಸ್ವಲ್ಪ ಮಟ್ಟಿಗಾದರೂ ಹಣ ಸಂಪಾದನೆ ಮಾಡಿಕೊಂಡು ಮತ್ತು ದೇಹದ ಆರೋಗ್ಯವನ್ನು ಕಾಪಾಡಿಕೊಳ್ಳಲು ಅನುಕೂಲಕರವಾಗುತ್ತದೆ ಎಂದರು.

ಬಹಳಷ್ಟು ಹಿರಿಯ ನಾಗರಿಕರುಗಳು ವಯಸ್ಸಿನ ಚಿಂತನೆಯನ್ನು ಮರೆತು, ಯುವಕರಿಗಿಂತ ಹೆಚ್ಚಾಗಿ ಉತ್ಸಾಹದಿಂದ, ಸ್ವಾತಂತ್ರ್ಯ ಸಂಗ್ರಾಮದ ಚಳುವಳಿಗಳನ್ನ ಅರ್ಥ ಮಾಡಿಕೊಂಡು, ಮಹಾತ್ಮ ಗಾಂಧೀಜಿ ಅವರ ಸಿದ್ಧಾಂತಗಳನ್ನ ಅಳವಡಿಸಿಕೊಂಡು, ಜೀವನದಲ್ಲಿ ಸರಳತೆ, ಸದ್ಭಾವನೆ, ಅಹಿಂಸೆ, ಸಹಕಾರ ಮುಂತಾದವುಗಳನ್ನ ತಮ್ಮ ಕುಟುಂಬದಲ್ಲಿ ಅಳವಡಿಸಿಕೊಳ್ಳುತ್ತಾ, ಮುಂದಿನ ಜನಾಂಗವನ್ನು ಸಿದ್ಧಗೊಳಿಸುತ್ತಿರುವುದು ಶ್ಲಾಘನೀಯ ಎಂದರು.

ಕೈಯಿಂದ ಮಾಡಿದ ಖಾದಿಯನ್ನು ಹಿರಿಯರಿಗೆ ಪರಿಚಯಿಸಿ, ಅವರ ಮುಖಾಂತರ ಕುಟುಂಬದ ಸದಸ್ಯರಿಗೆ ಪರಿಚಯಿಸಿ, ದೇಶದಲ್ಲಿ ಒಂದಿಷ್ಟು ಸ್ವದೇಶಿ ತತ್ವವನ್ನು ಅನುಷ್ಠಾನಗೊಳಿಸಲು, ಇಂತಹ ಸಂಘಟನೆಗಳು ಸಹಾಯ ಮಾಡಬೇಕೆಂದು ವಿನಂತಿಕೊಂಡರು.

ಇನ್ನರ್ ವೀಲ್ ಕ್ಲಬ್ ನ ಶ್ರೀಮತಿ ಜ್ಯೋತಿ ಲಕ್ಷ್ಮಣ್ ರವರು ಮಾತನಾಡುತ್ತಾ ಹಿರಿಯರು ನಗುನಗುತ್ತಾ, ಜೀವನವನ್ನು ಅನುಭವಿಸುತ್ತಾ, ಇತರರಿಗೆ ಮಾದರಿಯಾಗಬೇಕು, ವಯಸ್ಸಿನ ಚಿಂತನೆಯನ್ನು ತೊರೆದು, ಮನಸ್ಸಿನ ಉಲ್ಲಾಸವನ್ನು ಹೆಚ್ಚಿಸಿಕೊಂಡು, ಆರೋಗ್ಯಪೂರ್ಣವಾದಂತಹ ಜೀವನವನ್ನು ನಿರ್ವಹಿಸಿ, ಕಿರಿಯರಿಗೆ ಮಾರ್ಗದರ್ಶನ ನೀಡುವ ಪ್ರಯತ್ನದಲ್ಲಿ ಶಾಂತಿನಿಕೇತನ ಕೆಲಸ ಮಾಡುತ್ತಿದೆ ಎಂದರು.

ರೋಟರಿ ಕ್ಲಬ್ ನ ಶ್ರೀ ಲಕ್ಷ್ಮಣ್ ರವರು ಮಾತನಾಡುತ್ತಾ ಮನುಷ್ಯನಿಗೆ ಸಾಧನೆ ಮಾಡಲು ಯಾವ ವಯಸ್ಸಿನ ಭೇದಭಾವವಿಲ್ಲ, ಎಲ್ಲಾ ವಯಸ್ಸಿನಲ್ಲೂ ಮನುಷ್ಯ ಸಾಧನೆ ಮಾಡಿ, ಸಮಾಜ ಸೇವೆ ಮಾಡಿ, ಇತರರಿಗೆ ಮಾದರಿಯಾಗಬಹುದು. ಈ ನಿಟ್ಟಿನಲ್ಲಿ ಎಲ್ಲ ಸಂಘ–ಸಂಸ್ಥೆಗಳು ಸಹ ಹಿರಿಯ ನಾಗರಿಕರಿಗೆ ಒಂದಿಷ್ಟು ಸಮಯವನ್ನು ನೀಡಿ, ಅವರನ್ನು ಉಲ್ಲಾಸದಿಂದ ನೋಡಿಕೊಳ್ಳುವಂಥ ವ್ಯವಸ್ಥೆಯಾಗಬೇಕು ಎಂದರು.

ಇನ್ನರ್ ವೀಲ್ ಕ್ಲಬ್ ನ ಅಧ್ಯಕ್ಷರು, ಕಾರ್ಯದರ್ಶಿಗಳು, ಸದಸ್ಯರುಗಳು, ಭಾಗವಹಿಸಿ ಹಿರಿಯ ನಾಗರಿಕರುಗಳಿಗೆ ಸ್ನೇಹದ ಹಸ್ತ ಚಾಚಿ, ಸ್ನೇಹಿತರ ದಿನಾಚರಣೆಯ ಶುಭಾಶಯಗಳು ಕೋರಿದರು. ಹಾಗೂ ಭಾಗವಹಿಸಿದವರಿಗೆಲ್ಲ ಸಿಹಿ ಹಂಚಿ ಸಂಭ್ರಮಿಸಿದರು. ಕೆಲವೊಂದಿಷ್ಟು ಹಿರಿಯ ನಾಗರಿಕರುಗಳು ಕವಿತೆಗಳನ್ನು ಓದಿ, ಕಥೆಗಳನ್ನ ಹೇಳಿ, ಹಾಸ್ಯ ಚಟಾಕಿಗಳನ್ನ ಹಾರಿಸಿ, ಬಂದ ಸಭಿಕರನ್ನ ಮನರಂಜಿಸಿದರು.

ಗಾಂಧೀಜಿಯವರ ಚರಕವನ್ನು ಮತ್ತು ಇತರ ಸಿದ್ಧಾಂತಗಳನ್ನು ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಲಾಯಿತು.

# ಬಿಹಾರ ಎಸ್ಐಆರ್ ವಿರುದ್ಧ ಸಂಸತ್ತಿನ ಹೊರಗೆ ಇಂಡಿಯಾ ಬ್ಲಾಕ್ ಸದಸ್ಯರ ಪ್ರತಿಭಟನೆ




**ನವದೆಹಲಿ:** ವಾರಾಂತ್ಯವಾದ ಇಂದು ಸಂಸತ್ತಿನ ಉಭಯ ಸದನಗಳಲ್ಲಿ ಕಲಾಪ ನಡೆಯುವ ಬದಲು ವಿರೋಧ ಪಕ್ಷಗಳ ಮೈತ್ರಿಕೂಟ ಇಂಡಿಯಾ ಬ್ಲಾಕ್ ಸದಸ್ಯರು ಬಿಹಾರ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ವಿರುದ್ಧ ಪ್ರತಿಭಟನೆ ಮುಂದುವರಿಸಿದ್ದಾರೆ.

ಬಿಹಾರದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ವಿರುದ್ಧ ಭಾರತೀಯ ರಾಷ್ಟ್ರೀಯ ಅಭಿವೃದ್ಧಿ ಅಂತರ್ಗತ ಒಕ್ಕೂಟದ (ಖಔಆಖಂ) ನಾಯಕರು ಸಂಸತ್ತಿನ ಸಂಕೀರ್ಣದ ಒಳಗೆ ಮಕರ ದ್ವಾರದ ಮುಂದೆ ಪ್ರತಿಭಟನೆ ನಡೆಸುತ್ತಿದ್ದಾರೆ.

ಮನ್ಸುಖ್ ಮಾಂಡವಿಯಾ ಅವರಿಂದ ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ, 2025

ಲೋಕಸಭೆಯ ಕಾರ್ಯಸೂಚಿಯ ಪ್ರಕಾರ, ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವರು ಇಂದು ಲೋಕಸಭೆಯಲ್ಲಿ ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ, 2025 ನ್ನು ಮಂಡಿಸಲಿದ್ದಾರೆ.

ಕೇಂದ್ರ ಸರ್ಕಾರವು ಮುಂಗಾರು ಅಧಿವೇಶನದಲ್ಲಿ ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆಯನ್ನು ಅಂಗೀಕರಿಸಲು ಉತ್ಸುಕವಾಗಿರುವುದರಿಂದ, ಆಡಳಿತ ಪೀಠದ ಸದಸ್ಯರು ನಿನ್ನೆ ಅದನ್ನು ಮುಂದಿನ ವಾರದ ಆರಂಭದಲ್ಲಿ ಚರ್ಚೆಗೆ ತೆಗೆದು–ಕೊಂಡು ಅಂಗೀಕಾರ ಪಡೆಯಬಹುದು ಎಂದು ಸೂಚಿಸಿದರು.

ವಿವರವಾದ ಅಧ್ಯಯನಕ್ಕಾಗಿ ಮಸೂದೆಯನ್ನು ಸಂಸದೀಯ ಸಮಿತಿಗೆ ಉಲ್ಲೇಖಿಸಬೇಕೆಂದು ಬಯಸಿದ ವಿರೋಧ ಪಕ್ಷವು, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಕುರಿತ ಚರ್ಚೆಯಲ್ಲಿನ ಅಸ್ತವ್ಯಸ್ತತೆಯನ್ನು ಕೊನೆಗೊಳಿಸಲು ಚರ್ಚೆ ನಡೆಸಬೇಕೆಂದು ಒತ್ತಾಯಿಸಿದೆ.

ಸಂಸತ್ತಿನಲ್ಲಿ ಚುನಾವಣಾ ಪ್ರಕ್ರಿಯೆಯ ಕುರಿತು ಯಾವುದೇ ಚರ್ಚೆ ಇರುವುದಿಲ್ಲ ಎಂದು ಸರ್ಕಾರ ಸ್ಪಷ್ಟವಾಗಿ ಹೇಳಿರುವುದರಿಂದ, ನಾವು ಮಧ್ಯಮ ಮಾರ್ಗವನ್ನು ಕಂಡುಕೊಳ್ಳಬೇಕಾಗಿದೆ ಎಂದು ವಿರೋಧ ಪಕ್ಷದ ನಾಯಕರೊಬ್ಬರು ಹೇಳಿದರು.

ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಲೋಕಸಭೆಗೆ ಮಾಹಿತಿ ನೀಡಿ, ಎಸ್ಐಆರ್ ಕುರಿತು ಚರ್ಚೆ ನಡೆಸಲು ಸಾಧ್ಯವಿಲ್ಲ. ಈ ವಿಷಯವು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇದೆ ಮತ್ತು ನಿಯಮಗಳು ತೀರ್ಪಿನ ಅಡಿಯಲ್ಲಿರುವ ವಿಷಯಗಳ ಕುರಿತು ಚರ್ಚೆಗೆ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ.


ಕ್ರೀಡಾ ಮಸೂದೆಯಂತಹ ಮಸೂದೆ ಮತ್ತು ಸುಂಕಗಳಂತಹ ಸಮಸ್ಯೆಗಳು ದೂರಗಾಮಿ ಪರಿಣಾಮ ಬೀರುತ್ತವೆ. ಖIಖ ಕುರಿತು ಪ್ರತಿಭಟನೆಯನ್ನು ಮುಂದುವರಿಸುವಾಗಲೂ ಅವುಗಳನ್ನು ಚರ್ಚಿಸುವುದು ಯೋಗ್ಯವಾಗಿರುತ್ತದೆ ಎಂಬ ಭಾವನೆ ಅನೇಕ ಪಕ್ಷಗಳಲ್ಲಿದೆ ಎಂದು ಇಂಡಿಯಾ ಮೈತ್ರಿಕೂಟದ ಪ್ರಮುಖ ನಾಯಕರೊಬ್ಬರು ಹೇಳಿದರು.

ಆಗಸ್ಟ್ 25 ರಂದು ವ್ಯಾಪಾರ ಮಾತುಕತೆಗಾಗಿ ಅಮೆರಿಕದ ಸಮಾಲೋಚಕರು ಆಗಮಿಸುವ ಮೊದಲು ಸರ್ಕಾರವು ಭಾರತ–ಅಮೆರಿಕ ಸುಂಕ ಸಮರ ಕುರಿತು ಚರ್ಚೆಗೆ ಒಲವು ತೋರಬಹುದು ಎನ್ನಲಾಗುತ್ತಿದೆ.

ಈ ಮಧ್ಯೆ, ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ, ಕ್ರೀಡಾ ಮಸೂದೆಯು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯನ್ನು (BCCI) ಆರ್ ಟಿಐ ಕಾಯ್ದೆಯಿಂದ ವಿನಾಯಿತಿ ನೀಡುವುದಿಲ್ಲ ಎಂದರು, ಆದರೆ ಕ್ರೀಡಾ ಒಕ್ಕೂಟವು ಸರ್ಕಾರದಿಂದ ನಿಧಿ ಅಥವಾ ಅನುದಾನವನ್ನು ಬಳಸಿದರೆ ಮಾತ್ರ ಈ ಕಾಯ್ದೆ ಅನ್ವಯಿಸುತ್ತದೆ ಎಂದರು.

ಬಿಸಿಸಿಐ, ಇತರ ಕ್ರೀಡಾ ಆಡಳಿತ ಸಂಸ್ಥೆಗಳಂತೆ ಇದು ಸರ್ಕಾರಿ ನಿಧಿಯ ಮೇಲೆ ಅವಲಂಬಿತವಾಗಿಲ್ಲ ಎಂದು ವಾದಿಸುತ್ತಾ ಕಾಯ್ದೆಯ ವ್ಯಾಪ್ತಿಗೆ ಬರುವುದನ್ನು ಯಾವಾಗಲೂ ವಿರೋಧಿಸಿದೆ.

# ವಿದ್ಯುತ್ ಗಾಗಿ ಬೇಡಿಕೆ ಇಡುವ ಬುಡಕಟ್ಟು ಜನಾಂಗವನ್ನು ಅರಣ್ಯದಿಂದ ಸ್ಥಳಾಂತರಿಸಿ ವನ್ಯಜೀವಿ ಮಂಡಳಿ ಸೂಚನೆ



**ಬೆಂಗಳೂರು:** ಕುದುರೆಮುಖ ವನ್ಯಜೀವಿ ಅಭಯಾರಣ್ಯದ ಬುಡಕಟ್ಟು ಜನಾಂಗದವರಿಗೆ ಅರಣ್ಯ ಪ್ರದೇಶದೊಳಗೆ ವಿದ್ಯುತ್ ಒದಗಿಸುವ ಬದಲು ಅವರನ್ನು ಸ್ಥಳಾಂತರಿಸುವಂತೆ ರಾಜ್ಯ ವನ್ಯಜೀವಿ ಮಂಡಳಿಯ ಸದಸ್ಯರು ಸೂಚಿಸಿದ್ದಾರೆ.

ಕರ್ನಾಟಕ ಅರಣ್ಯ, ಪರಿಸರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಅಧ್ಯಕ್ಷತೆಯಲ್ಲಿ ನಡೆದ ಮೂರನೇ ಸ್ಥಾಯಿ ಸಮಿತಿ ಸಭೆಯಲ್ಲಿ ಪುನರ್ವಸತಿ ಉತ್ತಮ ಆಯ್ಕೆಯಾಗಿದೆ ಎಂದು ಸೂಚಿಸಲಾಯಿತು. ಹಲವು ಹಳ್ಳಿಗಳಲ್ಲಿ ಕೆಲವೇ ಜನರು ವಿದ್ಯುತ್ ಬೇಡಿಕೆ ಇಡುತ್ತಿರುವುದರಿಂದ, ಅವರನ್ನು ಅರಣ್ಯದಿಂದ ಹೊರಗೆ ಸ್ಥಳಾಂತರಿಸುವುದು ಉತ್ತಮ ಮತ್ತು ಕಾರ್ಯಸಾಧ್ಯವಾದ ಆಯ್ಕೆಯಾಗಿದೆ ಎಂದು ಮೂಲಗಳು ಟಿಎನ್ಐಇಗೆ ತಿಳಿಸಿವೆ.

ಶೆಟ್ಟಿಹಳ್ಳಿ ಅರಣ್ಯ ಪ್ರದೇಶದ ಮರು ಸಮೀಕ್ಷೆ ನಡೆಸಿ, ಹೊರಗಿಡಲಾದ ಪ್ರದೇಶಗಳನ್ನು ಸೇರಿಸಲು ಸಹ ನಿರ್ಧರಿಸಲಾಯಿತು. ಕ್ಯಾಸಲ್‌ರಾಕ್‌ನಿಂದ ಹೊಸಪೇಟೆವರೆಗಿನ ಹಳಿ ದ್ವಿಗುಣಗೊಳಿಸುವ ಪ್ರಸ್ತಾವನೆಯ ಬಗ್ಗೆಯೂ ಸಚಿವರಿಗೆ ತಿಳಿಸಲಾಯಿತು, ಇದಕ್ಕಾಗಿ ಯೋಜನೆಯ ವನ್ಯಜೀವಿ ಮತ್ತು ಪರಿಸರ ಪ್ರಭಾವದ ಕುರಿತು ನಿರ್ಣಯಿಸಲು ಹಾಗೂ ವರದಿಯನ್ನು ಸಲ್ಲಿಸಲು ಸಮಿತಿ ರಚಿಸಲಾಗುವುದು. ಮುಂದಿನ ಸಭೆಯಲ್ಲಿ ವರದಿಯನ್ನು ಮಂಡಿಸಲು ನಿರ್ಧರಿಸಲಾಯಿತು.

## ಮನೆ ವಸ್ತುಗಳ ಸಾಗಣೆ ವೇಳೆ ಗೃಹೋಪಯೋಗಿ ವಸುಗಳಿಗೆ ಧಕ್ಕೆ, ಶ್ರೀರಾಮ್ ಪ್ಯಾಕರ್ಸ್ ಮತ್ತು ಮೂವರ್ ಸಂಸ್ಥೆಗೆ ಮಾಲಿಕರಿಗೆ ದಂಡದ ಜೊತೆಗೆ ಪರಿಹಾರ ನೀಡಲು ಆದೇಶ

**ದಾವಣಗೆರೆ :** ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಕೆ.ಮನೋಹರ್ ಕುಮಾರ್ ರವರ ಮನೆಯ ಗೃಹೋಪಯೋಗಿ ವಸ್ತುಗಳನ್ನು ಚಿತ್ರದುರ್ಗದಿಂದ ದಾವಣಗೆರೆಯ ನಿವಾಸದ ಮನೆಗೆ 2024 ರ ಅಕ್ಟೋಬರ್ 20 ರಂದು ಸಾಗಾಣಿಕೆ ಮಾಡುವಾಗ ಶ್ರೀರಾಮ್ ಪ್ಯಾಕರ್ಸ್ & ಮೂವರ್ಸ್‌ನ ಮಾಲೀಕರಾದ ರಮೇಶ್ ಇವರಿಗೆ ಸಾಗಾಣಿಕೆ ವೆಚ್ಚವೆಂದು ರೂ.14,000/–ಗಳ ಮೊತ್ತವನ್ನು ನೀಡಿ, ಗೃಹೋಪಯೋಗಿ ವಸ್ತುಗಳನ್ನು ರಸ್ತೆಯ ಮುಖಾಂತರ ಚಿತ್ರದುರ್ಗದಿಂದ ದಾವಣಗೆರೆಯ ನಿವಾಸದ ಮನೆಗೆ ಸಾಗಾಣಿಕೆ ಮಾಡಲಾಗಿರುತ್ತದೆ.

ಆದರೆ ಶ್ರೀರಾಮ್ ಪ್ಯಾಕರ್ಸ್ & ಮೂವರ್ಸ್, ದಾವಣಗೆರೆ ಇವರು ಮನೆಯ ಗೃಹೋಪಯೋಗಿ ವಸ್ತುಗಳಿಗೆ, ಪೀಠೋಪಕರಣಗಳಿಗೆ ಸರಿಯಾಗಿ ಪ್ಯಾಕಿಂಗ್ ಮಾಡದೆ ಸಾಗಾಣಿಕೆ ಮಾಡಿದ್ದರಿಂದ 'ಡಬಲ್ ವುಡನ್ ಕಾಟ್, ವುಡನ್ ಟೀಪಾಯ್, ಫ್ರಿಡ್ಜ್, ಹೊಸದಾಗಿ ಖರೀದಿ ಮಾಡಲಾದ ಮರದ ಸೋಫಾ ಸೆಟ್ ಹ್ಯಾಂಡಲ್‌ಗಳಲ್ಲಿ 4–5 ಕಡೆಗಳಲ್ಲಿ ಡ್ಯಾಮೇಜ್, ಕ್ರ್ಯಾಚಸ್ ಆಗಿದ್ದು, ಈ ಬಗ್ಗೆ ದೂರುದಾರರಾದ ಕೆ.ಮನೋಹರ್ ಪ್ಯಾಕರ್ಸ್ ಅಂಡ್ ಮೂವರ್ಸ್ ಅವರಿಗೆ ಮೂರು ತಿಂಗಳಿನಿಂದಲೂ ಹಲವಾರು ಬಾರಿ ದೂರವಾಣಿ ಮೂಲಕ ಕೇಳಿಕೊಂಡರೂ ಪೀಠೋಪಕರಣಗಳನ್ನು ಸರಿಪಡಿಸಿಕೊಡದೆ ಕಾಲ ದೂಡುತ್ತಾ ಬಂದಿರುತ್ತಾರೆ.

# ಬಿಜೆಪಿ ಕೈಗೊಂಬೆಯಾಗಿದೆ ಭಾರತದ ಚುನಾವಣಾ ಆಯೋಗ

## ನಮ್ಮ ಮೌನದ ಸಮಯ ಮುಗಿದಿದೆ: ಸುರ್ಜೇವಾಲಾ

**ಬೆಂಗಳೂರು:** ಭಾರತೀಯ ಚುನಾವಣಾ ಆಯೋಗ ನಿಷ್ಪಕ್ಷಪಾತ ಸಾಂವಿಧಾನಿಕ ಸಂಸ್ಥೆಯಾಗಿ ಉಳಿದಿಲ್ಲ. ಚುನಾವಣೆಗಳನ್ನು ತಿರುಚುವ ಬಿಜೆಪಿಯ ಯಂತ್ರದಂತೆ ಕಾರ್ಯನಿರ್ವಹಿಸುತ್ತಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಹೇಳಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಸಿಐ ತಟಸ್ಥ ಸಂಸ್ಥೆಯಾಗಿ ಕಾರ್ಯನಿರ್ವಹಿಸುವುದನ್ನು ನಿಲ್ಲಿಸಿದೆ. ಬಿಜೆಪಿ ಚುನಾವಣಾ ಆಯೋಗವನ್ನೇ ತನ್ನ ಹೊಸ ಅಸ್ತ್ರವನ್ನಾಗಿಸಿಕೊಂಡಿದೆ. ಮತದಾರರ ಹೆಸರುಗಳನ್ನು ಅಳಿಸಿ ಹಾಕಲು, ವಿರೋಧಿ ಧ್ವನಿಗಳನ್ನು ದಮನ ಮಾಡಲು ಮತ್ತು ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗಳ ಅಡಿಪಾಯವನ್ನೇ ಅಲುಗಾಡಿಸಲು ಸಾಧನವಾಗಿ ಬಳಸಿಕೊಳ್ಳುತ್ತಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ನಾವು ನೋಡಿದ್ದು, ಕೇವಲ ಆರಂಭವಷ್ಟೇ. ಅದು ಕೇವಲ ದುರುಪಯೋಗವಲ್ಲ, ಇದು ಪೂರ್ವ ನಿಯೋಜಿತ ವಂಚನೆ.

ಬಿಜೆಪಿ ಕೇವಲ ಚುನಾವಣೆಗಳನ್ನು ತಿರುಚುತ್ತಿಲ್ಲ. ಅದು ಒಬ್ಬೊಬ್ಬರ ಹೆಸರನ್ನು ಅಳಿಸುವ ಮೂಲಕ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ. ಇದು ಚುನಾವಣಾ ಪ್ರಚಾರವಲ್ಲ ಇದು ಫಲಿತಾಂಶಗಳನ್ನೇ ಬದಲಿಸುವ ತಂತ್ರ. ಮುಕ್ತ ಮತ್ತು ನ್ಯಾಯಸಮ್ಮತ



ಚುನಾವಣೆಗಳ ರಕ್ಷಕನಾಗಬೇಕಿದ್ದ ಚುನಾವಣಾ ಆಯೋಗ, ಇಂದು ಭಾರತೀಯ ಪ್ರಜಾಪ್ರಭುತ್ವದ ಸಮಾಧಿ ಮಾಡುವ ಪ್ರಕ್ರಿಯೆಯ ನಿರ್ದೇಶಕನಾಗಿ ಮಾರ್ಪಟ್ಟಿದೆ.

ಬಿಹಾರ ರಾಜ್ಯ ಒಂದರಲ್ಲೇ ಸುಮಾರು 65 ಲಕ್ಷ ಮತದಾರರ ಹೆಸರುಗಳನ್ನು ಮತಪಟ್ಟಿಯಿಂದ ತೆಗೆದುಹಾಕಲಾಗಿದೆ. ಇದು ಕೇವಲ ತಾಂತ್ರಿಕ ದೋಷವಲ್ಲ, ಇದು ಪ್ರಜಾಪ್ರಭುತ್ವದ ಮೇಲಿನ ಕ್ರೂರ ಪ್ರಹಾರ. ಮತಪಟ್ಟಿಯಿಂದ ಕೈ ಬಿಡಲಾದ ಮತದಾರರಲ್ಲಿ ಹೆಚ್ಚಿನವರು ಬಡವರು, ದಲಿತರು, ಹಿಂದುಳಿದ ವರ್ಗದವರು ಮತ್ತು ಅಲ್ಪಸಂಖ್ಯಾತರು. ಇವರೆಲ್ಲರೂ ವಿರೋಧ ಪಕ್ಷಗಳ ನಿಷ್ಠರು ಹಾಗೂ ಬೆಂಬಲಿಗರಾಗಿದ್ದಾರೆ.

ಮಹಾರಾಷ್ಟ್ರದಲ್ಲಿ ಕೇವಲ 30 ನಿಮಿಷಗಳಲ್ಲಿ 70 ಲಕ್ಷ ಮತಗಳು ಚಲಾವಣೆಯಾದವು. ಇದು ಮತದಾನವಲ್ಲ ಇದು ಡಿಜಿಟಲ್ ಹ್ಯಾಕಿಂಗ್. ಈ ವಿಷಯವನ್ನು ರಾಹುಲ್ ಗಾಂಧಿಯವರು ನೇರವಾಗಿ ಚುನಾವಣಾ ಆಯೋಗದ ಗಮನಕ್ಕೆ ತಂದರೂ, ಅಲ್ಲಿಂದ ಸಿಕ್ಕಿದ್ದು ಮೌನದ ಪ್ರತ್ಯುತ್ತರ. ತನಿಖೆಯೂ ಇಲ್ಲ, ಉತ್ತರವೂ ಇಲ್ಲ. ಹೊಣೆಗಾರಿಕೆಯೂ ಇಲ್ಲ. ಆಯೋಗವು ಸಾಂವಿಧಾನಿಕ ಸಂಸ್ಥೆಯಂತೆ ವರ್ತಿಸದೆ, ಬಿಜೆಪಿಯ ಆದೇಶಕ್ಕೆ ತಲೆಬಾಗುವ ಹೇಡಿಯಂತೆ ವರ್ತಿಸುತ್ತಿದೆ.

ಲೋಕಸಭಾ ಚುನಾವಣೆ ವೇಳೆ ಬೆಂಗಳೂರು ಸೆಂಟ್ರಲ್ ಕ್ಷೇತ್ರದಲ್ಲಿ ಕೇವಲ 10 ನಿಮಿಷಗಳಲ್ಲಿ 65,000 ಮತಗಳು ಚಲಾವಣೆಯಾಗಿವೆ.

## ಯುವನಿಧಿ: ಸ್ವಯಂ ಘೋಷಣೆಗೆ ಸೂಚನೆ

**ಚಿಕ್ಕಮಗಳೂರು :** ಕರ್ನಾಟಕ ಸರ್ಕಾರದ ಯುವನಿಧಿ ಯೋಜನೆಯಡಿ ನೋಂದಣಿಯಾಗಿರುವ ಅರ್ಹ ಫಲಾನುಭವಿಗಳಿಗೆ 2024ರ ಜನವರಿಯಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಈ ಅಭ್ಯರ್ಥಿಗಳು ಇದರ ಸೌಲಭ್ಯವನ್ನು ಪಡೆಯುವುದನ್ನು ಮುಂದುವರಿಸಬೇಕಾದಲ್ಲಿ ಮೂರು ತಿಂಗಳಿಗೊಮ್ಮೆ ತಾನು ನಿರುದ್ಯೋ–ಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲ ಎಂದು ಹಾಗೂ ಸ್ವಯಂ ಉದ್ಯೋಗಿಯಲ್ಲ ಎಂದು ಸ್ವಯಂ ಘೋಷಣೆಯನ್ನು ಮಾಡಬೇಕಾಗಿದೆ. ಈ ತಿಂಗಳು ಆಗಸ್ಟ್ 25ರ ಒಳಗಾಗಿ ಸ್ವಯಂ ಘೋಷಣೆ ಮಾಡಿಕೊಳ್ಳಲು ವೆಬ್‌ಸೈಟ್ ವಿಳಾಸ: https://sevasindhugs.karnataka.gov.in ಅನ್ನು ಅವಲಂಬಿಸಬಹುದು. ಹೆಚ್ಚಿನ ಮಾಹಿತಿಗೆ ನಗರದ ಉದ್ಯೋಗ ವಿನಿಮಯ ಕೇಂದ್ರದ ಕಚೇರಿ(08262–295538)ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಗುವಿನ ಉತ್ತಮ ಆರೋಗ್ಯಕ್ಕೆ ಎದೆಹಾಲು ಸಹಕಾರಿ

## ವಿಶ್ವ ಸ್ತನ್ಯಪಾನ ಸಪ್ತಾಹದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್

**ಚಿತ್ರದುರ್ಗ :** ತಾಯಿಯ ಎದೆಹಾಲು ಅಮೃತಕ್ಕೆ ಸಮ. ಮಗುವಿನ ಉತ್ತಮ ಆರೋಗ್ಯಕ್ಕೆ ಎದೆಹಾಲು ಸಹಕಾರಿ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ. ಅಭಿನವ್ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಬುದ್ದನಗರ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಗುರುವಾರ ಆಯೋಜಿಸಲಾದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

"ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ, ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ" ಎಂಬುದು ಈ ಬಾರಿಯ ವಿಶ್ವ ಸ್ತನ್ಯಪಾನ ಸಪ್ತಾಹದ ಘೋಷ ವಾಕ್ಯವಾಗಿದೆ. ಮಗುವಿನ ಉತ್ತಮ ಆರೋಗ್ಯಕ್ಕೆ ತಾಯಿಯ ಎದೆಹಾಲು ಮೊದಲ ಆರು ತಿಂಗಳು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಸಾಮಾನ್ಯವಾಗಿ ಭಾರತ ದೇಶದಲ್ಲಿ




ಒಂದು ಕುಟುಂಬ ಮಕ್ಕಳ ಆರೋಗ್ಯ–ಕ್ಕೆ ವಾರ್ಷಿಕವಾಗಿ ರೂ.15 ಸಾವಿರದಿಂದ ರೂ.25 ಸಾವಿರದವರೆಗೂ ಖರ್ಚು ಮಾಡುತ್ತಿದ್ದಾರೆ. ಈ ಖರ್ಚನ್ನು ತಪ್ಪಿಸಲು ಮಗು ಜನಿಸಿದ ಒಂದು ಘಂಟೆಯ ಒಳಗೆ ತಾಯಿ ಎದೆ ಹಾಲನ್ನು ಕುಡಿಸುವುದು ಪ್ರಮುಖ ಮತ್ತು ಆರು ತಿಂಗಳ ತನಕ ಮಗುವಿಗೆ ಏನನ್ನು ನೀಡದೆ ತಾಯಿ ಎದೆ ಹಾಲನ್ನು ನೀಡುವುದು ಸೂಕ್ತ. ತಾಯಿ ಎದೆ ಹಾಲಿನಲ್ಲಿ ಮಗುವಿನ ಬೆಳವಣಿಗೆಗೆ ಬೇಕಾದ ಎಲ್ಲಾ ಅಂಶಗಳು ಇರುತ್ತದೆ ಎಂದು ಹೇಳಿದರು. ಆರು ತಿಂಗಳ ತನಕ ತಾಯಿ ಎದೆಹಾಲನ್ನು ನೀಡುತ್ತಾ, ಇದನ್ನು ಎರಡು ವರ್ಷಗಳವರೆಗೂ ವಿಸ್ತರಿಸಿ ಮಗುವಿಗೆ ಹಾಲನ್ನು ನೀಡಬೇಕು. ಎರಡು ವರ್ಷಗಳ ನಂತರ ಎದೆಹಾಲಿನ ಜತೆಗೆ ಪೂರಕ ಆಹಾರವಾದ ಕಿಚಡಿ, ರಾಗಿಸರಿ, ಹಣ್ಣು ಮುಂತಾದವುಗಳನ್ನು ಹಂತ–ಹಂತವಾಗಿ ನೀಡುತ್ತಾ ಸಾಗಬೇಕು ಎಂದು ಹೇಳಿದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮಾತನಾಡಿ, ಮಗುವಿಗೆ ತಾಯಿ ಎದೆ ಹಾಲು ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದ ಅವರು, ತಾಯಂದಿರು ಮಕ್ಕಳಿಗೆ ಎದೆ ಹಾಲು ನಿಗದಿತ ಅವಧಿವರೆಗೆ ನೀಡುವುದರಿಂದ ಹಲವು ಸೋಂಕುಗಳಿಂದ ರಕ್ಷಿಸಬಹುದು ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಬಿ.ವಿ.ಗಿರೀಶ್ ಮಾತನಾಡಿ, ತಾಯಿ ಎದೆಹಾಲು ಅಮೃತ, ಇದರಲ್ಲಿ ಎಲ್ಲಾ ಪೋಷಕಾಂಶ ಆಹಾರ ಅಡಗಿರುತ್ತವೆ. ಹಾಗಾಗಿ ತಪ್ಪದೆ ತಮ್ಮ ಮಕ್ಕಳಿಗೆ 6 ತಿಂಗಳವರೆಗೂ ಬೇರೆ ಆಹಾರ ನೀಡದೇ ಬರೀ ತಾಯಿ ಎದೆಹಾಲನ್ನು ಮಾತ್ರ ನೀಡುವುದು ಸೂಕ್ತ ಎಂದು ಹೇಳಿದರು. ಮಗು ಜನಿಸಿದ 48 ಗಂಟೆಗಳ ತನಕ ಸ್ನಾನ ಮಾಡಿಸಬಾರದು. ಮಗುವಿನ ಹೊಕ್ಕಳ ಬಳ್ಳಿಗೆ ಯಾವುದೇ ತರಹ ಔಷಧಿಗಳನ್ನು ಹಚ್ಚುವುದು ತಪ್ಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಟಿ. ಕೃಷ್ಣನಾಯ್ಕ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ, ಜಿಲ್ಲಾ ಆರೋಗ್ಯ ಉಪ ಶಿಕ್ಷಣಾಧಿಕಾರಿ ಗೌರಮ್ಮ, ಬುದ್ಧ ನಗರದ ವೈದ್ಯಾಧಿಕಾರಿ ಡಾ. ಸುರೇಂದ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಕಾರ್ಯಕ್ರಮ ನಿರೂಪಣಾಧಿಕಾರಿ ಮಂಜುನಾಥ ಸೇರಿದಂತೆ ಮತ್ತಿತರರು ಇದ್ದರು.

## ಬಿಹಾರ ಸಮೀಕ್ಷೆಯಲ್ಲಿ ನಿತೀಶ್ ಕುಮಾರ್‌ಗೆ ಭಾರೀ ಹಿನ್ನಡೆ, ಬಿಜೆಪಿ ಸಿಎಂ ಅಭ್ಯರ್ಥಿಗೆ ಹೆಚ್ಚಿದ ಕೂಗು



**ಪಾಟ್ನಾ:** ಬಿಹಾರ ಹಾಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಜನಪ್ರಿಯತೆ ದಿನ ದಿನಕ್ಕೂ ಕಡಿಮೆಯಾಗುತ್ತಿದೆ. ಇದೀಗ ಒಂದು ಸಮೀಕ್ಷೆಯಲ್ಲೂ ಇದೇ ಅಭಿಪ್ರಾಯ ವ್ಯಕ್ತವಾಗಿದ್ದು, ಬಿಜೆಪಿ ಸಿಎಂ ಅಭ್ಯರ್ಥಿಗೆ ಆಗ್ರಹ ಹೆಚ್ಚಾಗಿದೆ.

ಜಾತಿ ಭೇದವಿಲ್ಲದೆ ಮೂರನೇ ಒಂದು ಭಾಗದಷ್ಟು ಮತದಾರರು, ಮುಂಬರುವ ಬಿಹಾರ ಚುನಾವಣೆಯನ್ನು ನಿತೀಶ್ ಕುಮಾರ್ ಅವರ ನಾಯಕತ್ವದಲ್ಲಿ ಎದುರಿಸುವ ಬದಲು ಬಿಜೆಪಿ ತನ್ನದೇ ಆದ ಮುಖ್ಯಮಂತ್ರಿ ಅಭ್ಯರ್ಥಿಯನ್ನು ಘೋಷಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

'ಸ್ಟೇಟ್ ವೈಬ್ ಸರ್ವೇ ಆಫ್ ಬಿಹಾರ್ ಎಲೆಕ್ಷನ್ಸ್ 2025' ಪ್ರಕಾರ, ಶೇ. 33.7 ರಷ್ಟು ಜನರು ಬಿಜೆಪಿ ತನ್ನದೇ ಸಿಎಂ ಅಭ್ಯರ್ಥಿಯನ್ನು ಘೋಷಿಸಬೇಕು ಎಂದು ಹೇಳಿದ್ದಾರೆ. ಕೇವಲ ಶೇ. 24.2ರಷ್ಟು ಜನರು ಮಾತ್ರ ನಿತೀಶ್ ಕುಮಾರ್ ಉತ್ತಮ ಕೆಲಸ ಮಾಡಿದ್ದರಿಂದ ಎನ್‌ಡಿಎ ಅವರ ನಾಯಕತ್ವದಲ್ಲಿಯೇ ಚುನಾವಣೆ ಎದುರಿಸಬೇಕು ಎಂದಿದ್ದಾರೆ. ಬಿಜೆಪಿಗೆ ಬೇರೆ ಆಯ್ಕೆಗಳಿಲ್ಲದ ಕಾರಣ ನಿತೀಶ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಬಿಂಬಿಸುವುದು ಅನಿವಾರ್ಯ ಎಂದೂ ಶೇ. 23.1 ರಷ್ಟು ಜನರು ಹೇಳಿದ್ದಾರೆ.

ಜಾತಿವಾರು ವಿಶ್ಲೇಷಣೆಯ ಪ್ರಕಾರ ಬಿಜೆಪಿಯ ಸಿಎಂ ಅಭ್ಯರ್ಥಿ ಬೇಕೆಂಬ ಕೂಗು ಹಿಂದುಳಿದ ವರ್ಗಗಳಲ್ಲಿ ಜೋರಾಗಿದ್ದು, ಶೇ. 38ರಷ್ಟು ಜನರು ಈ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ನಂತರದ ಸ್ಥಾನದಲ್ಲಿ ಮೇಲ್ಜಾತಿ ಹಿಂದೂಗಳು ಶೇ. 36, ಪರಿಶಿಷ್ಟ ಜಾತಿ/ದಲಿತರು ಶೇ. 30, ಪರಿಶಿಷ್ಟ ಪಂಗಡದವರು ಶೇ. 29 ಮತ್ತು ಮುಸ್ಲಿಮರು ಶೇ. 26ರಷ್ಟು ಇದ್ದಾರೆ.

ಇದು ನಿತೀಶ್ ಕುಮಾರ್ ಕಥೆಯಾದರೆ ಮುಖ್ಯಮಂತ್ರಿ ಸ್ಥಾನಕ್ಕೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರಿಗೆ ಹೆಚ್ಚಿನ ಬೆಂಬಲ ವ್ಯಕ್ತವಾಗಿದೆ. ಈ ಸಮೀಕ್ಷೆಯಲ್ಲೂ ಶೇ. 32.1ರಷ್ಟು ಜನರು ತೇಜಸ್ವಿ ಅವರೇ ಮುಂದಿನ ಸಿಎಂ ಆಗಬೇಕು ಎಂದು ಬಯಸಿದ್ದರೆ, ಶೇ. 25ರಷ್ಟು ಜನರು ನಿತೀಶ್ ಪರ ಮತ ಚಲಾಯಿಸಿದ್ದಾರೆ.

## ಮಾಲೆಗಾಂವ್ ಪ್ರಕರಣ : RSS ಮುಖ್ಯಸ್ಥರ ಬಂಧನಕ್ಕೆ ಭಾರೀ ಒತ್ತಡವಿತ್ತು, ಮಾಜಿ ಅಧಿಕಾರಿಯ ಸ್ಫೋಟಕ ಹೇಳಿಕೆ



**ಮುಂಬಯಿ :** ಮಾಲೆಗಾಂವ್ ಸ್ಫೋಟ ಪ್ರಕರಣದ ತನಿಖೆಯೇ ಒಂದು ಕಟ್ಟುಕಥೆ. ನಕಲಿ ತನಿಖಾಧಿಕಾರಿಗೆ ಅದರ ನೇತೃತ್ವ ವಹಿಸಿ ?ಕೇಸರಿ ಭಯೋತ್ಪಾದನೆ ಎಂಬುದಾಗಿ ಬಿಂಬಿಸುವ ಹುನ್ನಾರ ನಡೆದಿತ್ತು? ಎಂದು ಮಾಜಿ ಎಟಿಎಸ್ ಅಧಿಕಾರಿ ನಿವೃತ್ತ ಇನ್ಸ್‌ಪೆಕ್ಟರ್ ಮೆಹಿಬೂಬ್ ಮುಜಾವರ್ ಅಸಲಿ ಸತ್ಯವನ್ನು ಹೊರಗೆಡವಿದ್ದಾರೆ.

ಮಹಾರಾಷ್ಟ್ರ ಭಯೋತ್ಪಾದನೆ ನಿಗ್ರಹ ದಳದ (ATS) ಮಾಜಿ ಅಧಿಕಾರಿ ಮುಜಾವರ್, ಗುರುವಾರ (ಜುಲೈ 31) ಸೋಲಾಪುರದಲ್ಲಿ ಮಾಲೆಗಾಂವ್ ಸ್ಫೋಟ ಪ್ರಕರಣದ ತನಿಖೆ? ಬಗೆಗಿನ ವಾಸ್ತವ ಸಂಗತಿಯನ್ನು ಬಿಚ್ಚಿಟ್ಟಿದ್ದಾರೆ. ಈ ಪ್ರಕರಣದಲ್ಲಿ ಖಖಖ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನು ಸಿಲುಕಿಸಿ ಬಂಧಿಸಲೂ ನನಗೆ ಸೂಚನೆ ನೀಡಲಾಗಿತ್ತು ಎಂಬ ಕಟು ಸತ್ಯವನ್ನು ಬಯಲಿಗೆಳೆದಿದ್ದಾರೆ.

2008ರ ಸೆ.29ರಂದು ನಡೆದ ಮಾಲೆಗಾಂವ್ ಸ್ಫೋಟ ಪ್ರಕರಣದ ತನಿಖೆ ನಡೆಸಿದ ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್) ತಂಡದಲ್ಲಿದ್ದ ನಿವೃತ್ತ ಪೊಲೀಸ್ ಇನ್ಸ್‌ಪೆಕ್ಟರ್ ಮೆಹಿಬೂಬ್ ಮುಜಾವರ್ ಸ್ವತಃ ತನಿಖೆ ಹಿಂದಿನ ಸಂಚನ್ನು ಇದೀಗ ಬಹಿರಂಗಪಡಿಸಿದ್ದಾರೆ. ಈ ಪ್ರಕರಣದ ಮೂಲಕ ?ಕೇಸರಿ ಭಯೋತ್ಪಾದನೆ? ಎಂಬ ಹಸಿ ಸುಳ್ಳನ್ನೇ ಸತ್ಯವಾಗಿ ಬಿಂಬಿಸುವ ಪ್ರಯತ್ನ ನಡೆದಿತ್ತು ಎಂದು ಹೇಳಿದ್ದಾರೆ.

## ಮಹದೇವಪುರ, ಸಾಂಗ್ಲಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಮತ ಕಳ್ಳತನ! ಬ್ಯಾಲೆಟ್ ಪದ್ಧತಿ ಮತ್ತೆ ಬರಲಿ: ಎಂಬಿ ಪಾಟೀಲ್



**ಬೆಂಗಳೂರು:** ಮಹದೇವಪುರ, ಸಾಂಗ್ಲಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಕೊನೆಯ ಕ್ಷಣಗಳಲ್ಲಿ ಕಾಂಗ್ರೆಸ್ ಸೋಲು ಕಂಡಿತ್ತು. ಈ ಎಲ್ಲಾ ಮಾಹಿತಿಗಳು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಬಳಿ ಇದೆ. ಹೀಗಾಗಿ ಇವಿಎಂ ಬದಲಾಗಿ ಬ್ಯಾಲೆಟ್ ಪದ್ಧತಿ ಮತ್ತೆ ಬರಲಿ ಎಂದು ಸಚಿವ ಎಂಬಿ ಪಾಟೀಲ್ ಅಭಿಪ್ರಾಯಪಟ್ಟರು.

ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಮತಗಳ್ಳತನ ವಿಚಾರವಾಗಿ ರಾಹುಲ್ ಗಾಂಧಿ ಆರೋಪಕ್ಕೆ ಪ್ರತಿಕ್ರಿಯೆ ನೀಡಿ, ರಾಹುಲ್ ಗಾಂಧಿ ಬಳಿ ಪುರಾವೆ ಇವೆ. ಮಹದೇವಪುರದಲ್ಲಿ ತಮ್ಮ ಅಭ್ಯರ್ಥಿ ಗೆಲ್ಲುತ್ತಾರೆ ಎಂದಿತ್ತು. ಆದರೆ ಕೊನೆಯ ಕ್ಷಣದಲ್ಲಿ ಸೋಲು ಕಂಡಿದ್ದೆವು. ಸಾಂಗ್ಲಿಯಲ್ಲಿ ನಮ್ಮ ಅಭ್ಯರ್ಥಿ ಸೋತರು. ಇದೇ ರೀತಿ ಸಾಕಷ್ಟು ಕಡೆ ಆಗಿದೆ. ಈ ಬಗ್ಗೆ ಅನೇಕ ಮಾಹಿತಿ ರಾಹುಲ್ ಗಾಂಧಿ ಬಳಿ ಇವೆ ಎಂದರು.

# ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು!

## ಅಮೆರಿಕಾ ಅಧ್ಯಕ್ಷರ ನಡೆಗೆ ಎಚ್.ಡಿ .ದೇವೇಗೌಡ ತೀವ್ರ ಆಕ್ಷೇಪ



**ಬೆಂಗಳೂರು:** ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು! ಹೀಗಂತ ಗುಡುಗಿದ್ದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ. ಭಾರತದ ಆರ್ಥಿಕತೆ ಕುರಿತಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡೆಗೆ ದೇವೇಗೌಡ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಭಾರತದ ಆರ್ಥಿಕತೆ ಸತ್ತಿದೆ ಎಂದಿರುವ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರ ಹೇಳಿಕೆ ಬಗ್ಗೆ ತೀವ್ರ ಅಚ್ಚರಿ ವ್ಯಕ್ತಪಡಿಸಿರುವ ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡರು; ಬಹುಶಃ ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು ಎಂದು ಟೀಕಿಸಿದ್ದಾರೆ.

ಈ ಕುರಿತಾಗಿ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಮಾಜಿ ಪ್ರಧಾನಮಂತ್ರಿಗಳು, ಟ್ರಂಪ್ ಅವರ ವರ್ತನೆ, ಭಾಷೆ ಅವರ ಹೇಳಿಕೆಯ ಇನ್ನಿತರ ಅಂಶಗಳ ಬಗ್ಗೆ ಅತೀವ ಅತೃಪ್ತಿ ವ್ಯಕ್ತಪಡಿಸಿದ್ದಾರೆ.

ಭಾರತದಲ್ಲಿ ಒಬ್ಬ ಸಣ್ಣ ವ್ಯಾಪಾರಿ ಮತ್ತು ಬಡರೈತ ಕೂಡ ತನ್ನ ವ್ಯವಹಾರವನ್ನು ಬಹಳ ಘನತೆ, ಸಮಗ್ರತೆ ಮತ್ತು ಮಾನವೀಯತೆಯಿಂದ ನಡೆಸುತ್ತಿದ್ದಾನೆ. ಈ ಮೂಲಕ ಟ್ರಂಪ್ ಅವರಿಗೆ ಅನೇಕ ಪಾಠಗಳನ್ನು ಕಲಿಸಬಹುದು.

ಎಲ್ಲರಂತೆ ನಾನು ಕೂಡ ಭಾರತದ ಆರ್ಥಿಕತೆಯ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಧಾರ ರಹಿತ ಮತ್ತು ಕೋಪದ ಹೇಳಿಕೆಗಳಿಂದ ಆಶ್ಚರ್ಯಚಕಿತನಾಗಿದ್ದೇನೆ. ಆಧುನಿಕ ಇತಿಹಾಸದಲ್ಲಿ ಇಷ್ಟೊಂದು ಅಸ್ಥಿರ, ಅನಾಗರಿಕ ಮತ್ತು ಬೇಜವಾಬ್ದಾರಿಯುತ ರಾಷ್ಟ್ರಮುಖ್ಯಸ್ಥರನ್ನು ನಾನು ಕಂಡಿಲ್ಲ ಎಂದು ನಾನು ಭಾವಿಸುತ್ತೇನೆ.

ಟ್ರಂಪ್ ಅವರು ಭಾರತದೊಂದಿಗೆ ಮಾತ್ರವಲ್ಲ, ಜಗತ್ತಿನಾದ್ಯಂತ ಪ್ರತೀ ದೇಶದೊಂದಿಗೆ ಕೆಟ್ಟದಾಗಿ ವರ್ತಿಸಿದ್ದಾರೆ. ಅವರು ತಮ್ಮ ದೀರ್ಘಕಾಲದ ಮಿತ್ರರಾಷ್ಟ್ರಗಳನ್ನು ಸಹ ಬಿಟ್ಟಿಲ್ಲ. ಅವರಲ್ಲಿ ಮೂಲಭೂತವಾಗಿ ಏನೋ ಸಮಸ್ಯೆ ಇದೆ. ರಾಜತಾಂತ್ರಿಕತೆ ಅಥವಾ ರಾಜಕೀಯದ ಮೂಲಕ ಅದನ್ನು ಪತ್ತೆ ಹಚ್ಚಲು ಅಥವಾ ಪರಿಹರಿಸಲು ಸಾಧ್ಯವಿಲ್ಲ.

ಅವರ ಕೋಪದ ಸ್ವಭಾವದ ಬಗ್ಗೆ ಇದಕ್ಕಿಂತ ಹೆಚ್ಚಿಗೆ ಹೇಳುವುದು ಸರಿಯಲ್ಲ. ಏಕೆಂದರೆ, ಅದು ನಮ್ಮ ತತ್ವಾದರ್ಶಗಳಿಗೆ, ಬದ್ಧತೆ ಕಡಿಮೆ ಎನಿಸುತ್ತದೆ. ಭಾರತದ ಸಣ್ಣ ವ್ಯಾಪಾರಿ ಮತ್ತು ಬಡರೈತ ಕೂಡ ತಮ್ಮ ವ್ಯವಹಾರವನ್ನು ಬಹಳ ಘನತೆ, ಸಮಗ್ರತೆ ಮತ್ತು ಮಾನವೀಯತೆಯಿಂದ ನಡೆಸುತ್ತಾ ಟ್ರಂಪ್‌ಗೆ ಅನೇಕ ಪಾಠಗಳನ್ನು ಕಲಿಸಬಹುದು ಎಂದು ನಾನು ಬಲವಾಗಿ ನಂಬಿದ್ದೇನೆ.

ಭಾರತವು ವೈವಿಧ್ಯಮಯ ಮತ್ತು ಪ್ರಜಾಪ್ರಭುತ್ವವಾದಿ ಸಾರ್ವಭೌಮ ರಾಷ್ಟ್ರ. ಸ್ವಾತಂತ್ರ್ಯದ ನಂತರ ಅದು ಯಾವಾಗಲೂ ಅತ್ಯುನ್ನತ ರಾಷ್ಟ್ರೀಯ ಹಿತಾಸಕ್ತಿಗಾಗಿ ಕಾರ್ಯನಿರ್ವಹಿಸುತ್ತಾ ಬಂದಿದೆ.

ಭಾರತವು ತನ್ನ ದಾರಿಗೆ ಎದುರಾಗುವ ಎಲ್ಲಾ ತೊಂದರೆಗಳನ್ನು ಮಾತುಕತೆ ಮೂಲಕವೇ ಪರಿಹರಿಸಿಕೊಂಡು ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಲು ದೇವರು ಕರುಣಿಸಿರುವ ಸಾಮರ್ಥ್ಯ ಮತ್ತು ಶಕ್ತಿಯನ್ನು ಹೊಂದಿದೆ ಎಂಬುದು ನನ್ನ ಭಾವನೆ.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ನಮ್ಮ ರಾಷ್ಟ್ರೀಯ ಹಿತಾಸಕ್ತಿಯನ್ನು ರಾಜಿ ಮಾಡಿಕೊಂಡಿಲ್ಲ ಎಂಬ ಬಗ್ಗೆ ನನಗೆ ಅತೀವ ಸಂತೋಷ ಮತ್ತು ಹೆಮ್ಮೆ ಇದೆ. ಟ್ರಂಪ್ ಅವರ ಬೆದರಿಕೆಗೆ ಭಾರತ ಹೆದರುವುದಿಲ್ಲ ಮತ್ತು ಅಂಥ ಬೆದರಿಕೆಗಳಿಂದ ಭಾರತ ಎಂದಿಗೂ ಇನ್ನೊಬ್ಬರ ತಾಳಕ್ಕೆ ತಕ್ಕಂತೆ ನಡೆಯುವುದಿಲ್ಲ ಎಂದು ಈಗಾಗಲೇ ತೋರಿಸಿಕೊಟ್ಟಿದೆ.

ಇದಕ್ಕೆ ವಿರುದ್ಧವಾಗಿ ರಾಷ್ಟ್ರದ ಅರ್ಧಕ್ಕಿಂತ ಹೆಚ್ಚು ಜನಸಂಖ್ಯೆ ಅವಲಂಬಿಸಿರುವ ಕೃಷಿ ವಲಯ ಮತ್ತು ಸಣ್ಣ ಮತ್ತು ಮಧ್ಯಮ ವ್ಯವಹಾರಗಳನ್ನು ಸಂರಕ್ಷಿಸಲು ಮೋದಿ ಅವರ ಸರಕಾರವು ಪರಿಪೂರ್ಣ ಪ್ರಯತ್ನ ಮಾಡಿದೆ. ಸರಕಾರ ಕೈಕೊಂಡ ದೃಢ ನಿಲುವು ಅಭೂತಪೂರ್ವ ರಾಷ್ಟ್ರೀಯ ಅಭಿವೃದ್ಧಿಯ ಪುನರುಜ್ಜೀವನಕ್ಕೆ ಕಾರಣವಾಗಿದೆ ಎಂದು ಪತ್ರದಲ್ಲಿ ಉಲ್ಲೇಖ ಮಾಡಿದ್ದಾರೆ.

# ನಾವು ಬೀದಿಗಿಳಿದರೆ ನಿಮ್ಮನ್ನು ಮನೆಗೆ ಕಳುಹಿಸುತ್ತೇವೆ

## ರಾಜ್ಯ ಸರ್ಕಾರಕ್ಕೆ ಎ. ನಾರಾಯಣಸ್ವಾಮಿ ಎಚ್ಚರಿಕೆ



**ಬೆಂಗಳೂರು:** ಕೂಡಲೇ ಒಳಮೀಸಲಾತಿ ಜಾರಿ ಮಾಡದೆ ಇದ್ದಲ್ಲಿ ರಾಜ್ಯ ಸರಕಾರದ ವಿರುದ್ಧ ಮಾದಿಗರಿಂದ ಅಸಹಕಾರ ಚಳವಳಿ ನಡೆಸಲಿದ್ದೇವೆ ಎಂದು ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಅವರು ಎಚ್ಚರಿಸಿದ್ದಾರೆ.

ಒಳಮೀಸಲಾತಿ ಜಾರಿ ಮಾಡಲು ಆಗ್ರಹಿಸಿ ಕರ್ನಾಟಕ ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಫ್ರೀಡಂ ಪಾರ್ಕ್ ನಲ್ಲಿ ಇಂದು ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಾದಿಗರು ಇನ್ನು ಕಾಯುವುದಿಲ್ಲ; ಓಲೈಕೆಗೆ ಬಗ್ಗುವುದಿಲ್ಲ ಎಂದು ನುಡಿದರು. ಮುಂದಿನ ಚುನಾವಣೆವರೆಗೆ ಕಾಯುವುದಿಲ್ಲ ಎಂದು ತಿಳಿಸಿದರು.

ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಇಂದು ಹೋರಾಟ ನಡೆಯುತ್ತಿದೆ. ಪಕ್ಷಭೇದ ಮರೆತು ಹೋರಾಟ ನಡೆಯುತ್ತಿದೆ ಎಂದು ವಿವರಿಸಿದರು. ಇದು ಬಿಜೆಪಿ ಹೋರಾಟವಲ್ಲ ಎಂದು ತಿಳಿಸಿದರು. ಕರ್ನಾಟಕ ಸರಕಾರಕ್ಕೆ ಕುರ್ಚಿ ಪ್ರಮುಖವೇ ಅಥವಾ ಸಮಸ್ಯೆಗಳು ಮುಖ್ಯವೇ ಎಂದು ಅವರು ಕೇಳಿದರು. ರಾಜ್ಯ ಸರಕಾರಕ್ಕೆ ಅಭಿವೃದ್ಧಿ ಮುಖ್ಯವೇ ಅಥವಾ ಕುರ್ಚಿ ಮುಖ್ಯವೇ ಎಂದು ಪ್ರಶ್ನೆ ಮಾಡಿದರು.

ಮಾದಿಗರಿಗೆ ನ್ಯಾಯ ಲಭಿಸಿಲ್ಲ; ನಮ್ಮ ಸಹನೆಯ ಕಟ್ಟೆ ಒಡೆದಿದೆ. ಇನ್ನು ಕಾಯಲಾಗದು. ನಾವು ಬೀದಿಗಿಳಿದರೆ ನಿಮ್ಮನ್ನು ಮನೆಗೆ ಕಳುಹಿಸಲು ನಮಗೆ ಗೊತ್ತಿದೆ ಎಂದ ಅವರು, 1976ರಿಂದ ಮಾದಿಗರಿಗೆ ಆದ ಅನ್ಯಾಯದ ವರದಿ ಕೊಡಿ ಎಂದರೆ ಮುಖ್ಯ ಕಾರ್ಯದರ್ಶಿ ಸಭೆ ಮಾಡುವುದಿಲ್ಲ ಎಂದು ಟೀಕಿಸಿದರು.

ಕೇವಲ ಜನಸಂಖ್ಯೆ ಆಧರಿಸಿ ಮೀಸಲಾತಿ ಕೊಡುವುದಲ್ಲ; ಸುಮಾರು 40 ವರ್ಷಗಳಿಂದ ಆದ ಅನ್ಯಾಯವನ್ನು ಪರಿಗಣಿಸಿ ಮೀಸಲಾತಿ ಕೊಡಬೇಕಿದೆ. ಅನೇಕ ದಶಕಗಳಿಂದ ಆದ ಅನ್ಯಾಯ ಪರಿಗಣಿಸಿ ಹೆಚ್ಚು ಮೀಸಲಾತಿ ಕೊಡದೆ ಇದ್ದರೆ ರಾಜ್ಯದ ಮಾದಿಗರು ಹೋರಾಟಕ್ಕೆ ಸನ್ನದ್ಧರಾಗುತ್ತಾರೆ ಎಂದು ಎಚ್ಚರಿಕೆ ನೀಡಿದರು. ಎಲ್ಲ ಚುಕ್ತಾ ಮಾಡಿ ಎಂದು ಆಗ್ರಹಿಸಿದರು. ಹಳೆ ಬಾಕಿ ಚುಕ್ತಾ ಮಾಡದೆ ಇದ್ದರೆ, ತೀವ್ರ ಹೋರಾಟ ಸಂಘಟಿಸುವುದಾಗಿ ತಿಳಿಸಿದರು.

ರಾಜ್ಯದ 26 ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಹೋರಾಟ ನಡೆಯುತ್ತಿದೆ. ಇದು ಮಾದಿಗರ ಜಾಗೃತಿಯ ಸಂಕೇತ ಎಂದು ಅವರು ವಿಶ್ಲೇಷಿಸಿದರು. ಈ ರಾಜ್ಯದ ಅನೇಕ ಶಾಸಕರು ಮಾದಿಗರ ಮತ ಇಲ್ಲದೇ ಎಂಎಲ್‌ಎ ಆಗಲು ಅಸಾಧ್ಯ ಎಂಬುದನ್ನು ನೆನಪಿಸಲು ಬಯಸುವುದಾಗಿ ಹೇಳಿದರು. ಮಾದಿಗರ ಮತ ಪಡೆದು ವಿಧಾನಸೌಧದ ಮೆಟ್ಟಿಲೇರಿದವರಿಗೆ ನಾಲಿಗೆ ಬಿದ್ದು ಹೋಗಿದೆ ಎಂದು ಟೀಕಿಸಿದರು. ಮಾದಿಗರ ಪರವಾಗಿ ಮಾತನಾಡದ ನೀವು ಯಾವ ಯೋಗ್ಯತೆ ಇಟ್ಟುಕೊಂಡು ಮತ ಕೇಳುತ್ತೀರಿ ಎಂದು ಪ್ರಶ್ನಿಸಿದರು.

ಎಲ್ಲರಿಗೂ ನ್ಯಾಯ ಕೊಡುವುದಾಗಿ ಹೇಳುವ ಸಮಾಜವಾದಿ ಮುಖ್ಯಮಂತ್ರಿ ಯಾವುದರ ಚಾಂಪಿಯನ್ ಎಂದು ಕೇಳಿದರು. ಎಲ್ಲ ರಂಗಗಳಲ್ಲೂ ಹಿಂದುಳಿದ ಮಾದಿಗರಿಗೆ ಒಂದೇ ಒಂದು ಯೋಜನೆ ನೀಡಿಲ್ಲ ಎಂದು ಆಕ್ಷೇಪಿಸಿದರು.ಮಾದಿಗರು ಎಲ್ಲ ಕಡೆ ಹಿಂದುಳಿದಿದ್ದಾರೆ. ಎಲ್ಲಿ ಹೋಗಿದೆ ನಿಮ್ಮ ಸಮಾಜವಾದ ಎಂದು ಪ್ರಶ್ನೆ ಮಾಡಿದರು.

ಅಸಹಕಾರ ಚಳವಳಿ ಒಂದೇ ಅಲ್ಲ; ಸರಕಾರವನ್ನು ಕಿತ್ತೊಗೆಯುವ ಚಳವಳಿ ನಡೆಸುತ್ತೇವೆ ಎಂದು ಅವರು ತಿಳಿಸಿದರು. ಈ ಚಳವಳಿಯಲ್ಲಿ ಭಾಗವಹಿಸಿದ ಎಲ್ಲರಿಗೂ ಧನ್ಯವಾದ ಸಮರ್ಪಿಸಿದರು. ಶಾಸಕ ಬಸವರಾಜ ಮತ್ತಿಮಡು, ಬಿಜೆಪಿ ರಾಜ್ಯ ವಕ್ತಾರ ಹೆಚ್. ವೆಂಕಟೇಶ್ ದೊಡ್ಡೇರಿ ಮತ್ತು ಎಸ್.ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಹೂಡಿ ಮಂಜುನಾಥ್, ಸಮಾಜದ ಮುಖಂಡರು ಮತ್ತು ಸಂಘಟನೆಗಳ ಪದಾಧಿಕಾರಿಗಳು ಇದ್ದರು.

# 'ಭಯೋತ್ಪಾದಕ ಕೃತ್ಯಕ್ಕೆ ಸಮ' – ಶಾಲಾ ಟ್ಯಾಂಕ್‌ಗೆ ವಿಷ ಹಾಕಿದ್ದಕ್ಕೆ ಸಿದ್ದರಾಮಯ್ಯ ಕಿಡಿ, ದುರುಳರ ಪತ್ತೆಗೆ ಸೂಚನೆ



**ಹೊಸನಗರ/ಬೆಂಗಳೂರು:** ಶಿವಮೊಗ್ಗ ಜಿಲ್ಲೆ ಹೊಸನಗರ ತಾಲೂಕಿನ ಹೂವಿನಕೋಣೆಯ ಸರಕಾರಿ ಪ್ರಾಥಮಿಕ ಶಾಲೆಯ ಕುಡಿಯುವ ನೀರಿನ ಟ್ಯಾಂಕಿಗೆ ಕಿಡಿಗೇಡಿಗಳು ಕೀಟನಾಶಕ ಬೆರೆಸಿರುವ ಪ್ರಕರಣವನ್ನು ರಾಜ್ಯ ಸರಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಹತ್ತಾರು ಎಳೆಯ ಮಕ್ಕಳ ಮಾರಣ ಹೋಮ ನಡೆಸುವ ದುರುದ್ದೇಶ ಹೊಂದಿದ್ದ ಇದು ಯಾವ ಭಯೋತ್ಪಾದಕ ಕೃತ್ಯಗಳಿಗೂ ಕಡಿಮೆಯಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಅಡುಗೆ ಸಿಬ್ಬಂದಿಯ ಸಮಯ ಪ್ರಜ್ಞೆಯಿಂದಾಗಿ ಘಟಿಸಬಹುದಾಗಿದ್ದ ಬಹುದೊಡ್ಡ ದುರಂತವೊಂದು ತಪ್ಪಿದ್ದು, ಇದಕ್ಕಾಗಿ ಶಾಲೆಯ ಅಡುಗೆ ಸಿಬ್ಬಂದಿಗಳನ್ನು ಅಭಿನಂದಿಸುತ್ತೇನೆ ಎಂದು ಟ್ವೀಟ್ ಮಾಡಿದ್ದಾರೆ.

ಘಟನೆಯ ಕುರಿತು ಸೂಕ್ತ ತನಿಖೆ ನಡೆಸಿ, ಕೃತ್ಯ ಎಸಗಿರುವ ದುರುಳರನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಯಾಗುವಂತೆ ನೋಡಿಕೊಳ್ಳುವಂತೆ ಪೊಲೀಸರಿಗೆ ಸೂಚನೆ ನೀಡಿರುವುದಾಗಿ ಹೇಳಿರುವ ಅವರು, "ಕುಡಿಯುವ ನೀರಿಗೆ ವಿಷ ಬೆರೆಸುವ ಮನಸ್ಥಿತಿ ನಮ್ಮ ನಡುವೆ ಮಾನವೀಯತೆಯ ಅಧಃಪತನವನ್ನು ತೋರಿಸುತ್ತದೆ. ಈ ಬಗ್ಗೆ ಎಲ್ಲರೂ ಆತ್ಮವಿಮರ್ಶೆ ಮಾಡಿಕೊಳ್ಳಬೇಕಿದೆ," ಎಂದು ಅಭಿಪ್ರಾಯಪಟ್ಟಿದ್ದಾರೆ.

ಶಾಲೆಯ ಕುಡಿಯುವ ನೀರಿನ ಟ್ಯಾಂಕ್‌ಗೆ ಕಿಡಿಗೇಡಿಗಳು ವಿಷ ಬೆರೆಸಿದ ಘಟನೆ ಹೊಸನಗರ ತಾಲೂಕಿನ ಹೂವಿನಕೋಣೆ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ನಡೆದಿತ್ತು.

ಶಾಲೆಯ ಚಾವಣಿಯ ಮೇಲೆ ಎರಡು ಫೈಬರ್ ನೀರಿನ ಓವರ್ ಹೆಡ್ ಟ್ಯಾಂಕ್‌ಗಳಿದ್ದು, ದುಷ್ಕರ್ಮಿಗಳು ಒಂದು ತೊಟ್ಟಿಗೆ ವಿಷ ಬೆರೆಸಿದ್ದರು. ಈ ಟ್ಯಾಂಕ್ ನೀರನ್ನೇ ಹಾಲಿನ ಪುಡಿಗೆ ಮಿಶ್ರಣ ಮಾಡಿ ಮಕ್ಕಳಿಗೆ ಹಾಲು ನೀಡಲಾಗುತ್ತಿತ್ತು. ಬಿಸಿಯೂಟ ತಯಾರಿಕೆ ಸಿಬ್ಬಂದಿಗೆ ನೀರಿನಲ್ಲಿ ವಿಷದ ಅಂಶ ಇರುವ ಅನುಮಾನ ಬಂದಿದ್ದರಿಂದ ದೊಡ್ಡ ಅನಾಹುತ ತಪ್ಪಿತ್ತು.

ಘಟನೆ ಬೆಳಕಿಗೆ ಬರುತ್ತಿದ್ದಂತೆ ಪೋಷಕರು ಹಾಗೂ ಗ್ರಾಮಸ್ಥರು ಆತಂಕಕ್ಕೆ ಒಳಗಾಗಿದ್ದರು. ಮುಂಜಾಗ್ರತಾ ಕ್ರಮವಾಗಿ ಶಾಲೆಯ ಎಲ್ಲ 18 ಮಕ್ಕಳನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದು ಆರೋಗ್ಯ ತಪಾಸಣೆ ಮಾಡಲಾಗಿತ್ತು.

ಎಂದಿನಂತೆಯೇ ಶಾಲೆ ತರಗತಿಗಳು ಆರಂಭಗೊಂಡ ಬಳಿಕ ಮಕ್ಕಳಿಗೆ ಹಾಲು ನೀಡಲು ಬಿಸಿಯೂಟ ತಯಾರಿಕಾ ಸಿಬ್ಬಂದಿ, ಈ ಟ್ಯಾಂಕ್‌ನ ನೀರಿನಲ್ಲಿ ಕೈ ತೊಳೆದುಕೊಳ್ಳಲು ಹೋದಾಗ ನೀರಿನ ಬಣ್ಣದಲ್ಲಿ ವ್ಯತ್ಯಾಸ ಕಂಡುಬಂದಿತು. ನೀರಿನ ವಾಸನೆ ಗಮನಿಸಿದಾಗ ಕೀಟನಾಶಕ

ಬೆರೆತಿರುವ ಅನುಮಾನ ವ್ಯಕ್ತವಾಯಿತು. ಅವರು ಶಾಲೆಯ ಮುಖ್ಯೋಪಾಧ್ಯಾಯರಿಗೆ ಈ ವಿಷಯ ತಿಳಿಸಿದರು.

ಕೂಡಲೇ ಶಾಲಾಡಳಿತ ಎಚ್ಚೆತ್ತುಕೊಂಡು, ಗ್ರಾಮ ಪಂಚಾಯಿತಿ ಆಡಳಿತ ಹಾಗೂ ವಿವಿಧ ಇಲಾಖಾಧಿಕಾರಿಗಳಿಗೆ ಮಾಹಿತಿ ನೀಡಿತು. ಬಳಿಕ ಟ್ಯಾಂಕ್‌ನ ನೀರನ್ನು ಪರೀಕ್ಷೆ ಮಾಡಿದಾಗ ಕೀಟನಾಶಕ ಬೆರೆಸಿರುವುದು ದೃಢಪಟ್ಟಿತು.

ಶಾಲೆಯ ಪಕ್ಕದಲ್ಲಿರುವ ಹಣ್ಣಿನ ಮರವನ್ನು ಹತ್ತಿದ ಕಿಡಿಗೇಡಿಗಳು ಅಲ್ಲಿಂದ ಶಾಲೆಯ ಚಾವಣಿಗೆ ಬಂದು ಪ್ಲಾಸ್ಟಿಕ್ ಬಾಟಲಿಯಲ್ಲಿ ತಂದಿದ್ದ ಕೀಟನಾಶಕವನ್ನು ನೀರಿನ ಟ್ಯಾಂಕ್‌ಗೆ ಸುರಿದಿದ್ದಾರೆ ಎಂದು ಸ್ಥಳೀಯ ಗ್ರಾಮಸ್ಥರು ಶಂಕೆ ವ್ಯಕ್ತಪಡಿಸಿದ್ದಾರೆ. ವಿಷ ಮಿಶ್ರಣ ಮಾಡಲು ಬಳಸಿದ್ದ ಖಾಲಿ ಬಾಟಲಿಯೊಂದು ಸ್ಥಳದಲ್ಲಿ ಪತ್ತೆಯಾಗಿದೆ.

# ಕೆಳಗಿನ ಲಿಂಕ್ ಕ್ಲಿಕ್ ಮಾಡಿ ಜಾಣರಾಗಿ; ರಾಹುಲ್ ಗಾಂಧಿಗೆ ಕರ್ನಾಟಕ ಬಿಜೆಪಿ ಆರ್ಥಿಕ ಪಾಠ ಮಾಡಿತು ಸಖತ್ತಾಗಿ!




**ಬೆಂಗಳೂರು:** "ಭಾರತದ ಆರ್ಥಿಕತೆ ಸತ್ತಿದೆ" ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೆ ಭಾರತದಲ್ಲಿ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಆಡಳಿತ ಮತ್ತು ವಿಪಕ್ಷ ನಾಯಕರು, ಪಕ್ಷಬೇಧ ಮರೆತು ಟ್ರಂಪ್ ಅವರ ಹೇಳಿಕೆಯನ್ನು ಖಂಡಿಸಿದ್ದಾರೆ.

ಆದರೆ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಕ್ ಗಾಂಧಿ ಮಾತ್ರ ಭಾರತದ ಅರ್ಥವ್ಯವಸ್ಥೆಯ ಬಗ್ಗೆ ಡೊನಾಲ್ಡ್ ಟ್ರಂಪ್ ನೀಡಿರುವ ಹೇಳಿಕೆಯನ್ನು ಬೆಂಬಲಿಸಿದ್ದಾರೆ. "ಭಾರತದ ಆರ್ಥಿಕತೆ ಬಗ್ಗೆ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆ ಸರಿಯಾಗಿದೆ" ಎಂದಿರುವ ರಾಹುಲ್ ಗಾಂಧಿ ಅವರ ನಡೆಗೆ ಬಹುತೇಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅದೇ ರೀತಿ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಖಂಡಿಸಿರುವ ಕರ್ನಾಟಕ ಬಿಜೆಪಿ ಘಟಕ, ಪ್ರತಿಪಕ್ಷ ನಾಯಕರಿಗೆ ಆರ್ಥಿಕತೆಯ ಪಾಠ ಮಾಡಿದೆ. ಈ ಕುರಿತು ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಸುದೀರ್ಘ ಪೋಸ್ಟ್ ಮಾಡಿರುವ ಕರ್ನಾಟಕ ಬಿಜೆಪಿ, "ಭಾರತದ ಆರ್ಥಿಕತೆಯ ಬಗ್ಗೆ ನೈಜ ಸಂಗತಿಗಳನ್ನು ತಿಳಿದುಕೊಳ್ಳಿ" ಎಂದು ಸಲಹೆ ನೀಡಿದೆ.

ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಖಂಡಿಸಿ ಕರ್ನಾಟಕ ಬಿಜೆಪಿ ಮಾಡಿರುವ ಎಕ್ಸ್ ಪೋಸ್ಟ್‌ನಲ್ಲಿ ಅನೇಕ ಸಂಗತಿಗಳನ್ನು ಪ್ರಸ್ತಾಪಿಸಲಾಗಿದೆ.

"ರಾಹುಲ್ ಅವರೇ ನಿಮ್ಮ ಗುರು ಜಾರ್ಜ್ ಸೊರೊಸ್ ಅವರಂತಹ ಭಾರತ ವಿರೋಧಿ ಶಕ್ತಿಗಳ ತಾಳಕ್ಕೆ ಕುರುಡಾಗಿ ನೃತ್ಯ ಮಾಡುವ ಮೂಲಕ, ನೀವು ನಿಮ್ಮ ಅಜ್ಞಾನವನ್ನು ಬಹಿರಂಗಪಡಿಸುತ್ತಿದ್ದೀರಿ. ಭಾರತದ ಆರ್ಥಿಕತೆ ಸತ್ತಿಲ್ಲ. ನಿಜವಾಗಿಯೂ ಸತ್ತಿರುವುದು ಅರ್ಥಶಾಸ್ತ್ರದ ಬಗ್ಗೆ ನಿಮ್ಮ ಮೂಲಭೂತ ತಿಳುವಳಿಕೆ.

ಜಾಗತಿಕ ನಾಯಕರೆಂದು ಕರೆಯಲ್ಪಡುವವರ ವಿಷಕಾರಿ ಸುಳ್ಳುಗಳನ್ನು ಗಿಣಿಪಾಠ ಮಾಡುವ ಬದಲು, ನೀವು ಸತ್ಯಗಳನ್ನು ಕಲಿಯಬೇಕು. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನಾಯಕತ್ವದ 11 ವರ್ಷಗಳಲ್ಲಿ, ಭಾರತವು ಗಮನಾರ್ಹ ಆರ್ಥಿಕ ಬೆಳವಣಿಗೆಯನ್ನು ಸಾಧಿಸಿದೆ.

ಆದ್ದರಿಂದ ನೀವು ಅಜಾಗರೂಕ ಸುಳ್ಳುಗಳನ್ನು ಹೊರಹಾಕುವ ಮೊದಲು, ಚೆನ್ನಾಗಿ ಹೋಮ್‌ವರ್ಕ್ ಮಾಡಿಕೊಳ್ಳಿ. ಸತ್ಯವನ್ನು ಎದುರಿಸಿ, ಸತ್ಯಗಳನ್ನು ಕಲಿಯಿರಿ ಮತ್ತು 1.4 ಬಿಲಿಯನ್ ಭಾರತೀಯರ ಕಠಿಣ ಪರಿಶ್ರಮವನ್ನು ಅವಮಾನಿಸುವುದನ್ನು ನಿಲ್ಲಿಸಿ.

ನೀವು ನಿಜವಾಗಿಯೂ ಸತ್ಯವನ್ನು ತಿಳಿದುಕೊಳ್ಳುವ ಧೈರ್ಯವಿದ್ದರೆ, ಕೆಳಗಿನ ಲಿಂಕ್‌ನ್ನು ಕ್ಲಿಕ್ ಮಾಡಿ ಮತ್ತು ನಿಮ್ಮ ಜ್ಞಾನವನ್ನು ವೃದ್ಧಿಸಿಕೊಳ್ಳಿ" ಎಂದು ಕರ್ನಾಟಕ ಬಿಜೆಪಿ ರಾಹುಲ್ ಗಾಂಧಿ ಅವರಿಗೆ ಸಲಹೆ ನೀಡಿದೆ.

## ಧರ್ಮಸ್ಥಳ ಮತ್ತು ಹರ್ಷೇಂದ್ರಕುಮಾರ್ ಕುರಿತ ಮಾಧ್ಯಮಗಳ ನಿರ್ಬಂಧ ತೆರವು; ಕರ್ನಾಟಕ ಹೈಕೋರ್ಟ್ ಆದೇಶ




**ಬೆಂಗಳೂರು:** ಧರ್ಮಸ್ಥಳ ಗ್ರಾಮದಲ್ಲಿ ಶವಗಳನ್ನು ಹೂತಿಡಲಾಗಿದೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಧರ್ಮಸ್ಥಳ ಮತ್ತು ಹರ್ಷೇಂದ್ರ ಕುಮಾರ್ ಕುರಿತು ಮಾನಹಾನಿಕರ ಸುದ್ದಿ ಪ್ರಸಾರ ಮಾಡದಂತೆ ವಿಧಿಸಿದ್ದ ನಿರ್ಬಂಧವನ್ನು ಕರ್ನಾಟಕ ಹೈಕೋರ್ಟ್ ತೆರವು ಮಾಡಿದೆ.

ಧರ್ಮಸ್ಥಳ ಮತ್ತು ಹರ್ಷೇಂದ್ರ ಕುಮಾರ್ ವಿರುದ್ಧ ಯಾವುದೇ ಮಾನಹಾನಿ ವಿಷಯ ಪ್ರಸಾರ ಅಥವಾ ಪ್ರಕಟ ಮಾಡದಂತೆ ಬೆಂಗಳೂರು ಸಿಟಿ ಸಿವಿಲ್ ಕೋರ್ಟ್ ಜುಲೈ 3 ನೇ ವಾರ ಆದೇಶ ಹೊರಡಿಸಿತ್ತು. ಜತೆಗೆ 8 ಸಾವಿರ ಲಿಂಕ್ ಡಿಲೀಟ್‌ಗೆ ಕೋರ್ಟ್ ಸೂಚನೆ ನೀಡಿತ್ತು. ಈ ಮಾಧ್ಯಮಗಳನ್ನು ನಿರ್ಬಂಧಿಸಿರುವುದನ್ನು ಪ್ರಶ್ನಿಸಿ ಪ್ರಶ್ನೆ ಮಾಡಿ ಯುಟ್ಯೂಬ್ ಚಾನೆಲ್‌ಗಳು ಸುಪ್ರೀಂಕೋರ್ಟ್ ಮೊರೆ ಹೋಗಿದ್ದವು. ಆ ಬಳಿಕ ಸುಪ್ರಿಂ ಕೋರ್ಟ್ ಹೈಕೋರ್ಟ್‌ಗೆ ತೆರಳಲು ಸೂಚಿಸಿತ್ತು. ಕುಡ್ಲ ರ?ಯಾಂಪೇಜ್ ಹೈಕೋರ್ಟ್ ಸಲ್ಲಿಸಿರುವ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ಶುಕ್ರವಾರ ವಿಚಾರಣೆ ನಡೆಸಿ ಆದೇಶ ಪ್ರಕಟಿಸಿದೆ.

ಹೈಕೋರ್ಟ್‌ನ ಏಕಸದಸ್ಯ ಪೀಠದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರು ವಿಚಾರಣೆ ನಡೆಸಿ, ಕುಡ್ಲ ರ?ಯಾಂಪೇಜ್ ಸಲ್ಲಿಸಿರುವ ಅರ್ಜಿಯನ್ನು ಭಾಗಶಃ ಪುರಸ್ಕರಿಸಿ ಮಾಧ್ಯಮಗಳ ನಿರ್ಬಂಧ ಆದೇಶ ತೆರವುಗೊಳಿಸಿದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೊಸದಾಗಿ ಮಧ್ಯಂತರ ಅರ್ಜಿಯನ್ನು ಪರಿಗಣಿಸಲು ವಿಚಾರಣಾಧೀನ ನ್ಯಾಯಾಲಯಕ್ಕೆ ಸೂಚಿಸಿದೆ. ಜತೆಗೆ ವಿಚಾರಣಾಧೀನ ನ್ಯಾಯಾಲಯದಲ್ಲಿ ಎಲ್ಲಾ ವಾದಗಳನ್ನು ಮುಕ್ತವಾಗಿರಿಸಲಾಗಿದೆ ಎಂದ ಪೀಠವು ಆದೇಶಿಸಿದೆ.

ಧರ್ಮಸ್ಥಳ ಶವ ಹೂತಿಟ್ಟ ಪ್ರಕರಣದಲ್ಲಿ ಧರ್ಮಸ್ಥಳ ಅಥವಾ ನಮ್ಮ ಕುಟುಂಬದ ಸದಸ್ಯರ ವಿರುದ್ಧ ನೇರ ಆರೋಪಗಳಿಲ್ಲ. ಆದರೂ, ಸಾಕಷ್ಟು ಮಾಧ್ಯಮಗಳು, ಯುಟ್ಯೂಬ್ ಚಾನೆಲ್‌ಗಳು ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ. ಇದರಿಂದ 75,000 ಜನರಿಗೆ ಉದ್ಯೋಗ ನೀಡುತ್ತಿರುವ ಮತ್ತು 45,000 ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿರುವ ಧರ್ಮಸ್ಥಳ ಸಂಸ್ಥೆಯ ಘನತೆಗೆ ಧಕ್ಕೆಯಾಗುತ್ತಿದೆ ಎಂದು ಅರ್ಜಿದಾರ ಡಿ. ಹರ್ಷೇಂದ್ರ ಕುಮಾರ್ ನ್ಯಾಯಾಲಯಕ್ಕೆ ಸಿಟಿ ಸಿವಿಲ್ ಕೋರ್ಟ್‌ಗೆ ಮನವಿ ಮಾಡಿದ್ದರು.

ಧರ್ಮಸ್ಥಳದಲ್ಲಿ ಅಸಹಜ ಸಾವಿನ ಹಿನ್ನೆಲೆಯಲ್ಲಿ ನೂರಾರು ಶವಗಳನ್ನು ಹೂತಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಕ್ಷೇತ್ರದ ಧರ್ಮಾಧಿಕಾರಿ ಮತ್ತು ಅವರ ಸಹೋದರ ವಿರುದ್ಧ ಯಾವುದೇ ಮಾನಹಾನಿ ವಿಷಯ ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ವಿಧಿಸಿದ್ದ ನಿರ್ಬಂಧ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ನೇರವಾಗಿ ವಿಚಾರಣೆಗೆ ಪರಿಗಣಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿತ್ತು.

## ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೊಹಾಂತಿ ಭೇಟಿಯ ಬಗ್ಗೆ ಪರಮೇಶ್ವರ್ ಕೊಟ್ಟ ಸ್ಪಷ್ಟನೆ

**ಬೆಂಗಳೂರು:** ಧರ್ಮಸ್ಥಳದಲ್ಲಿ ಎಸ್ ಐ ಟಿ ಪರಿಶೀಲನೆಯ ಸಂದರ್ಭದಲ್ಲಿ ಮೃತ ದೇಹದ ಅವಶೇಷಗಳು ಸಿಕ್ಕಿರುವ ಬೆನ್ನಲ್ಲೇ ಎಸ್‌ಐಟಿ ಮುಖ್ಯಸ್ಥ ಪ್ರಣಬ್ ಮೊಹಾಂತಿ ಅವರು ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ. ಈ ಕುರಿತಾಗಿ ಸ್ವತಃ ಗೃಹ ಸಚಿವ ಪರಮೇಶ್ವರ್ ಅವರು ಪ್ರತಿಕ್ರಿಯೆ ನೀಡಿದ್ದು, ಧರ್ಮಸ್ಥಳದ ವಿಚಾರವಾಗಿ ಯಾವುದೇ ಚರ್ಚೆ ನಡೆದಿಲ್ಲ ಎಂದು ತಿಳಿಸಿದರು.

ಸದಾಶಿವನಗರ ನಿವಾಸದಲ್ಲಿ ಶುಕ್ರವಾರ ಮಾತನಾಡಿದ ಅವರು, ಪ್ರಣಬ್ ಮೊಹಾಂತಿ ಕೇಂದ್ರ ಸೇವೆಯ ಬಗ್ಗೆ ಮಾಧ್ಯಮಗಳಲ್ಲಿ ಗೊಂದಲ ಸೃಷ್ಟಿ ಮಾಡಲಾಗಿದೆ. ಸಾಮಾನ್ಯವಾಗಿ ಎಂಪ್ಯಾಲ್ಮೆಂಟ್ ಮಾಡುವಾಗ ಸೀನಿಯರ್ ಆಧಾರ ಹಾಗೂ ಅಧಿಕಾರಿಯ ಕಾರ್ಯವೈಖರಿಯ ಹಿನ್ನೆಲೆಯನ್ನು ನೋಡಿ ಮಾಡುತ್ತಾರೆ. ಅದರ ಮೇಲೆ ಕೇಂದ್ರದ ಹುದ್ದೆಗಳಿಗೆ ಆಯ್ಕೆ ಮಾಡುತ್ತಾರೆ. ಪ್ರಣಬ್ ಮೊಹಂತಿ ಅದರಲ್ಲಿ ಆಗಿದ್ದು ನಮಗೆ ಕ್ರೆಡಿಟ್ ಎಂದರು.

ಆದರೆ ಅವರಿಗೆ ತಕ್ಷಣವೇ ಯಾವ ಹುದ್ದೆ ಕೊಡ್ತಾರೆ ಎಂಬುವುದು ಇನ್ನೂ ಅಧಿಕೃತವಾಗಿಲ್ಲ. ಅವರು ಆ ವಿಚಾರವನ್ನು ತಿಳಿಸುವುದಕ್ಕೆ ಬಂದಿದ್ದರು. ಈಗ ನಾವು ಫೇಕ್ ನ್ಯೂಸ್, ಆನ್‌ಲೈನ್ ಗ್ಯಾಂಬ್ಲಿಂಗ್ ಗೆ ಹೊಸ ಕಾನೂನು ತರುವುದಕ್ಕೆ ಹೊರಟಿದ್ದೇವೆ. ಮೊಹಂತಿ ಅವರು ಐಎಸ್‌ಡಿ ಮುಖ್ಯಸ್ಥರಾಗಿದ್ದಾರೆ. ಇವೆಲ್ಲವೂ ಅವರಿಗೆ ಬರುತ್ತದೆ, ಹಾಗಾಗಿ ಅದರ ಬಗ್ಗೆ ಚರ್ಚೆ ನಡೆಸಲು ಸಭೆ ಕರೆದಿದ್ದೇನೆ. ಈ ಹಿನ್ನೆಲೆಯಲ್ಲಿ ಬ್ರೀಫಿಂಗ್ ಮಾಡುವುದಕ್ಕೆ ಅವರು ಬಂದಿದ್ದರು ಎಂದು ತಿಳಿಸಿದರು.

## 'ದೋಷಿ; ತೀರ್ಪು ಕೇಳುತ್ತಲೇ ಗಳಗಳನೇ ಅತ್ತ ಪ್ರಜ್ವಲ್ ರೇವಣ್ಣ – 'ನ್ಯಾಯ ಸಿಕ್ತು' ಎಂದ ಸಂತ್ರಸ್ತೆ ಪುತ್ರ



**ಬೆಂಗಳೂರು:** ಮನೆಕೆಲಸದಾಕೆಯ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರು ದೋಷಿ ಎಂದು ಬೆಂಗಳೂರಿನ ಜನಪ್ರತಿನಿಧಿ ನ್ಯಾಯಾಲಯ ತೀರ್ಪು ನೀಡಿದೆ. ತೀರ್ಪು ಹೊರಬೀಳುತ್ತಲೇ ಕಟಕಟೆಯಲ್ಲಿ ನಿಂತಿದ್ದ ಪ್ರಜ್ವಲ್ ರೇವಣ್ಣ ಅವರು ಗಳಗಳನೇ ಕಣ್ಣೀರು ಹಾಕಿದ್ದಾರೆ.

ಮನೆಕೆಲಸದಾಕೆಯ ಮೇಲೆ ಅತ್ಯಾಚಾರ ಮಾಡಲಾಗಿದ್ದ ವಿಡಿಯೋವೊಂದು ಕಳೆದ ವರ್ಷ ನಡೆದಿದ್ದ ಲೋಕಸಭಾ ಚುನಾವಣೆಯ ಮತದಾನಕ್ಕೆ ಇನ್ನೊಂದು ವಾರವಾಗಿದ್ದಾಗ ವೈರಲ್ ಆಗಿತ್ತು. ಆ ಹಿನ್ನೆಲೆಯಲ್ಲಿ ಪ್ರಜ್ವಲ್ ವಿರುದ್ಧ 2024ರ ಏ. 8ರಂದು ಹೊಳೆನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಅತ್ಯಾಚಾರಕ್ಕೊಳಗಾಗಿದ್ದಾರೆ ಎನ್ನಲಾಗಿರುವ ಮಹಿಳೆಯ ಪುತ್ರ ಪ್ರಕರಣ ದಾಖಲಿಸಿದ್ದರು. ಆ ಹಿನ್ನೆಲೆಯಲ್ಲಿ, ರೇವಣ್ಣ ಅವರನ್ನು ಬಂಧಿಸಲಾಗಿತ್ತು. ಆ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ, ಆ. 1ರಂದು ತೀರ್ಪು ಪ್ರಕಟಿಸಿದ್ದು, ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಅವರು ದೋಷಿ ಎಂದು ಹೇಳಿದೆ. ಅಲ್ಲದೆ, ಶಿಕ್ಷೆಯ ಪ್ರಮಾಣವನ್ನು ಆ. 2ಕ್ಕೆ ಮುಂದೂಡಿದೆ. ತೀರ್ಪನ್ನು ಕೇಳಿದ ಪ್ರಜ್ವಲ್ ಅವರು ಕಣ್ಣೀರು ಹಾಕಿದ್ದಾರೆ.

ಇದೆಲ್ಲವೂ ನ್ಯಾಯಾಲಯದ ಒಳಗಿನ ಚಿತ್ರಣವಾದರೆ, ನ್ಯಾಯಾಲಯದ ಹೊರಗೆ, ಅಂದರೆ, ಕೆಆರ್ ನಗರದಲ್ಲಿರುವ ಸಂತ್ರಸ್ತೆ (ಮನೆಗೆಲಸದಾಕೆಯ) ಪುತ್ರ 'ದ ನ್ಯೂಸ್ ಮಿನಟ್' ಗೆ ಪ್ರತಿಕ್ರಿಯೆ ನೀಡಿದ್ದಾರೆ. ನಾವು ಕಳೆದ ಒಂದೂವರೆ ವರ್ಷದಿಂದ ಅನುಭವಿಸಿರುವ ಮಾನಸಿಕ ಯಾತನೆಯನ್ನು ಬಣ್ಣಿಸಲು ಸಾಧ್ಯವಿಲ್ಲ. ಈಗ ನ್ಯಾಯಾಲಯದ ತೀರ್ಪು ನಮಗೆ ಒಂದಿಷ್ಟು ಸಮಾಧಾನ ತಂದಿದೆ. ಅಷ್ಟೇ ಅಲ್ಲ, ಈ ತೀರ್ಪು ನಮ್ಮ ಕಡೆ ಬಾರದಿದ್ದರೆ ಸಮಾಜದ ದೃಷ್ಟಿಯಲ್ಲಿ ನಾವೇ ತಪ್ಪಿತಸ್ಥರಾಗಿರುತ್ತಿದ್ದೆವು. ಹಾಗಾಗಿ, ಈ ತೀರ್ಪು ನಮಗೆ ಸಮಾಧಾನ ತಂದಿದೆ" ಎಂದು ಹೇಳಿದ್ದಾರೆ.

ಪ್ರಜ್ವಲ್ ರೇವಣ್ಣ ವಿರುದ್ಧದ ಅತ್ಯಾಚಾರ ಪ್ರಕರಣದ ತನಿಖೆ ನಡೆಸಿದ್ದ ವಿಶೇಷ ತನಿಖಾ ದಳಕ್ಕೆ (ಎಸ್‌ಐಟಿ) ದೊಡ್ಡ ಸವಾಲು ಎದುರಾಗಿತ್ತು. ಪ್ರಜ್ವಲ್ ವಿರುದ್ಧದ ಪ್ರತಿ ವಿಡಿಯೋದಲ್ಲಿ ಅವರ ಮುಖ ಕಾಣಿಸುತ್ತಿರಲಿಲ್ಲ. ಆದರೆ, ಆ ವಿಡಿಯೋಗಳಲ್ಲಿ ಇರುವುದು ಅವರೇ ಎಂಬುದನ್ನು ಸಾಬೀತುಪಡಿಸಲು ಎಸ್‌ಐಟಿ ಹರಸಾಹಸ ಮಾಡಬೇಕಾಗಿತ್ತು. ಸಾಕ್ಷಿಗಳ ರೂಪದಲ್ಲಿ 15 ಸಾವಿರ ಫೋಟೋಗಳು ಮತ್ತು 2 ಸಾವಿರ ವಿಡಿಯೋಗಳನ್ನು ವಶಪಡಿಸಿಕೊಳ್ಳಲಾಗಿತ್ತು.

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ 1461 ಅತ್ಯಾಚಾರ ಪ್ರಕರಣಗಳು ವಿವಿಧ ಠಾಣೆಗಳಲ್ಲಿ ದಾಖಲಾಗಿವೆ. ಆದರೆ ಈ ಪೈಕಿ ಯಾವುದೇ ಪ್ರಕರಣಗಳಲ್ಲಿ ಶಿಕ್ಷೆ ಆಗಿಲ್ಲ ಎಂಬುದು ಗಮನಾರ್ಹ. ಹಲವಾರು ಪ್ರಕರಣಗಳು ಇನ್ನೂ ವಿಚಾರಣೆ ಹಂತದಲ್ಲಿದೆ. ಮೂರು ವರ್ಷಗಳಲ್ಲಿ ಇದೇ ಮೊದಲ ಬಾರಿ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಪ್ರಜ್ವಲ್ ರೇವಣ್ಣ ಅವರನ್ನು ದೋಷಿ ಎಂದು ತೀರ್ಪು ನೀಡಿದೆ. ಶನಿವಾರ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಶಿಕ್ಷೆ ಪ್ರಕಟ ಆಗಲಿದೆ.

# ನಾವೆಲ್ಲರೂ ಭಾರತೀಯ ಸನಾತನ ಪರಂಪರೆಯಲ್ಲಿ ಹುಟ್ಟಿದವರು




**ಶ್ರವಣಬೆಳಗೊಳ:** ನಾವೆಲ್ಲರೂ ಭಾರತೀಯ ಸನಾತನ ಪರಂಪರೆಯಲ್ಲಿ ಹುಟ್ಟಿದವರು. ಒಂದೇ ಸಂಸ್ಕೃತಿಯಲ್ಲಿ ಬೆಳೆದವರು. ಆದರೆ ಹಿಂದಿನಿಂದಲೂ ಒಡೆದು ಆಳುವ ನೀತಿಯಿಂದ ನಮ್ಮ ಧರ್ಮ, ಸಂಸ್ಕೃತಿ, ಪರಂಪರೆಯನ್ನು ಒಡೆಯಲಾಗುತ್ತಿದೆ ಎಂದು ಶ್ರೀ ದಿಗಂಬರ ಜೈನ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಭಟ್ಟಾರಕ ಪಂಡಿತಾಚಾರ್ಯವರ್ಯ ಸ್ವಾಮೀಜಿ ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಹಾಗೂ ಡಾ. ಡಿ.ವೀರೇಂದ್ರ ಹೆಗ್ಗಡೆಯವರ ವಿರುದ್ಧ ಅವಹೇಳನಕಾರಿಯಾಗಿ ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ಶ್ರವಣಬೆಳಗೊಳದಲ್ಲಿ ಶನಿವಾರ ಏರ್ಪಡಿಸಿದ್ದ ಪ್ರತಿಭಟನಾ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತ ದೇಶದ ಕಲೆ, ಸಂಸ್ಕೃತಿ, ಸಾಹಿತ್ಯ, ಸಿದ್ಧಾಂತಗಳನ್ನು ಒಳಗೊಂಡ ದೃಢವಾದ ಸಂಸ್ಕೃತಿಯನ್ನು ಬ್ರಿಟಿಷರು ಜಾತಿ ಧರ್ಮದ ಹೆಸರಿನಲ್ಲಿ ಹೊಡೆದರು. ಅದೇ ರೀತಿ ಇಂದೂ ಕೂಡ ಶ್ರೀ ಕ್ಷೇತ್ರ ಧರ್ಮಸ್ಥಳದ ಸೇವಾ ಪರಂಪರೆಯನ್ನು ನಾಶ ಮಾಡಲು, ಧರ್ಮಸ್ಥಳವನ್ನು ವಶಪಡಿಸಿಕೊಳ್ಳಲು ಹುನ್ನಾರ ನಡೆಯುತ್ತಿದೆ.

ಸಮಾಜದಲ್ಲಿ ಒಡಕು ಮತ್ತು ಭಿನ್ನಾಭಿಪ್ರಾಯಗಳನ್ನು ಮೂಡಿಸುವ ಸಲುವಾಗಿ ಇಲ್ಲಸಲ್ಲದ ಅಪಪ್ರಚಾರವನ್ನು ಮಾಡಲಾಗುತ್ತಿದೆ. ಇದಕ್ಕೆ ಯಾರು ಆಸ್ಪದ ಕೊಡಬಾರದು. ನಮ್ಮ ಧಾರ್ಮಿಕ ನಂಬಿಕೆಯನ್ನು ಬಿಟ್ಟುಕೊಡದೆ, ನಾವೆಲ್ಲರೂ ಒಂದಾಗಿ ನಮ್ಮ ಸಂಸ್ಕೃತಿಯನ್ನು ಉಳಿಸುವ ನಿಟ್ಟಿನಲ್ಲಿ ಧರ್ಮಾತೀತವಾಗಿ, ಪಕ್ಷಾತೀತವಾಗಿ ಒಗ್ಗಟ್ಟಾಗಬೇಕು. ಶ್ರವಣಬೆಳಗೊಳ ಶ್ರೀಮಠ ಹಾಗೂ ಶಿಷ್ಯವೃಂದ ಮತ್ತು ಸಮಸ್ತ ಭಟ್ಟಾರಕ ಸ್ವಾಮೀಜಿಯವರ ಬೆಂಬಲ ಧರ್ಮಸ್ಥಳ ಹಾಗೂ ಹೆಗ್ಗಡೆಯವರೊಂದಿಗೆ ಅಚಲವಾಗಿ ಇರುತ್ತದೆ ಎಂದು ಹೇಳಿದರು.

ಮೈಸೂರಿನ ಕನಕಗಿರಿ ಜೈನ ಮಠದ ಸ್ವಸ್ತಿಶ್ರೀ ಭುವನಕೀರ್ತಿ ಭಟ್ಟಾರಕ ಸ್ವಾಮೀಜಿ ಮಾತನಾಡಿ, ಧಾರ್ಮಿಕ ಪುಣ್ಯಭೂಮಿಯಾಗಿರುವ ಶ್ರೀಕ್ಷೇತ್ರ ಧರ್ಮಸ್ಥಳವು ಜಗತ್ತಿನ ಅನೇಕ ಧಾರ್ಮಿಕ ಸಂಸ್ಥೆಗಳಿಗೆ, ಪುಣ್ಯಕ್ಷೇತ್ರಗಳಿಗೆ ಆದರ್ಶಪ್ರಾಯವಾಗಿದೆ. ಇಡೀ ಭಾರತ ದೇಶದಲ್ಲಿ ಧಾರ್ಮಿಕವಾಗಿ, ಸಾಮಾಜಿಕವಾಗಿ ತನ್ನದೇ ಆದ ಛಾಪು ಮೂಡಿಸಿ ಸೇವಾ ಕ್ಷೇತ್ರದಲ್ಲಿ ಅನುಕರಣೀಯವಾದ ಹೆಮ್ಮೆಯ ಸ್ಥಳವಾಗಿದೆ. ನ್ಯಾಯವೇ ಧರ್ಮ ಎಂಬ ಪ್ರತೀತಿ ಧರ್ಮಸ್ಥಳಕ್ಕೆ ಇದೆ. ಡಾ. ಡಿ.ವೀರೇಂದ್ರ ಹೆಗ್ಗಡೆಯವರು ನಿಷ್ಕಳಂಕ, ಶುದ್ಧ ಚಾರಿತ್ರ್ಯದ ಸಂಪನ್ನರಾಗಿ ನಮ್ಮ ಸಮಾಜಕ್ಕೆ ದೇಶಕ್ಕೆ ಮಾದರಿಯಾಗಿದ್ದಾರೆ. ಅವರ ಸ್ವಚ್ಛ ಮತ್ತು ಪವಿತ್ರವಾದ ಪುಣ್ಯಕಾರ್ಯಗಳು ಸಮಾಜಕ್ಕೆ ಆದರ್ಶವಾಗಿದೆ.ಧರ್ಮಸ್ಥಳವು ಪ್ರಾಮಾಣಿಕತೆ, ಪಾರದರ್ಶಕತೆ ಹಾಗೂ ತ್ಯಾಗಮಯವಾಗಿ ಧರ್ಮಕ್ಕಾಗಿ ಶ್ರಮಿಸುತ್ತಿರುವ ಕ್ಷೇತ್ರ. ಇಂತಹ ಕ್ಷೇತ್ರಕ್ಕೆ ಕಳಂಕ ತರಲು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಹುನ್ನಾರ ನಡೆಸುತ್ತಿದ್ದಾರೆ. ಶತಶತಮಾನಗಳಿಂದಲೂ ಭಕ್ತ ಪರಂಪರೆ ಹೊಂದಿರುವ ಕ್ಷೇತ್ರದ ರಕ್ಷಣೆಗೆ ನಾವೆಲ್ಲರೂ ಕಟಿಭದ್ಧರಾಗಿ ನಿಲ್ಲಬೇಕು. ಅವರ ಸೇವೆ ಕೊಡುಗೆಯನ್ನು ಗೌರವಿಸುತ್ತಾ ಕ್ಷೇತ್ರಕ್ಕೆ ಬಂದಿರುವ ಕಳಂಕವನ್ನು ಹೋಗಲಾಡಿಸಲು ಪಕ್ಷಾತೀತವಾಗಿ ಧರ್ಮಾತೀತವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಹಾಗೂ ಹೆಗಡೆಯವರೊಂದಿಗೆ ನಿಲ್ಲಬೇಕು ಎಂದು ಹೇಳಿದರು.ಮಂಡ್ಯ ಜಿಲ್ಲೆಯ ಆರತಿಪುರ ಜೈನ ಮಠದ ಸ್ವಸ್ತಿಶ್ರೀ ಸಿದ್ಧಾಂತಕೀರ್ತಿ ಭಟ್ಟಾರಕ ಸ್ವಾಮೀಜಿ, ತಮಿಳುನಾಡು ರಾಜ್ಯದ ಅರಹಂತಗಿರಿಯ ಸ್ವಸ್ತಿಶ್ರೀ ಧವಲಕೀರ್ತಿ ಭಟ್ಟಾರಕ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಬನ್ನಿಮರ ಶ್ರೀ ಆಂಜನೇಯಸ್ವಾಮಿ ದೇವಾಲಯದಿಂದ ಮೆರವಣಿಗೆ ಪ್ರಾರಂಭವಾಗಿ ಶ್ರೀಮಠದ ಮುಂಭಾಗದಿಂದ ವಿಂಧ್ಯಗಿರಿ ಮಹಾದ್ವಾರದ ಮಾರ್ಗವಾಗಿ ನಾಡಕಛೇರಿಗೆ ತೆರಳಿ ಉಪ ತಹಶೀಲ್ದಾರ್ ತೇಜಸ್ವಿನಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.ಮೆರವಣಿಗೆಯಲ್ಲಿ ಎಲ್ಲಾ ಸಮಾಜದ ಹಾಗೂ ಪಕ್ಷಗಳ ಮುಖಂಡರು, ಗ್ರಾಮ ಪಂಚಾಯ್ತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಮಾಜಿ ಅಧ್ಯಕ್ಷರು ಹಾಗೂ ನೂರಾರು ನಾಗರಿಕರು ಪಾಲ್ಗೊಂಡಿದ್ದರು.

# ಆ.21 ಚಿಕ್ಕಮಗಳೂರು ತಾಲ್ಲೂಕು ದಸರಾ ಕ್ರೀಡೆ ಉದ್ಘಾಟನೆ



**ಚಿಕ್ಕಮಗಳೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಚಿಕ್ಕಮಗಳೂರು ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷರು ಮತ್ತು ಮಹಿಳೆಯರಿಗೆ ಆಗಸ್ಟ್ 21 ಹಾಗೂ 22 ರಂದು ಬೆಳಿಗ್ಗೆ 10 ಗಂಟೆಗೆ ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ (ಗುಂಪು ಸ್ಪರ್ಧೆ) ಹಾಗೂ ರಾಮನಹಳ್ಳಿಯ ಡಿ.ಎ.ಆರ್. ಪೊಲೀಸ್ ಆಟದ ಮೈದಾನದಲ್ಲಿ (ಅಥ್ಲೆಟಿಕ್ಸ್ ಸ್ಪರ್ಧೆ) ಆಯೋಜಿಸಲಾಗಿದೆ.

ಆಗಸ್ಟ್ 21 ರಂದು ಬೆಳಿಗ್ಗೆ 10 ಗಂಟೆಗೆ ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಉದ್ಘಾಟಿಸುವರು. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಚಿಕ್ಕಮಗಳೂರು ಕ್ಷೇತ್ರದ ಶಾಸಕರಾದ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ. ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್. ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷರಾದ ಬಿ.ಶೀಲಾ ದಿನೇಶ್, ಪೌರಾಯುಕ್ತರಾದ ಬಿ.ಸಿ.ಬಸವರಾಜ್, ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳಾದ ವಿಜಯಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಟಿ.ಆರ್.ರುದ್ರಪ್ಪ ಪಾಲ್ಗೊಳ್ಳಲಿದ್ದಾರೆ.

# ಪ.ಜಾತಿ, ಪ.ಪಂಗಡದ ಸೈನಿಕರು ಮಾಜಿ ಸೈನಿಕರುಗಳಿಂದ ನಿವೇಶನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸೈನಿಕರು, ಮಾಜಿ ಸೈನಿಕರುಗಳಿಂದ ನಿವೇಶನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಕೊಡತಿ ಗ್ರಾಮದ ಸರ್ವೆ ನಂಬರ್ 82ರಲ್ಲಿ ವಿಶೇಷ ಆಶ್ರಯ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕರ್ನಾಟಕ ಮೂಲದ ಅರ್ಹ ನಿವೇಶನ ರಹಿತ ಸೈನಿಕ, ಮಾಜಿ ಸೈನಿಕರುಗಳಿಗೆ 17 ನಿವೇಶನಗಳು ಹಂಚಿಕೆಗೆ ಲಭ್ಯವಿದ್ದು, ಆಸಕ್ತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕರ್ನಾಟಕ ಮೂಲದ ಅರ್ಹ ನಿವೇಶನ ರಹಿತ ಸೈನಿಕ, ಮಾಜಿ ಸೈನಿಕರುಗಳು ಈ ನಿವೇಶನಗಳಿಗೆ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇಲ್ಲಿ ಸೂಕ್ತ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08182220925 ಸಂಪರ್ಕಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು(ಪ್ರಭಾರ)ತಿಳಿಸಿದ್ದಾರೆ.

# ವಿದ್ಯಾರ್ಥಿವೇತನ–ಸಹಾಯ ಯೋಜನೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** 2025–26 ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ಅಲೆಮಾರಿ/ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ/ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ ನೀಡಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆ.30 ಕೊನೆಯ ದಿನಾಂಕವಾಗಿದೆ. ವೆಬ್‌ಸೈಟ್ https://ssp.postmatric.karnataka.gov.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ

ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್‌ಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ: 8050770005, ಇ–ಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್ postmatrichelp@karnataka.gov.in ಅಥವಾ ದೂ.ಸಂ: 1902 ಗೆ ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಮೃತರ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 2 ಲಕ್ಷ ಪರಿಹಾರ



**ಗದಗ :** ಮೊದಲಗಟ್ಟಿ ಗ್ರಾಮದ ತುಂಗಭದ್ರಾ ನದಿ ತೀರದಲ್ಲಿ ಸ್ನಾನಕ್ಕೆಂದು ತೆರಳಿದಾಗ ಶಿರಹಟ್ಟಿ ತಾಲೂಕಿನ ನಿವಾಸಿಗಳಾದ ಮಹೇಶ ಈಶ್ವರಪ್ಪ ಬಡಿಗೇರ, ಗುರುನಾಥ ನೀಲಪ್ಪ ಬಡಿಗೇರ ಹಾಗೂ ಶರಣಪ್ಪ ಸುಭಾಷ ಬಡಿಗೇರ ಇವರುಗಳು ದಿ: 8–3–2025 ರಂದು ಮೃತರಾಗಿದ್ದರು.

ಮೃತರ ಕುಟುಂಬದ ಸದಸ್ಯರುಗಳಿಗೆ ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂ.ಗಳ ಪರಿಹಾರ ನೀಡುವ ಬಗ್ಗೆ ಮಂಜೂರಾತಿ ಆದೇಶ ಪ್ರತಿಯನ್ನು ಶನಿವಾರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ವಿತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಶಿರಹಟ್ಟಿ ತಹಶೀಲ್ದಾರರು ಹಾಜರಿದ್ದರು.

# ಸಮಸ್ತ ದೇಶವಾಸಿಗಳು ಕಾನೂನಿನ ಚೌಕಟ್ಟಿನೊಳಗೆ ಬದುಕುವ ಮೂಲಕ ಬಲಿಷ್ಠ, ಸದೃಢ ರಾಷ್ಟ್ರ ಕಟ್ಟಲು ಸಾಧ್ಯ

**ಚಿಕ್ಕಮಗಳೂರು:** ಸಮಸ್ತ ದೇಶವಾಸಿಗಳು ತಮ್ಮ ವೈಯಕ್ತಿಕ ಹಾಗೂ ಸಾಮಾಜಿಕ ಜೀವನದಲ್ಲಿ ಕಾನೂನಿನ ಚೌಕಟ್ಟಿನೊಳಗೆ ಬದುಕುವ ಮೂಲಕ ಬಲಿಷ್ಠ, ಸದೃಢ ರಾಷ್ಟ್ರ ಕಟ್ಟಲು ಮುಂದಾಗಬೇಕು ಎಂದು ಸಹಾಯಕ ಔಷಧ ನಿಯಂತ್ರಕ ಡಾ.ವೀರೇಶ್ ಬಾಬು ತಿಳಿಸಿದರು.

ನಗರದ ಸಹಾಯಕ ಔಷಧ ನಿಯಂತ್ರಕರ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ 179 ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಪ್ರತಿಯೊಬ್ಬರು ದೇಶ ಪ್ರೇಮವನ್ನು

ಮೈಗೂಡಿಸಿಕೊಳ್ಳಬೇಕು. ದೇಶದ ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಮಹನೀಯರ ಕೊಡುಗೆಗಳನ್ನು ನೆನಪಿಸಿಕೊಂಡು ಭವಿಷ್ಯದಲ್ಲಿ ಅರ್ಥಪೂರ್ಣ, ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಳ್ಳಬೇಕು ಎಂದರು.

ನಂತರ ಎನ್‌ಡಿಪಿಎಸ್ ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಜಿಕ್ ಔಷಧಗಳ ಬಗ್ಗೆ



ಮಾಹಿತಿ ನೀಡಿದ ಅವರು, ವೈದ್ಯರ ಸಲಹಾ ಚೀಟಿ ಇಲ್ಲದೆ ಇಂತಹ ಔಷಧಗಳ ವಿತರಣೆ ಕಾನೂನು ಬಾಹಿರವಾಗಿರುತ್ತದೆ. ಜನರ ಆರೋಗ್ಯದ ಮೇಲೆ ಹಾಗೂ ಸಮಾಜದ ಮೇಲೂ ದುಷ್ಪರಿಣಾಮ ಬೀರುವ ಕಾರಣ ಅಂತಹ ಔಷಧಗಳನ್ನು ವಿತರಿಸುವಾಗ ಜಾಗರೂಕವಾಗಿಬೇಕು. ವೈದ್ಯರ ಸಲಹಾ ಚೀಟಿ ಇದ್ದರೆ ಮಾತ್ರ ವಿತರಿಸಬೇಕು ಎಂದರು.

ಸಮಾರಂಭದಲ್ಲಿ ಔಷಧ ವ್ಯಾಪಾರಿಗಳ ಸಂಘದ ಕಾರ್ಯದರ್ಶಿ ವೆಂಕಟೇಶ್ ಮೂರ್ತಿ ಹಾಗೂ ಸಂಘದ ಸದಸ್ಯರುಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಮೊಬೈಲ್ಗಳನ್ನು ಬಿಟ್ಟು ಕಲಿಕೆಯಲ್ಲಿ ಹೆಚ್ಚು ತೊಡಗಿಸಿ ಕೊಳ್ಳಬೇಕು

**ಹೊಳೆನರಸೀಪುರ :** ಪೋಷಕರು ಮಕ್ಕಳಿಗೆ ಹೆಚ್ಚಿನ ಸ್ವಾತಂತ್ರ್ಯ ನೀಡುತ್ತಿರುವುದರಿಂದ, ಅವರು ಮೊಬೈಲ್ಗಳಿಗೆ ಹೆಚ್ಚು ಆಕರ್ಷಿತರಾಗಿದ್ದಾರೆ. ವಿದ್ಯಾರ್ಥಿಗಳು ಮೊಬೈಲ್ಗಳನ್ನು ಬಿಟ್ಟು, ಕೌಶಲ್ಯಾಭಿವೃದ್ಧಿ ಮತ್ತು ಕಲಿಕೆಯಲ್ಲಿ ಹೆಚ್ಚು ತೊಡಗಿಸಿ ಕೊಳ್ಳಬೇಕು ಎಂದು ತಾಲ್ಲೂಕು ಜನಪದ ಪರಿಷತ್ತು ಅಧ್ಯಕ್ಷ ಹಾಗು ಹಾಸನದ ಸಂತ ಜೋಸೆಫ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಅನಿಲ್ ಬಿ.ಕೆ. ತಿಳಿಸಿದರು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಿಟ್ಟನಹಳ್ಳಿಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮುಖ್ಯಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಾ "ನೀರಿನಲ್ಲಿ ಮುಳುಗಿದವನನ್ನು ರಕ್ಷಿಸಬಹುದು, ಆದರೆ ಮೊಬೈಲ್ನಲ್ಲಿ ಮುಳುಗಿದವನನ್ನು ರಕ್ಷಿಸಲು ಕಷ್ಟ" ಎಂಬ ಹೋಲಿಕೆಯನ್ನು ನೀಡುತ್ತಾ, ಪೋಷಕರು ಜವಾಬ್ದಾರಿಯೊಂದಿಗೆ, ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಹೋರಾಡುವ ಅಗತ್ಯವಿದೆ ಎಂಬ ಸಂದೇಶವನ್ನು ಅವರು ಒತ್ತಿ ಹೇಳಿದರು.

ಶಾಲೆಯ ಮುಖ್ಯ ಶಿಕ್ಷಕ ನಾಗಣ್ಣ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, 2025–25 ನೇ ಸಾಲಿನಿಂದ ಆಂಗ್ಲ ಮಾಧ್ಯಮದಲ್ಲಿ ಬೋಧನೆ ಮಾಡಲಾಗುವುದು ಎಂಬ ಖುಷಿ ವಿಚಾರನ್ನು ಗ್ರಾಮಸ್ಥರಿಗೆ ತಿಳಿಸಿದರು.



ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷ ಧರ್ಮರಾಜ ಧ್ವಜಾರೋಹಣ ನೆರವೇರಿಸಿದರು. ಶಿಕ್ಷಕ ಲೋಕೇಶ್ ಕಾರ್ಯಕ್ರಮ ನಿರೂಪಿಸಿದರು. ಅತಿಥಿ ಶಿಕ್ಷಕಿ ರಶ್ಮಿ ಸ್ವಾಗತಿಸಿದರು.

ಅತಿಥಿ ಶಿಕ್ಷಕರುಗಳಾದ ಶೀಲಾ ಮತ್ತು ಜ್ಯೋತಿಲಕ್ಷ್ಮಿ, ಕರ್ನಾಟಕ ಜಾನಪದ ಪರಿಷತ್ತು ಹೊಳೆನರಸೀಪುರ ತಾಲೂಕು ಘಟಕದ ಗೌರವ ಸಲಹೆಗಾರರಾದ ರಾಮಚಂದ್ರ, ಗ್ರಾಮದ ಹಿರಿಯ ಮುಖಂಡರಾದ ಬಸವರಾಜ್, ಚಂದ್ರು, ಸ್ನೇಹ ಬಳಗದ ಅಧ್ಯಕ್ಷ ಸಾಗರ್, ಉಪಾಧ್ಯಕ್ಷ, ಮುರಳಿ , ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಗ್ರಾಮಸ್ಥರು ಎಲ್ಲ ಕಾರ್ಯಕ್ರಮಗಳಿಗೆ ಸಹಕಾರ ನೀಡಿದರು. ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟ ಮತ್ತು ರಾಷ್ಟ್ರೀಯ ಏಕತೆ ಕುರಿತು ನೃತ್ಯ ಕಾರ್ಯಕ್ರಮಗಳನ್ನು ಪ್ರದರ್ಶಿಸಿದರು.

# ಆ.17–20 ಜಿಲ್ಲೆಗೆ ಆರೆಂಜ್–ರೆಡ್ ಅಲರ್ಟ್ ಘೋಷಣೆ

**ಚಿಕ್ಕಮಗಳೂರು:** ಚಿಕ್ಕಮಗಳೂರು ಜಿಲ್ಲೆಯಾದ್ಯಂತ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿದೆ. ಹವಾಮಾನ ಇಲಾಖೆಯಿಂದ ಆಗಸ್ಟ್ 17 ರಿಂದ 20ರವರೆಗೆ ಜಿಲ್ಲೆಗೆ ಆರೆಂಜ್ ಮತ್ತು ರೆಡ್ ಅಲರ್ಟ್ ಘೋಷಿಸಲಾಗಿದೆ. ಪ್ರತೀ ಗಂಟೆಗೆ ಸುಮಾರು 40–50 ಕಿ.ಮೀ. ವೇಗದಲ್ಲಿ ನಿರಂತರ ಗಾಳಿ ಬೀಸುವ ಸಂಭವವಿದ್ದು, ಅತೀಯಾದ ಮಳೆಯಿಂದ ಧರೆ/ ಗುಡ್ಡ ಕುಸಿತ ಉಂಟಾಗುವ ಸಂಭವವಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಸೂಕ್ತ ಮುಂಜಾಗೃತಾ ಕ್ರಮ ವಹಿಸಬೇಕಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಎಚ್ಚರ ವಹಿಸುವಂತೆ ಹಾಗೂ ರಾಜ್ಯದ ವಿವಿಧ ಸ್ಥಳಗಳಿಂದ ಜಿಲ್ಲೆಗೆ ಆಗಮಿಸುವ ಪ್ರವಾಸಿಗರು ಪ್ರವಾಸಿ ತಾಣಗಳಿಗೆ ತೆರಳುವಾಗ ಹಾಗೂ ಚಾರಣಿಗರು ಟ್ರೆಕ್ಕಿಂಗ್ ಮಾಡುವಾಗ ಎಚ್ಚರಿಕೆ ವಹಿಸಿ ಅಪಾಯಕಾರಿ ಘಟನೆಗಳಿಗೆ ಅವಕಾಶ ಕೊಡದೆ ಜಿಲ್ಲಾಡಳಿತಕ್ಕೆ ಸಹಕಾರ ನೀಡುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.30 ಎನ್.ಆರ್.ಪುರ ತಾಲ್ಲೂಕು ಮಟ್ಟದ ದಸರಾ ಕ್ರೀಡೆ

**ಚಿಕ್ಕಮಗಳೂರು:** 2025–26ನೇ ಸಾಲಿನ ನರಸಿಂಹರಾಜಪುರ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷರು ಮತ್ತು ಮಹಿಳೆಯರಿಗೆ ಆಗಸ್ಟ್ 30 ರಂದು ಬೆಳಿಗ್ಗೆ 10 ಗಂಟೆಗೆ ಕಟ್ಟಿನಮನೆ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆಸಲಾಗುತ್ತಿದೆ. ಕ್ರೀಡಾಪಟುಗಳು ತಮ್ಮ <https://dasaracmcup-2025.etrpindia.com/KA-sports/> ಮುಖಾಂತರ ಆಗಸ್ಟ್ 28 ರೊಳಗೆ ನೋಂದಾಯಿಸಿಕೊಳ್ಳಲು ಕೋರಲಾಗಿದೆ.ಕ್ರೀಡಾ ಸ್ಪರ್ಧೆಗಳಲ್ಲಿ ಪುರುಷರಿಗೆ ಅಥ್ಲೆಟಿಕ್ಸ್‌ನಲ್ಲಿ 100 ಮೀ., 200 ಮೀ., 400 ಮೀ., 800 ಮೀ., 1500 ಮೀ., 5000 ಮೀ., 10,000 ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಎಸೆತ, ಡಿಸ್ಕಸ್ ಎಸೆತ, 4ಫ100 ಮೀ. ಮತ್ತು 4ಫ400 ಮೀ. ರಿಲೇ ಹಾಗೂ ಗುಂಪು ಸ್ಪರ್ಧೆಯಲ್ಲಿ ವಾಲಿಬಾಲ್, ಕಬಡ್ಡಿ, ಖೋ ಖೋ, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್, ಷಟಲ್ ಬ್ಯಾಡ್ಮಿಂಟನ್ ಮತ್ತು ಯೋಗ– (ವೀರ ಭದ್ರಾಸನ, ಜಾನು ಶಿರ್ಷಾಸನ, ಹಲಾಸನ, ಧನುರಾಸನ) ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.ಮಹಿಳೆಯರಿಗೆ ಅಥ್ಲೆಟಿಕ್ಸ್‌ನಲ್ಲಿ 100 ಮೀ., 200 ಮೀ., 400 ಮೀ., 800 ಮೀ., 1500 ಮೀ., 3000 ಮೀ. ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಎಸೆತ, ಡಿಸ್ಕಸ್ ಎಸೆತ, 4ಫ100 ಮೀ. ಮತ್ತು 4ಫ400 ಮೀ. ರಿಲೇ, ಗುಂಪು ಸ್ಪರ್ಧೆಯಲ್ಲಿ ವಾಲಿಬಾಲ್, ಕಬಡ್ಡಿ, ಖೋಖೋ, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್, ಷಟಲ್ ಬ್ಯಾಡ್ಮಿಂಟನ್ ಮತ್ತು ಯೋಗ–(ವೀರ ಭದ್ರಾಸನ, ಜಾನು ಶಿರ್ಷಾಸನ, ಹಲಾಸನ, ಧನುರಾಸನ) ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.ಪುರುಷರಿಗೆ ಮತ್ತು ಮಹಿಳೆಯರಿಗೆ ಟೇಬಲ್ ಟೆನ್ನಿಸ್, ನೆಟ್ಬಾಲ್, ಈಜು, ಕುಸ್ತಿ ಮತ್ತು ಟೇಕ್ವಾಂಡೋ ಮತ್ತು ಜುಡೋ ಸ್ಪರ್ಧೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿ ಆಯ್ಕೆ ಮಾಡಿ ವಿಭಾಗ ಮಟ್ಟಕ್ಕೆ ಕಳುಹಿಸಿಕೊಡಲಾಗುವುದು. ಫುಟ್ಬಾಲ್ (ಪುರುಷರಿಗೆ ಮಾತ್ರ) ಕ್ರೀಡಾ ಸ್ಪರ್ಧೆಯನ್ನು ನೇರವಾಗಿ ಜಿಲ್ಲಾ ಮಟ್ಟದಲ್ಲಿ ನಡೆಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮ ಸಂಸ್ಥಾಪನೆಗೆ ಜೀವನ ಮುಡಿಪಾಗಿಟ್ಟವನು ಶ್ರೀಕೃಷ್ಣ

**ಚಿಕ್ಕಮಗಳೂರು:** ದ್ವಾಪರ ಯುಗದಲ್ಲಿ ಅಧರ್ಮದ ನಾಶಕ್ಕಾಗಿಯೇ ಅವತರಿಸಿ ಧರ್ಮ ಸಂಸ್ಥಾಪನೆ ಮತ್ತು ಭಕ್ತರ ರಕ್ಷಣೆಗೆ ತನ್ನ ಜೀವನವನ್ನು ಮುಡಿಪಾಗಿಟ್ಟವನು ಭಗವಾನ್ ಶ್ರೀಕೃಷ್ಣ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ಜಿಲ್ಲಾಡಳಿತದ ವತಿಯಿಂದ ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ಜರುಗಿದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು. ವಸುದೇವ–ದೇವಕಿಯ ಪುತ್ರನಾಗಿ ಜನಿಸಿದ ಶ್ರೀಕೃಷ್ಣ ಮುಂದೆ ನಂದಗೋಕುಲದಲ್ಲಿ ಬೆಳೆದು ಯಶೋದೆಯ ಮಗನಾಗಿಯೂ ಗಮನ ಸೆಳೆಯುತ್ತಾನೆ. ಶ್ರೀಕೃ? ಬಾಲ್ಯದಲ್ಲಿ ತುಂಟತನದ ಮೂಲಕವೂ ವಿಶೇಷವಾಗಿ ಗೋಚರಿಸುತ್ತಾನೆ ಎಂದರು.

ಭಗವದ್ಗೀತೆಯಲ್ಲಿ ನೀಡಿದ ನೀತಿಯ ಉಪದೇಶ ಶ್ರೀಕೃಷ್ಣನ ಜೀವನಾನುಭವ ಎಂದರೆ ತಪ್ಪಾಗಲಾರದು. ಮಹಾಭಾರತ



ಯುದ್ಧದಲ್ಲಿ ಅರ್ಜುನನ ಸಾರಥಿಯಾಗಿದ್ದ ಶ್ರೀಕೃಷ್ಣ ಪಾಂಡವ ಪಕ್ಷಪಾತಿಯಾದರೂ ಧರ್ಮ ಪರಿಪಾಲಕನಾಗಿ ಗುರುತಿಸಿಕೊಳ್ಳುವ ಪರಿ ಅನನ್ಯವಾದುದು. ಅರ್ಜುನನಿಗೆ ಗೀತೋಪದೇಶದ ಮೂಲಕ ಸತ್ಯದ ಅರಿವು ಮೂಡಿಸಿದ ಶ್ರೀಕೃಷ್ಣನ ಆದರ್ಶಗಳು ಸೇರಿದಂತೆ ಆತನ ಬದುಕಿನ ಹಲವಾರು ಮಹತ್ವದ ಘಟ್ಟಗಳನ್ನು ನಾವು ಅರಿತುಕೊಳ್ಳುವುದು ಅಗತ್ಯ. ನಮ್ಮೆಲ್ಲರ ಜೀವನೋತ್ಸಾಹದ ಸಂಕೇತವಾಗಿರುವ ಶ್ರೀಕೃ?ನ ಪ್ರಬುದ್ಧತೆ ಇಂದಿನ ಕಾಲಘಟ್ಟಕ್ಕೂ ಮಾದರಿಯಾಗಿ ನಿಲ್ಲುತ್ತದೆ ಎಂದು ಹೇಳಿದರು.

ಶ್ರೀಕೃಷನ ಕುರಿತು ವಿಶೇಷ ಉಪನ್ಯಾಸ ನೀಡಿದ ಸಾಹಿತಿಗಳಾದ ಚಟ್ನಹಳ್ಳಿ ಮಹೇಶ್ ಅವರು, ಧರ್ಮದ ಏಕಮೇವ ಉದ್ಧಾರವೇ ಶ್ರೀಕೃಷ್ಣ ನ ಜನ್ಮಕ್ಕೆ ಕಾರಣ. ಜಗತ್ತಿನ ಸಂರಕ್ಷಕ ಶ್ರೀಕೃಷ್ಣ ನ ವಿಶೇಶ ಗುಣಗಳು ಗಮನ ಸೆಳೆಯುತ್ತವೆ. ಇಂದಿಗೂ ಸಹ ಶ್ರೀಕೃಷ್ಣ ನ ವ್ಯಕ್ತಿತ್ವ ಮಾದರಿಯಾಗಿದೆ ಎಂದರು.

ಶ್ರೀಕೃ? ಉತ್ತಮ ರಾಜನೀತಿಜ್ಞನಾಗಿದ್ದು, ಸಹನೆ, ತಾಳ್ಮೆಯಂತಹ ಗುಣಗಳಿಂದ ವಿಶಿ?ವಾಗಿ ನಿಲ್ಲುತ್ತಾನೆ.

ಕಲಿಯುಗದಲ್ಲಿ ನಡೆಯಬಹುದಾದ ವಿದ್ಯಮಾನಗಳ ಬಗ್ಗೆ ದ್ವಾಪರ ಯುಗದಲ್ಲಿಯೇ ಶ್ರೀಕೃಷ ತಿಳಿಸಿದ್ದ. ಧರ್ಮ, ಪರಂಪರೆ, ಸಾತ್ವಿಕತೆಯ ರಕ್ಷಣೆಗೆ ಶ್ರೀಕೃಷ್ಣ ಕಾರಣನಾದ. ಶ್ರೀಕೃಷ್ಣ ನ ಸಂದೇಶವನ್ನು ಮನು ತಿಳಿದುಕೊಂಡರೆ ಅಧಿಕಾರದ ಲಾಲಸೆ. ತಪ್ಪು ಕಲ್ಪನೆ. ಅಹಂಕಾರ. ಭಿನ್ನಾಭಿಪ್ರಾಯಗಳನ್ನು ತೊರೆದು ಸರಳ ಜೀವನ ಕಂಡುಕೊಳ್ಳಬಹುದು ಎಂದು ಹೇಳಿದರು.

ಉಪತಹಸೀಲ್ದಾರ್ ರಾಮ್‌ರಾವ್ ದೇಸಾಯಿ ಅಧ್ಯಕ್ಷತೆ ವಹಿಸಿ, ಮಾತನಾಡಿದರು. ಇದೇ ವೇಳೆ ಶ್ರೀಕೃಷ್ಣ ಹಾಗೂ ರಾಧೆಯ ವೇಷಧಾರಿಗಳ ಸ್ಪರ್ಧೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮಕ್ಕೆ ಮೆರುಗು ತಂದ

ಚಿಕ್ಕ ಮಕ್ಕಳು ಮಕ್ಕಳಿಗೆ ಪ್ರಶಂಸಾ ಪತ್ರವನ್ನು ವಿತರಿಸಲಾಯಿತು. ಸ್ವಾಗತಿಸಿದ ಕನ್ನಡ ಮತ್ತು ಸಂಸ್ಕತಿ ಇಲಾಖೆಯ ಸಹಾಯಕ ನಿರ್ದೇಶಕ ಎಸ್.ರಮೇಶ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಯಾದವ ಸಂಘದ ಅಧ್ಯಕ್ಷ ನಾಗರಾಜ್, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಹಳ್ಳಿಕಾರ್ ಸಂಘದ ಜಿಲ್ಲಾ ಅಧ್ಯಕ್ಷ ಕೋಟೆ ಸೋಮಣ್ಣ, ಬಸವರಾಜ್ ಮುಂತಾದವರು ಉಪಸ್ಥಿತರಿದ್ದರು.

16ಸಿಕೆಎಂ01: ಜಿಲ್ಲಾಡಳಿತದ ವತಿಯಿಂದ ಇಂದು ನಗರದ ಕುವೆಂಪು ಕಲಾಮಂದಿರದಲ್ಲಿ ನಡೆದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮವನ್ನು ಶಾಸಕರಾದ ಹೆಚ್.ಡಿ.ತಮ್ಮಯ್ಯ ಉದ್ಘಾಟಿಸಿದರು.

### ಗೊಲ್ಲರಹಟ್ಟಿಗಳಿಗೆ ಕಂದಾಯ ಗ್ರಾಮ ಮಾನ್ಯತೆ

# ಮನೆಗಳಿಗೆ ಹಕ್ಕುಪತ್ರ ವಿತರಣೆ : ಬಿ.ಟಿ.ಕುಮಾರಸ್ವಾಮಿ

**ಚಿತ್ರದುರ್ಗ :** ಉಳುವವರೇ ಭೂಮಿ ಒಡೆಯ ಎಂಬ ಮಾದರಿಯಲ್ಲಿ, ಸರ್ಕಾರ ವಾಸಿಸುವವನೇ ಮನೆ ಒಡೆಯ ಎಂಬ ಪರಿಕಲ್ಪನೆ ರೂಪಿಸಿ ಗೊಲ್ಲರಹಟ್ಟಿಗಳಿಗೆ ಕಂದಾಯ ಗ್ರಾಮಗಳ ಮಾನ್ಯತೆ ನೀಡಿ, ಅಲ್ಲಿ ವಾಸಿಸುವ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ನೀಡುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಹೊಳಲ್ಕೆರೆ ರಸ್ತೆಯಲ್ಲಿರುವ ಅಖಿಲ ಭಾರತ ಯಾದವ ಮಹಾಸಂಸ್ಥಾನ ಸುಕ್ಷೇತ್ರ ಗೊಲ್ಲಗಿರಿಯಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈಗಾಗಲೇ ಜನವಸತಿ ಇರುವ 296 ಗ್ರಾಮಗಳಿಗೆ ಕಂದಾಯ ಗ್ರಾಮದ ಮಾನ್ಯತೆ ನೀಡಲಾಗಿದೆ. ಇವುಗಳಲ್ಲಿ ವಾಸವಿದ್ದ 6,384 ಕುಟುಂಬಗಳಿಗೆ ಹಕ್ಕುಪತ್ರ ಸಹ ನೀಡಲಾಗಿದೆ. ಜನರು ಖಾಸಗಿ ಅಥವಾ ಸರ್ಕಾರಿ ಜಾಗದಲ್ಲಿ ಬಹುದಿನಗಳಿಂದ ವಾಸವಿದ್ದರೆ ಅಂತಹ ಸ್ಥಳಗಳನ್ನು ಗುರುತಿಸಿ, ತಹಶೀಲ್ದಾರ್ ಹೆಸರಿಗೆ ಮೊದಲು ನೊಂದಣಿ ಮಾಡಲಾಗುವುದು. ತದ ನಂತರ ತಹಶೀಲ್ದಾರರು ಸಂಬಂದ ಪಟ್ಟವರಿಗೆ ಅವರ ಸ್ವತ್ತುಗಳನ್ನು ನೊಂದಣಿ ಮಾಡಿಕೊಡುತ್ತಾರೆ.

ಸರ್ಕಾರ ಕೇವಲ ಹಕ್ಕುಪತ್ರ ನೀಡದೇ, ಫಲಾನುಭವಿಗಳ ಹೆಸರಿನಲ್ಲಿ ನೇರವಾಗಿ ಇ-ಸ್ವತ್ತನ್ನು ಸೃಜಿಸಿ ಕೊಡುತ್ತಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಈಗಾಗಲೇ ಇ-ಸ್ವತ್ತನ್ನು ವಿತರಣೆ ಕಾರ್ಯ ಪ್ರಗತಿಯಲ್ಲಿದೆ. ಮುಂದುವರಿದು 190 ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿಸಲು ಗುರುತಿಸಲಾಗಿದೆ. 2026 ರಲ್ಲಿ ದೇಶಾದ್ಯಂತ ಜನಗಣತಿ ನಡೆಯಲಿದ್ದು, ಅದಕ್ಕೂ ಮುನ್ನವೇ ಇ ಸ್ವತ್ತು ವಿತರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಗೊಲ್ಲ ಸಮುದಾಯದವರದು ನೆಲ ಮೂಲದ ಸಂಸ್ಕೃತಿಯಾಗಿದೆ. ಕೃಷಿ ಹಾಗೂ ಪಶುಪಾಲನೆಯ ವೃತ್ತಿ ಮಾಡುತ್ತಾ ಶ್ರಮ ಜೀವಿಗಳಾಗಿದ್ದಾರೆ. ಇದರೊಂದಿಗೆ ಮಕ್ಕಳ ಶಿಕ್ಷಣಕ್ಕೂ ಹೆಚ್ಚಿನ ಆದ್ಯತೆ ನೀಡಬೇಕು. ಸರ್ಕಾರ ವಿದ್ಯಾರ್ಥಿನಿಲಯ, ವಸತಿ ಶಾಲೆಗಳನ್ನು ತೆರೆದಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು. ಮೂಡನಂಬಿಕೆಗಳನ್ನು ಕೈ ಬಿಡಬೇಕು. ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾದವಾಗಿದೆ. ಯಾವುದೇ ಕಾರಣ-ಕ್ಕೂ ಬಾಲ್ಯ ವಿವಾಹಕ್ಕೆ ಪ್ರೋತ್ಸಾಹ ನೀಡಬಾರದು. ಪ್ರತಿಯೊಬ್ಬರು ಭಗವದ್ಗೀತೆ ಓದುವ ಮೂಲಕ ಶ್ರೀ ಕೃಷ್ಣನ ಬೋಧನೆಗಳನ್ನು ಅಳವಡಿಸಿಕೊಳ್ಳಬೇಕು



ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಯಾದವ ಮಹಾಸಂಸ್ಥಾನ ಮಠದ ಶ್ರೀ ಕೃಷ್ಣ ಯಾದವಾನಂದ ಮಹಾಸ್ವಾಮಿ ಕಾರ್ಯಕ್ರಮದ ದಿವ್ಯ ಸಾನಿದ್ಯ ವಹಿಸಿ ಮಾತನಾಡಿ, ಕೃಷ್ಣ ಪರಮಾತ್ಮ ಎಲ್ಲರಿಗೂ ಗುರು, ಕೇವಲ ಯಾದವ ಜನಾಂಗಕ್ಕೆ ಸೀಮಿತವಲ್ಲ. ಇಂತಹ ಕೃಷ್ಣನಿಗೆ ಜಾತಿ ಬಂಧನದ ಸಂಕೋಲೆಯನ್ನು ತೊಡಿಸುವುದು ತರವಲ್ಲ. ನ್ಯಾಯಾಲಯಗಳಲ್ಲಿ ಇಂದಿಗೂ ಭಗವದ್ಗೀತೆ ಮೇಲೆ ಕೈ ಇರಿಸಿ ಪ್ರಮಾಣ ಮಾಡಿಸುತ್ತಾರೆ. ಕೃಷ್ಣ ಹಾಗೂ ಬಸವಣ್ಣವರ ತತ್ವಗಳಲ್ಲಿ ಸಾಮ್ಯತೆ ಇದೆ. ಎರಡರಲ್ಲೂ ವಿಧವೆ ಎನ್ನುವ ಪರಿಕಲ್ಪನೆ ಇಲ್ಲ. ಮೂಹೂರ್ತ ನೋಡಿ ಮದುವೆ ಶುಭ ಕಾರ್ಯಗಳನ್ನು ಆಯೋಜಿಸುವುದಿಲ್ಲ. ಭಗವಂತ ಅನುಕ್ಷಣ ನಮ್ಮೊಂದಿಗೆ ಇರುತ್ತಾನೆ. ಭಕ್ತಿಗೆ ಭಗವಂತ ಒಲಿಯುತ್ತಾನೆ ಎನ್ನುವುದನ್ನು ಕೃಷ್ಣ ತತ್ವ ಸಾರುತ್ತದೆ ಎಂದರು.

ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಹಿಂದಿನ ಅವಧಿಯಲ್ಲಿ ಶ್ರೀ ಕೃಷ್ಣ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ಆದೇಶ ಮಾಡಿದರು. ಕಾಡುಗೊಲ್ಲರ ಅಭಿವೃದ್ದಿಗಾಗಿ ನಿಗಮ ರಚನೆ ಮಾಡಲಾಗಿದೆ. ಜಿಲ್ಲೆಯಲ್ಲಿ ಈಗಾಗಲೇ 40ಕ್ಕೂ ಗೊಲ್ಲರಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸಲಾಗಿದೆ. ಇಲ್ಲಿ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವುದರೊಂದಿಗೆ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲಾಗುವುದು ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ಶ್ರೀ ಕೃಷ್ಣನ ಹಾಗೆ ಮಹಮದ್ ಪೈಗಂಬರರು ಸಹ ಪಶುಪಾಲನೆಗೆ ಒತ್ತು ನೀಡಿದ್ದರು. ನಗರದ ಹೊಳಲ್ಕೆರೆ ರಸ್ತೆಯಲ್ಲಿನ ಶ್ರೀ ಕೃಷ್ಣ ವೃತ್ತದ ಅಭಿವೃದ್ಧಿಗೆ ಪ್ರಾಧಿಕಾರದಿಂದ ಯೋಜನೆ ರೂಪಿಸಲಾಗಿದೆ. ಯೋಜನೆ ಕಾರ್ಯಗತಗೊಳಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅನುಮತಿ ಬೇಕಿದೆ. ಈ ಹಿನ್ನಲೆಯಲ್ಲಿ ಶಿವಮೊಗ್ಗದ ಕಚೇರಿಗೆ ಪತ್ರ ಬರೆಯಲಾಗಿದೆ. ಅನುಮತಿ ದೊರೆತ ತಕ್ಷಣ ಕಾಮಗಾರಿ ಆರಂಭಿಸಲಾಗಿದೆ ಹೇಳಿದರು.

## ಮ್ಯಾಂಗ್ರೋವ್ ಪುನರುಜ್ಜೀವನ ಯೋಜನೆಗೆ ಚಾಲನೆ

**ಮಂಗಳೂರು:** ನೇತ್ರಾವತಿ ನದಿ ದಂಡೆಯಲ್ಲಿ ಮ್ಯಾಂಗ್ರೋವ್ ಪುನರುಜ್ಜೀವನ ಉಪಕ್ರಮವನ್ನು ಸಿಂಜಿನ್, ಅರಣ್ಯ ಇಲಾಖೆ, ಫಿಶರೀಶ್ ಕಾಲೇಜ್, ಸೆಂಟರ್ ಫಾರ್ ಅಡ್ವಾನ್ಸ್ ಲರ್ನಿಂಗ್ (ಸಿಎಫ್‌ಎಎಲ್) ಮತ್ತು ವನ ಚಾರಿಟೇಬಲ್ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಗುರುವಾರ ನಡೆದ ಯೋಜನೆಯ ಚಾಲನಾ ಸಮಾರಂಭದಲ್ಲಿ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ, ಡಿಎಫ್‌ಓ ಅಂಥೋನಿ ಮರಿಯಪ್ಪನ್, ಮಂಗಳೂರು ಮಹಾನಗರ ಪಾಲಿಕೆ ಆಯುಕ್ತ ರವಿಚಂದ್ರ ನಾಯಕ್, ಡಿಯುಡಿಸಿ ಯೋಜನಾ ನಿರ್ದೇಶಕ ಡಾ.ಜಿ.ಸಂತೋಷ್ ಕುಮಾರ್, ಫಿಶರೀಸ್ ಕಾಲೇಜಿನ ಡೀನ್ ಡಾ.ಎನ್.ಎಚ್.ಆಂಜನೇಯಪ್ಪ ಮತ್ತಿತರರು ಉಪಸ್ಥಿತರಿದ್ದರು.

ಶಿಥಿಲವಾಗಿರುವ ಮ್ಯಾಂಗ್ರೋವ್ ಪರಿಸರವನ್ನು ಪುನರ್ ನಿರ್ಮಾಣ ಮಾಡುವುದು, ಜೀವವೈವಿಧ್ಯವನ್ನು ವಿಸ್ತರಿಸುವುದು, ಇಂಗಾಲ ಹೀರಿಕೊಳ್ಳುವಿಕೆಯನ್ನು ಸುಧಾರಿಸುವುದು ಮತ್ತು ಕರಾವಳಿ ಸಂರಕ್ಷಣೆ ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಈ ಯೋಜನೆಯಡಿ ವಿದ್ಯಾರ್ಥಿಗಳು ಮತ್ತು ಮೀನುಗಾರರು ಸೇರಿದಂತೆ ಸಮುದಾಯ ಪಾಲ್ಗೊಳ್ಳುವಿಕೆಯಲ್ಲಿ ಮುಂದಿನ ಐದು ವರ್ಷಗಳಲ್ಲಿ 54 ಎಕರೆ ಮ್ಯಾಂಗ್ರೋವ್ ಅಭಿವೃದ್ಧಿಪಡಿಸಲಾಗುವುದು. ಅತ್ಯಾಧುನಿಕ ಜಿಐಎಸ್ ಮ್ಯಾಪಿಂಗ್, ಡ್ರೋಣ್ ಕಣ್ಗಾವಲು ಮತ್ತು ಜೀವವೈವಿಧ್ಯ ಟ್ರ್ಯಾಕಿಂಗ್‌ನಂಥ ವ್ಯವಸ್ಥೆಯನ್ನು ಈ ಉದ್ದೇಶಕ್ಕೆ ಬಳಸಿಕೊಳ್ಳಲಾಗುತ್ತದೆ ಎಂದು ಪ್ರಕಟಣೆ ಹೇಳಿದೆ.

# ಮಕ್ಕಳಿಗೆ ಪ್ರೀತಿಯಿಂದ ಶಿಸ್ತಿನ ಪಾಠ ಬೋಧಿಸಬೇಕು : ಕವಿತಾ

**ಚಿಕ್ಕಮಗಳೂರು :** ಎಳೆವಯಸ್ಸಿನ ಪುಟಾಣಿ ಮಕ್ಕಳಿಗೆ ಅತಿಹೆಚ್ಚು ಒತ್ತಡ ನೀಡಬಾರದು. ಮಕ್ಕಳಲ್ಲಿ ತುಂಟಾಟ, ಚೇಷ್ಟೆಗಳು ಇರಬೇಕು. ಜೊತೆಗೆ ಪಾಲಕರು ಕೋಪಿತರಾಗದೇ ಪ್ರೀತಿಯಿಂದಲೇ ಶಿಸ್ತಿನ ಪಾಠವನ್ನು ಬೋಧಿಸಬೇಕು ಎಂದು ರಚಿತ ಮಹಿಳಾ ಸಮಾಜದ ಅಧ್ಯಕ್ಷೆ ಕವಿತಾ ಗೋಪಾಲ್ ಹೇಳಿದರು.

ನಗರದ ಬಸವನಹಳ್ಳಿ ಸಮೀಪದ ಮಹಿಳಾಶ್ರಮ ಹಿರಿಯ ಪ್ರಾಥಮಿಕ ಶಾಲೆಯ ಸಭಾಂಗಣದಲ್ಲಿ ರಚಿತ ಮಹಿಳಾ ಸಮಾಜ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾಶ್ರಮ ಹಿರಿಯ ಪ್ರಾಥಮಿಕ ಶಾಲೆ, ಜಿಲ್ಲಾ ಬಾಲಭವನ ಸಮಿತಿ ಆಶ್ರಯದಲ್ಲಿ ಶನಿವಾರ ಶ್ರೀಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ನಡೆದ ಛದ್ಮ ವೇಷ ಸ್ಪರ್ಧಾ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಭಗವಾನ್ ಶ್ರೀಕೃಷ್ಣನ ನೀತಿ, ರೀತಿ ಹಾಗೂ ಆದರ್ಶಗಳನ್ನು ತೆಗೆದುಕೊಂಡು ಜೀವಿಸಬೇಕಿದೆ. ಜೀವನ ವೆಂಬ ಬಂಡಿಯಲ್ಲಿ ಸಾಗುತ್ತಿರುವ ಮಕ್ಕಳಿಗೆ ಪಾಲಕರು ತಮ್ಮದೇ ಆಲೋಚನೆಯ ಪಠ್ಯಕ್ಕೆ ಒತ್ತು ಕೊಡದೇ, ಮಕ್ಕಳು ಆಸಕ್ತಿ ಹೊಂದಿರುವ ಕ್ಷೇತ್ರಕ್ಕೆ ಹೆಚ್ಚು ಪ್ರೋತ್ಸಾಹಿಸಿದರೆ ಸಮಾಜದಲ್ಲಿ ಉನ್ನತೀಯಾಗಲು ಸಾಧ್ಯವಾ ಗಲಿದೆ ಎಂದು ತಿಳಿಸಿದರು.

ಪ್ರಸ್ತುತ ಸಮಾಜದಲ್ಲಿ ಅತಿಹೆಚ್ಚು ಇಂಜಿನಿಯರ್, ವೈದ್ಯರುಗಳೇ ಹೆಚ್ಚಾಗಿದೆ. ಇದರಿಂದ ಬೇಡಿಕೆ ಸಂಖ್ಯೆಯು ಕಡಿಮೆಯಾಗಿದೆ. ಈ ಹೊರತಾಗಿ ಕೃಷಿ



ಸೇರಿದಂತೆ ಬೇರೆ ಬೇರೆ ಹುದ್ದೆಗಳನ್ನು ಅಲಂಕರಿಸುವ ಪಾಲಕರು ಪ್ರೇರೇಪಿಸಬೇಕು. ಜೊತೆಗೆ ಭಾರತೀಯ ಪ್ರಾಚೀನ ಸಂಸ್ಕೃತಿ, ಗುರು ಹಿರಿಯರನ್ನು ಗೌರವಿಸುವ ಸಾಮಾಜಿಕ ಜ್ಞಾನ ತುಂಬಬೇಕಿದೆ ಎಂದರು.

ಶ್ರೀಕೃಷ್ಣನ ಜಯಂತಿಯು ರಾಜ್ಯದ ಉಡುಪಿ, ಮೇಲುಕೋಟೆ, ಬಾದಾಮಿ ಸೇರದಂತೆ ರಾಷ್ಟ್ರದ ಅನೇಕ ರಾಜ್ಯಗಳಲ್ಲಿ ಅದ್ದೂರಿಯಾಗಿ ನಡೆಯಲಿದೆ. ಗೊಲ್ಲರ ಸಮುದಾಯಕ್ಕೆ ಸೇರಿದ ಶ್ರೀಕೃಷನನ್ನು ಆ ಸಮುದಾ ಯವು ಮನೆದೇವರಾಗಿ ಪೂಜಿಸುತ್ತಾರೆ. ಅಲ್ಲದೇ ಕೃಷ್ಣನ ಹಬ್ಬದಂದು ಮಡಿಕೆ ಒಡೆಯುವ ಚಟುವಟಿಕೆಗಳು ನೋಡುಗರನ್ನು ಸಂತೋಷದಿಂದ ತೇಲಿಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧ್ಯಕ್ಷ ಶ್ರೀನಿವಾಸ್ ವೈ ಆಲದಾರ್ತಿ ಶ್ರೀಕೃಷ್ಣನ ಜಯಂತಿಯ ಸ್ಪರ್ಧೆಯಲ್ಲಿ ಗೆಲುವುದು ಮುಖ್ಯವಲ್ಲ. ಕ್ರಿಯಾತ್ಮಕವಾಗಿ ಭಾಗವಹಿಸುವುದು ಮುಖ್ಯ. ಇಂದು ಮಕ್ಕಳ ಮನರಂಜನೆಯ ದಿನವಾಗಿದ್ದು, ಎಲ್ಲರೂ ಒಂದಾಗಿ ಸಂತೋ ಷದ ಕ್ಷಣಗಳನ್ನು ಅನುಭವಿಸಬೇಕು ಎಂದು ಹೇಳಿದರು.

ಶಾಲೆಯ ಮುಖ್ಯೋಪಾಧ್ಯಾಯ ಎಸ್.ಪ್ರವೀಣ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿ ಪ್ರತಿ ಮಾನವರಲ್ಲಿ ದೇವರ ಸ್ವರೂಪವನ್ನು ಕಾಣಬೇಕು. ಹೀಗಾಗಿ ಪೂರ್ವಿಕರು ಪವಿತ್ರ ಕೇಂದ್ರಗಳಲ್ಲಿ ನೆಲೆಸಿರುವ ಭಗ ವಂತನ ನಾಮವನ್ನು ಮಕ್ಕಳಿಗೆ ನಾಮಕರಣಗೊಳಿಸಿ ಭಗವನಂತೆ ಸನ್ನಡತೆಯ ದಾರಿಯಲ್ಲಿ ಸಾಗಲು ಆಶಿ ಸುತ್ತಾರೆ ಎಂದು ತಿಳಿಸಿದರು.

ಇದೇ ವೇಳೆ ಶ್ರೀಕೃಷ್ಣ ಜಯಂತಿ ಪ್ರಯುಕ್ತ ಏರ್ಪಡಿಸಿದ್ಧ 20 ಪುಟಾಣಿ ಮಕ್ಕಳಿಗೆ ಪ್ರಮಾಣಪತ್ರ ಹಾಗೂ ಬಹುಮಾನ ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಾಣಾಧಿಕಾರಿ ಡಿ.ಸಂ ತೋಷ್, ಸಿಬ್ಬಂದಿ ದರ್ಶಿನಿ, ಜಿಲ್ಲಾ ಬಾಲಭವನ ಸಮಿತಿ ಸಿಬ್ಬಂದಿ ಮಾನಸ, ರಚಿತ ಮಹಿಳಾ ಸಮಾಜದ ಕಾರ್ಯದರ್ಶಿ ಲೀಲಾ ವಿಶ್ವೇಶ್ವರ್ ಮತ್ತಿತರಿದ್ದರು.

# ಬೀದಿನಾಯಿಗಳ ನಿಯಂತ್ರಣಕ್ಕೆ ಸಂತಾನ ಹರಣ ಶಸ್ತ್ರಚಿಕಿತ್ಸೆ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ಅತಿ ಶೀಘ್ರದಲ್ಲಿ ಬೀದಿ ನಾಯಿಗಳಿಗೆ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಮಾಡುವ ಮೂಲಕ ನಿಯಂತ್ರಣಕ್ಕೆ ಅಗತ್ಯ ಕ್ರಮ ವಹಿಸಬೇಕೆಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿ-ದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ನಗರ ಮತ್ತು ತಾಲ್ಲೂಕಿನ ಗ್ರಾ.ಪಂ ವ್ಯಾಪ್ತಿಯಲ್ಲಿ ಬೀದಿನಾಯಿಗಳ ಉಪಟಳ ಹಾಗೂ ಬಿಡಾಡಿ ದನಗಳ ತೊಂದರೆಗಳ ಬಗ್ಗೆ ಸಾರ್ವಜನಿಕರಿಂದ ನಗರಸಭೆ ಮತ್ತು ತಾಲ್ಲೂಕು ಪಂಚಾಯಿತಿಗೆ ಹಲವಾರು ದೂರು ಬಂದ ಹಿನ್ನೆಲೆಯಲ್ಲಿ ಸಭೆ ನಡೆಸಿ ಕ್ರಮ ಕೈಗೊಳ್ಳಲು ಸೂಚಿಸಿದರು.

ಕಸಬಾ ಹೋಬಳಿ ಇಂದಾವರ ಗ್ರಾಮದ ಸರ್ವೆ ನಂ.36 ರಲ್ಲಿ 15 ಎಕರೆ ಜಾಗವನ್ನು ಪಶುಸಂಗೋಪನೆ ಇಲಾಖೆಗೆ ಮೀಸಲಿಟ್ಟಿದ್ದು, ಅದರಲ್ಲಿ ಎರಡು ಎಕ-ರೆ ಜಾಗದಲ್ಲಿ ಬೀದಿನಾಯಿಗಳನ್ನು ಪಳಗಿಸಿ ಚಿಕಿತ್ಸೆ ನೀಡಲು ಸಂಬಂಧಿಸಿದ ಪಶುಸಂಗೋಪನೆ ಇಲಾಖೆ ಉಪನಿರ್ದೇಶಕರಿಗೆ ಸೂಚನೆ ನೀಡಲಾಗಿದೆ ಎಂದರು.

ಈ ಸಂಬಂಧ ಇನ್ನೊಂದು ತಿಂಗಳಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಬೀದಿನಾಯಿಗಳನ್ನು



ಹಿಡಿದು ಸಂತಾನ ಹರಣ ಶಸ್ತ್ರ ಚಿಕಿತ್ಸೆ ನೀಡಿ ಪುನಹಾ ಸ್ವಸ್ಥಾನಕ್ಕೆ ಬೀದಿನಾಯಿಗಳನ್ನು ತಂದು ಬಿಡಲಾಗುವುದು ಎಂದು ತಿಳಿಸಿದರು. ವರ್ಷದಲ್ಲಿ ಎರಡು ಬಾರಿ ಸಂತಾನ ಹರಣ ಶಸ್ತ್ರ ಚಿಕಿತ್ಸೆ ನೀಡಿದರೆ ಬೀದಿನಾಯಿಗಳ ಸಂತತಿ ಕಡಿಮೆಯಾಗುತ್ತದೆ ಎಂದು ಪಶುಸಂಗೋಪನೆ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆಂದು ಹೇಳಿದರು.

ಬಿಡಾಡಿ ದನಗಳನ್ನು ಸಾಕಿರುವವರಿಗೆ ನಗರಸಭೆಯಿಂದ ರಸ್ತೆಗೆ ಬಿಡದಂತೆ ಸೂಚನೆ ಪತ್ರ ನೀಡಿದ್ದು, ನಿರ್ಲಕ್ಷ್ಯ ವಹಿಸಿ ದನಗಳನ್ನು ಬೀದಿಗೆ ಬಿಟ್ಟರೆ ಬೇರೆಡೆಗೆ ಸಾಗಿಸಲು ಕ್ರಮವಹಿಸಲಾಗುವುದೆಂದು ಎಚ್ಚರಿಸಿದರು.

ನಗರದ ಕಲ್ಯಾಣ ಮಂಟಪಗಳ ಮುಂಭಾಗದಲ್ಲಿ ವಾಹನಗಳನ್ನು ನಿಲುಗಡೆ ಮಾಡುತ್ತಿರುವುದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಸಾರ್ವಜನಿಕರ ದೂರನ್ನು ಗಂಭೀರವಾಗಿ ಪರಿಗಣಿಸಿ

> **ಬಿಡಾಡಿ ದನಗಳ ನಿಯಂತ್ರಣಕ್ಕೆ ನಗರಸಭೆಯಿಂದ ಅಗತ್ಯ ಕ್ರಮ ಕೈಗೊಂಡಿದ್ದು, ಕಾಮಧೇನು ಗೋಶಾಲೆಗೆ ಟೆಂಡರ್ ನೀಡಲಾಗಿದೆ. ಬಿಡಾಡಿ ದನಗಳ ಸಾಕಾಣೆದಾರರಿಗೆ ನಗರಸಭೆಯಿಂದ ನೋಟೀಸ್ ನೀಡಿದ್ದು, ಸ್ಪಂದಿಸದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.**

ಕಲ್ಯಾಣ ಮಂಟಪದ ಮಾಲಿಕರು ಸೆಕ್ಯುರಿಟಿ ಗಾರ್ಡ್ ಒಬ್ಬರನ್ನು ನೇಮಕ ಮಾಡಿಕೊಂಡು ದೂರದಲ್ಲಿ ವಾಹನ ನಿಲುಗಡೆಗೆ ಮುಂದಾಗಬೇಕೆಂದು ಮನವಿ ಮಾಡಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ಬೀದಿನಾಯಿಗಳ ಉಪಟಳದಿಂದ ನಾಗರೀಕರಿಗೆ ತೊಂದರೆಯಾಗುತ್ತಿರುವುದನ್ನು ಮನಗಂಡು ಅವುಗಳ ನಿಯಂತ್ರಣಕ್ಕೆ ನಗರಸಭೆಯಿಂದ ಅಗತ್ಯ ಮುಂಜಾಗ್ರತಾ ಕ್ರಮ ವಹಿಸಲಾಗುವುದೆಂದು ಭರವಸೆ ನೀಡಿದರು.

ಪೌರಾಯುಕ್ತ ಬಿ.ಸಿ ಬಸವರಾಜ್ ಮಾತನಾಡಿ, ಕಳೆದೆರಡು ವರ್ಷಗಳಿಂದ 3500 ಬೀದಿನಾಯಿಗಳಿಗೆ ಸಂತಾನ ಹರಣ ಶಸ್ತ್ರಚಿಕಿತ್ಸೆ ನೀಡಲಾಗಿದೆ. ಪ್ರಸಕ್ತ ವರ್ಷ 2000 ಬೀದಿನಾಯಿಗಳಿಗೆ ಶಸ್ತ್ರಚಿಕಿತ್ಸೆ ನೀಡಲು ಗುರಿಹೊಂದಲಾಗಿದ್ದು, ಸಧ್ಯದಲ್ಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕನಿಷ್ಟ 6 ತಿಂಗಳಿಗೊಮ್ಮೆ ಶಸ್ತ್ರಚಿಕಿತ್ಸೆ ನೀಡಲಾಗುವುದೆಂದರು.

ಇದೂವರೆಗೆ ಬೀದಿನಾಯಿಗಳ ನಿಯಂತ್ರಣಕ್ಕೆ ಟೆಂಡರ್ ಕರೆದಿದ್ದು, ಟೆಂಡರ್‌ದಾರರು ಭಾಗವಹಿಸದ ಪರಿಣಾಮ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಆ.11 ಕ್ಕೆ ಟೆಂಡರ್ ಪ್ರಕ್ರಿಯೆ ಅಂತಿಮಗೊಳಿಸಿ ಕಾರ್ಯಾದೇಶ ನೀಡಿ ಶಸ್ತ್ರಚಿಕಿತ್ಸೆಗೆ ಕ್ರಮವಹಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಮೀನಾನಾಗರಾಜ್, ಜಿ.ಪಂ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನ, ಪರಿಸರ ಅಭಿಯಂತರರಾದ ತೇಜಸ್ವಿನಿ, ಆರೋಗ್ಯ ನಿರೀಕ್ಷಕರಾದ ನಾಗಪ್ಪ, ರಂಗಪ್ಪ, ಇಂಜಿನಿಯರ್ ಲೋಕೇಶ್, ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಮೋಹನ್ ಕುಮಾರ್, ಪ್ರಾಣಿ ದಯಾ ಸಂಘದ ನಳಿನಾ ಡಿಸಾ ಮತ್ತಿತರರು ಭಾಗವಹಿಸಿದ್ದರು.

### ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್ ಸ್ಪರ್ಧೆ

## ವಿದ್ಯಾ ವಿಕಾಸ ಶಾಲೆಗೆ ಪ್ರಥಮ ಸ್ಥಾನ



**ಚಿತ್ರದುರ್ಗ:** ಜುಲೈ 25 ರಂದು ಹಿರಿಯೂರಿನಲ್ಲಿ ನಡೆದ ಐಸಿಎಸ್‌ಇ ವಿಭಾಗದ ಝೋನಲ್ ಹಂತದ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ ಐಸಿಎಸ್‌ಇ ವಿಭಾಗದ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದಿದ್ದಾರೆ.

ಐಸಿಎಸ್‌ಇ ವಿಭಾಗದ ವಿದ್ಯಾರ್ಥಿಗಳು ಬಾಲಕರ ಸಿಂಗಲ್ಸ್ 10ನೇ ತರಗತಿಯ ಎಸ್.ಜಿ.ಶ್ರೇಯಸ್, ಬಾಲಕಿಯರ ಡಬಲ್ಸ್‌ನಲ್ಲಿ 8ನೇ ತರಗತಿಯ ವಿದ್ಯಾರ್ಥಿನಿಯರಾದ ಎಂ.ಜೆ.ವರ್ಷ, ಕೆ.ಜಿ. ವೃಂದಾ ಪ್ರಥಮ ಸ್ಥಾನ ಪಡೆದಿದ್ದಾರೆ.

ಜುಲೈ 29ರಂದು ಬೆಂಗಳೂರಿನಲ್ಲಿ ನಡೆಯಲಿರುವ ರಿಜನಲ್ ಹಂತಕ್ಕೆ ಆಯ್ಕೆಯಾಗಿದ್ದಾರೆ.

ಜುಲೈ 26 ರಂದು ನಡೆದ ಐಸಿಎಸ್‌ಇ ವಿಭಾಗದ ಝೋನಲ್ ಹಂತದ ಟೇಬಲ್ ಟೆನ್ನಿಸ್ ಸ್ಪರ್ಧೆಯಲ್ಲಿ ಐಸಿಎಸ್‌ಇ ಶಾಲೆಯ 14 ವರ್ಷದೊಳಗಿನ ಬಾಲಕರ ವಿಭಾಗದಲ್ಲಿ ಶಂಕರ್ ತಂಡ, 17 ವರ್ಷದೊಳಗಿನ ಬಾಲಕರ ವಿಭಾಗದಲ್ಲಿ ಹೆಚ್.ಶೋಭಿತ್ ತಂಡ ಪ್ರಥಮ ಸ್ಥಾನಗಳಿಸಿದ್ದಾರೆ

ಜುಲೈ 31 ಹಾಗೂ ಆಗಸ್ಟ್ 1 ರಂದು ಬೆಂಗಳೂರಿನಲ್ಲಿ ನಡೆಯುಲಿರುವ ರಿಜನಲ್ ಹಂತಕ್ಕೆ 2 ತಂಡಗಳು

### ತುಂಗಭದ್ರಾ ಪ್ರವಾಹದಿಂದ ಗುತ್ತೂರಿನಲ್ಲಿ ಶವಸಂಸ್ಕಾರಕ್ಕೆ ಅಡಚಣೆ

## ಕೇಳೋರಿಲ್ಲ ಪರಿಶಿಷ್ಠ ಜಾತಿಯವರ ನೋವಿನ ಕಥೆ

**ಹರಿಹರ :** ಕಳೆದ ಮೂರು ತಿಂಗಳಿಂದ ಮಲೆನಾಡು ಸೇರಿದಂತೆ ಭದ್ರಾವತಿ, ಶಿವಮೊಗ್ಗ, ಹಾಗೂ ಇತರ ತಲೂಕು ಪ್ರದೇಶಗಳಲ್ಲಿ ಭಾರೀ ಮಳೆಯಾಗುತ್ತಿರುವುದು ನದಿಗಳ ಹರಿವಿನಲ್ಲಿ ಅಪಾಯದ ಮಟ್ಟ ತಲುಪುವಂತೆ ಮಾಡಿದೆ. ಭದ್ರಾ ಮತ್ತು ತುಂಗಾ ಜಲಾಶಯ ದಿಂದ ಹೆಚ್ಚುವರಿ ನೀರನ್ನು ನದಿಗೆ ಬಿಡಲಾಗಿರುವುದರಿಂದ ತುಂಗಭದ್ರಾ ನದಿ ಹರಿಹರದ ಹತ್ತಿರ ಅಪಾಯದ ಅಂಚು ಮೀರಿ ಭಾರೀ ಹೊಳೆಚುರುಕಿನಿಂದ ಹರಿಯುತ್ತಿದೆ. ನದಿ ದಂಡೆಯ ಜನಜೀವನ ಈಗ ಆತಂಕದ ನಿರೀಕ್ಷೆಯಲ್ಲಿದೆ.

ಈ ಪ್ರಕೃತಿಕ ಬಿಕ್ಕಟ್ಟಿನ ಮಧ್ಯೆ, ಗುತ್ತೂರು ಗ್ರಾಮದಲ್ಲಿ ಭಾನುವಾರ ರಾತ್ರಿ 75 ವರ್ಷಗಳ ಪರಿಶಿಷ್ಠ ಜಾತಿಗೆ ಸೇರಿದ ನಾಗಮ್ಮ ರಾಮಪ್ಪ ಬಳ್ಳಾರಿ ಎಂಬವರು ನಿಧನರಾಗಿದ್ದರು. ಸೋಮವಾರ (ಜುಲೈ 28) ಅವರ ಅಂತ್ಯಕ್ರಿಯೆಗೆ ಸಂಬಂಧಿಸಿದ ಘಟನೆ ಗಂಭೀರ ಸಾಮಾಜಿಕ ಸಮಸ್ಯೆ ಮತ್ತು ಅನ್ಯಾಯದ ಪ್ರತಿಬಿಂಬವಾಗಿ ಪರಿಣಮಿಸಿತು.

ಗುತ್ತೂರು ಗ್ರಾಮದಲ್ಲಿ ಪರಿಶಿಷ್ಠ ಜಾತಿಯವರಿಗೆ



ಸ್ಮಶಾನ ಸೌಲಭ್ಯವಿಲ್ಲ. ಹೀಗಾಗಿ, ಪರಂಪರೆಯಿಂದ ನದಿಯ ದಡವೇ ಅಂತ್ಯಕ್ರಿಯೆಗಾಗಿ ಬಳಸಲ್ಪಡುತ್ತಿತ್ತು. ಆದರೆ ಈ ಬಾರಿ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದರಿಂದ, ಮೃತರ ಅಂತ್ಯಕ್ರಿಯೆಯನ್ನು ನೆರವೇರಿಸುವಲ್ಲಿ ನಾಗಮ್ಮ ಅವರ ಕುಟುಂಬ ಹಾಗೂ ಗ್ರಾಮದ ಪರಿಶಿಷ್ಠ ಜಾತಿಯವರಿಗೆ ತೀವ್ರ ಸಂಕಷ್ಟ ಎದುರಾಯಿತು.

ನದಿ ನೀರಿನಲ್ಲಿ ಮುಳುಗಿದ ನದಿಯ ದಡವಂಚಿದ ಈ ಕುಟುಂಬ ಬೇರೊಂದು ಸ್ಥಳವಿಲ್ಲದೆ ಅಲಕ್ಷಿತ ಸ್ಥಿತಿಯಲ್ಲಿ, ದುಃಖದ ಮಧ್ಯೆಯೂ ಶವಸಂಸ್ಕಾರವನ್ನು ನಡೆಸುವ ಹೋರಾಟ ನಡೆಸ ಬೇಕಾಯಿತು. ನದಿ ನೀರಿನಲ್ಲಿ ಶವಸಂಸ್ಕಾರ ಮಾಡಲು ಹೆದರುವಂತಾಗಿದ್ದ ಪರಿಸ್ಥಿತಿಯಲ್ಲಿ, ಗ್ರಾಮದ ನಿವಾಸಿಗಳು ಹಾಗೂ ಬಂಧುಮಿತ್ರರು ಮನವರಿಕೆ ಇಲ್ಲದೆ ಕಣ್ಣೀರಿಟ್ಟು ನೋವು ಹಂಚಿಕೊಂಡರು.

"ನಾವು ಕೂಡ ಮನುಷ್ಯರು, ನಮ್ಮೆದುರು

## ಮೈಸೂರಿನಲ್ಲಿ 61 ಕೆಜಿ ಗಾಂಜಾ ಪತ್ತೆ : ಸಿಪಿಐ ಅಮಾನತ್ತು

**ಬೆಂಗಳೂರು :** ಸಾಂಸ್ಕೃತಿಕ ರಾಜಧಾನಿ ಮೈಸೂರಿನ ಬನ್ನಿಮಂಟಪದ ವರ್ತುಲ ರಸ್ತೆಯ ಕಾರ್ ಗ್ಯಾರೇಜ್‌ನ ಪಕ್ಕದ ಜಾಗದ ಶೆಡ್‌ನಲ್ಲಿ 61 ಕೆ.ಜಿ ಮಾದಕ ವಸ್ತು (ಎಂಡಿಎಂಎ) ಪತ್ತೆಯಾದ ಪ್ರಕರಣದಲ್ಲಿ, ಕರ್ತವ್ಯ ಲೋಪದ ಮೇಲೆ ನರಸಿಂಹರಾಜ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಲಕ್ಷ್ಮಿಕಾಂತ ಕೆ. ತಳವಾರ ಅವರನ್ನು ಅಮಾನತು ಮಾಡಲಾಗಿದೆ.

ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಅವರು ತಳವಾರ್ ಅವರ ಇಲಾಖೆ ವಿಚಾರಣೆ ಬಾಕಿ ಇರುವಂತೆ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ತೆರವಾದ ಹುದ್ದೆಗೆ ನಗರ ಅಪರಾಧ ಪತ್ತೆ ವಿಭಾಗದ (ಸಿಸಿಬಿ) ಶಬ್ಬೀರ್ ಹುಸೇನ್ ಅವರನ್ನು ನಿಯೋಜಿಸಿದ್ದಾರೆ.

ಡ್ರಗ್ಸ್ ಸಾಗಾಣಿಕೆ ಪ್ರಕರಣದಲ್ಲಿ ಬಂಧಿತನಾದ ಆರೋಪಿಯೊಬ್ಬ ನೀಡಿದ ಮಾಹಿತಿ ಆಧರಿಸಿ ಎಂಡಿಎಂಎ ತಯಾರಿಕಾ ಘಟಕದ ಮೇಲೆ ಸ್ಥಳೀಯ ಪೊಲೀಸರ ನೆರವಿನಿಂದ ಮಹಾರಾಷ್ಟ್ರ ಪೊಲೀಸರು ದಾಳಿ ಮಾಡಿದ್ದರು. ಪುಡಿಯ ರೂಪದಲ್ಲಿದ್ದ 11 ಕೆ.ಜಿ ಎಂಡಿಎಂಎ ಮತ್ತು ದ್ರವರೂಪದಲ್ಲಿ ಸಂಸ್ಕರಣೆಯಾಗುತ್ತಿದ್ದ 50 ಕೆ.ಜಿಯಷ್ಟು ಎಂಡಿಎಂಎ ಮಾದಕ ವಸ್ತುವನ್ನು ವಶಕ್ಕೆ ಪಡೆದಿದ್ದರು. ಈ ಬಗ್ಗೆ ಮಾಹಿತಿಯೇ ಇರದೇ ಕರ್ತವ್ಯ ಲೋಪ ಎಸಗಿದ್ದ ಕಾರಣಕ್ಕೆ ಇನ್‌ಸ್ಪೆಕ್ಟರ್ ಅವರನ್ನು ಅಮಾನತು ಮಾಡಲಾಗಿದೆ.

4 ಮಂದಿ ಬಂಧನ: ' ಕಾರ್ಯಾಚರಣೆಯಲ್ಲಿ ಮಹಾರಾಷ್ಟ್ರ ಪೊಲೀಸರು, ಕಾರ್ ಮೆಕ್ಯಾನಿಕ್ ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ. ಮುಂಬೈನ ಅಂಧೇರಿಯ ಫಿರೋಜ್ ಮೌಲಾ ಶೇಕ್ (28), ಗುಜರಾತ್‌ನ ಸೂರತ್ ನಿವಾಸಿ ಶೇಕ್ ಆದಿಲ್ ಬಿನ್ ಜುಬೀರ್ (23) ಬಂಧಿತ ಆರೋಪಿಗಳು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**